ಸಂಪುಟ: 01 VOLUVE 01 | ಸಂಚಿಕೆ: 55 ISSUE: 55 | ಪುಟ: 06 PAGE: 06 | ಭಾನುವಾರ 06-09-2026 SUNDAY 06-09-2026
VD
REG-PRGI NO KNKAN/26/A5239 ಮೊ: 9880010077
vkbharath25@gmail.com

# ವಿಜಯ ದುಂಬಿ

VIJAYA DUMBI KANNADA DAILY
ವಿಶ್ವಾಸದ ಕನ್ನಡಿ
ಕನ್ನಡ ದಿನಪತ್ರಿಕೆ
Rs.3/-

2 ಸಹೋದರತ್ವದ ಜೊತೆಗೆ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು : ಲಕ್ಷ್ಮೀನಾರಾಯಣ್

4 ಚೇರ್ಮನ್ ಕ್ಲಬ್ ಮೇಲೆ ಆಹಾರ ಸುರಕ್ಷತಾ ಇಲಾಖೆ ದಾಳಿ: ಕೊಳೆತ ಮೆಣಸಿನಕಾಯಿ ಪತ್ತೆ

6 ವಿಜಯ್ ಪ್ರಧಾನಿ ಅಭ್ಯರ್ಥಿ ವಿಚಾರ : ಕಾಂಗ್ರೆಸ್-ಟಿವಿಕೆ ನಡುವೆ ಹೆಚ್ಚಿದ ಸಂಘರ್ಷ, ಸೆ.9ರ ಸಮನ್ವಯ ಸಭೆ

# ಕೂಡ್ಲಿಗಿಯಲ್ಲಿ 'ಪ್ರಜಾ ಸೇವೆ'ಗೆ ಸಿಎಂ ಚಾಲನೆ,
# ಜನರ ಬಳಿಗೆ ಬರಲಿದೆ ಸರ್ಕಾರ

ವಿಜಯನಗರ: ಜನರು ಸರ್ಕಾರದ ಬಳಿಗೆ ಬರುವ ಕಾಲ ಹೋಗಿದ್ದು, ಇನ್ನು ಮುಂದೆ ಸರ್ಕಾರವೇ ಜನರ ಬಳಿಗೆ ಬರಲಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.ಕೂಡ್ಲಿಗಿಯಲ್ಲಿ ರಾಜ್ಯಮಟ್ಟದ ಪ್ರಜಾಸೇವಾ ಇಲಾಖೆ ಉದ್ಘಾಟಿಸಿ ಮಾತನಾಡಿದ ಅವರು, ಅಧಿಕಾರಿಗಳು ಜನರ ಮಧ್ಯೆ ಇದ್ದು ಕೆಲಸ ಮಾಡಬೇಕು.

ತಾಲ್ಲೂಕು ಮಟ್ಟದ ಅಧಿಕಾರಿಗಳು ಪಂಚಾಯಿತಿ ಮಟ್ಟದಲ್ಲಿ ಸಭೆ ನಡೆಸಿ, ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಲು ಪ್ರಯತ್ನಿಸಬೇಕು ಎಂದು ಸೂಚಿಸಿದರು. ಪ್ರಜೆಗಳ ಬದುಕಿನಲ್ಲಿ ಬದಲಾವಣೆ ತರುವ ಉದ್ದೇಶದಿಂದ ಪ್ರಜಾಸೇವಾ ಇಲಾಖೆಯನ್ನು ಆರಂಭಿಸಲಾಗಿದೆ. ಪ್ರಜಾಸೇವಾ ಆಂದೋಲನದ ಮೂಲಕ ಜನರ ಸಮಸ್ಯೆಗಳನ್ನು ಆಲಿಸಿ ಪರಿಹರಿಸುವುದು ಇದರ ಪ್ರಮುಖ ಉದ್ದೇಶವಾಗಿದೆ.




ಮುಖ್ಯಮಂತ್ರಿ, ಸಚಿವರು, ಶಾಸಕರು ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ಭೇಟಿಯಾದರೂ ಸಮಸ್ಯೆ ಬಗೆಹರಿಯದ ಜನರ ಅನುಕೂಲಕ್ಕಾಗಿ ಈ ವ್ಯವಸ್ಥೆ ರೂಪಿಸಲಾಗಿದೆ. ಸರ್ಕಾರಿ ಕಚೇರಿಗಳಿಗೆ ಜನರು ಅಲೆದಾಡುವುದನ್ನು ತಪ್ಪಿಸುವುದು ಇದರ ಉದ್ದೇಶ ಎಂದರು.

ಜಿಲ್ಲಾ ಸಚಿವರು ಜಿಲ್ಲಾ ಮಟ್ಟದಲ್ಲಿ ಪ್ರಜಾಸೇವಾ ಆಂದೋಲನಕ್ಕೆ ಚಾಲನೆ ನೀಡಿದ್ದು, ಸಚಿವರು ಜಿಲ್ಲೆ, ತಾಲ್ಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಸಭೆಗಳನ್ನು ನಡೆಸಬೇಕು. ಶಾಸಕರು ಪಂಚಾಯಿತಿ ಮಟ್ಟದಲ್ಲಿ ಸಭೆ ನಡೆಸಬೇಕು. ಒಂದು ವೇಳೆ ಶಾಸಕರು ಸಭೆ ನಡೆಸದಿದ್ದರೆ ಅಧಿಕಾರಿಗಳೇ ಪಂಚಾಯಿತಿ ಮಟ್ಟದಲ್ಲಿ ಸಭೆ ನಡೆಸಿ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸುವಂತೆ ಸೂಚಿಸಿದ್ದೇನೆ ಎಂದು ಹೇಳಿದರು.ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಮಾದರಿಯಲ್ಲೇ ಪ್ರಜಾಸೇವೆಯೂ ದೇಶಕ್ಕೆ ಮಾದರಿಯಾಗಲಿದೆ ಎಂದು ಶಿವಕುಮಾರ್ ವಿಶ್ವಾಸ ವ್ಯಕ್ತಪಡಿಸಿದರು.

'ಪ್ರಜಾಸೇವೆ ಕ್ರಾಂತಿಗೆ ಕಾರಣವಾಗಲಿ' ಮುಖ್ಯಮಂತ್ರಿಗಳ ಸಲಹೆಗಾರ ಜಿ.ಸಿ. ಚಂದ್ರಶೇಖರ್ ಮಾತನಾಡಿ, ಪ್ರಜಾಸೇವಾ ಇಲಾಖೆ

4ನೇ ಪುಟಕ್ಕೆ

## ಮೂಳಲಿಂಗ ದೇವಸ್ಥಾನ ಜೀರ್ಣೋದ್ಧಾರ ಮತ್ತು ಅದ್ದೂರಿ ಕಳಸಾರೋಹಣ

ವಿಜಯ ದುಂಬಿ ಸುದ್ದಿ....

**ಬೀದರ್: ಜಿಲ್ಲೆಯ ಭಾಲ್ಕಿ ತಾಲೂಕಿನ ಖಾನಾಪುರ ಗ್ರಾಮದಲ್ಲಿನ ಶ್ರೀ ಕ್ಷೇತ್ರ ಮೈಲಾರ ಮಲ್ಲಣ್ಣಾ ದೇವಸ್ಥಾನದ ಮೂಳಲಿಂಗ ಜ್ಯೋತಿರ್ಲಿಂಗ ದೇವಾಲಯಕ್ಕೆ ಜೀರ್ಣೋದ್ಧಾರ ಮಾಡಿ ಕಳಸಾರೋಹಣ ಮಾಡಿದರು.**





ಬೆಳಿಗ್ಗೆ ಬ್ರಹ್ಮ ಮುಹೂರ್ತದಲ್ಲಿ ಜ್ಯೋತಿರ್ಲಿಂಗಕ್ಕೆ ರುದ್ರಾಭಿಷೇಕ ಮಾಡುವ ಮೂಲಕ ದಿನ ಪ್ರಾರಂಭಿಸಿದರು ನಂತರ ಸಾವಿರಾರು ಭಕ್ತಾದಿಗಳು ವಗ್ಗಯ್ಯರು, ವಾರುಗಳು, ಗ್ರಾಮಸ್ಥರು, ಕಳಸವನ್ನು, ಮೆರವಣಿಗೆ ಮೂಲಕ ಡೊಳ್ಳು ಕುಣಿತ, ಕೋಲಾಟ, ವಗ್ಗಯ್ಯರ ಜಾನಪದ ಮೈಲಾರಲಿಂಗನ ಹಾಡುಗಳು, ಬಾಜ ಭಜಂತ್ರಿಗಳ ಮೂಲಕ. ತೆಪ್ಪ ಕುಂಡ ತೆರಳಿ ಅಲ್ಲಿ ತೆಪ್ಪವನ್ನು ಬಿಟ್ಟು, ನಂತರ ಘೃತಮಾರಿ ದೇವಸ್ಥಾನ, ಮೈಲಾರ ಮಲ್ಲಣ್ಣಾ ದೇವಸ್ಥಾನದ ಮೂಲಕ ಮೂಳಲಿಂಗ ಜ್ಯೋತಿರ್ಲಿಂಗ ದೇವಾಲಯಕ್ಕೆ ತೆರಳಿ ವಿಧಿಯುಕ್ತ ಪೂಜೆ ಸಲ್ಲಿಸಿ, ಕಳಸಾರೋಹಣ ಮಾಡಿದರು . ನಂತರ ಮಹಾ ಪ್ರಸಾದ ವಿತರಿಸಲಾಯಿತು. ಈ ಸಂದರ್ಭದಲ್ಲಿ ಪೂಜ್ಯರಾದ ಜಗದೀಶ್ವರಿ ಮಾತಾ, ದೇವಸ್ಥಾನದ ಪ್ರಧಾನ ಅರ್ಚಕ ಬಸಪ್ಪಾ ಹಿರಿವಗ್ಗೆ, ಮಲ್ಲಿಕಾರ್ಜುನ ಹಿರಿವಗ್ಗೆ, ಪ್ರಕಾಶ್ ಹಿರಿವಗ್ಗೆ, ವೇದ ಪಂಡಿತರಾದ ರೂಪೇಶ ಮಹಾರಾಜ ಭಾಲ್ಕಿ ದೇವಸ್ಥಾನ ಕಾರ್ಯನಿರ್ವಾಹಕ ಅಧಿಕಾರಿ, ಅನಂತರಾವ ಕುಲಕರ್ಣಿ, ಕಾರ್ಯದರ್ಶಿ ಸಂಜು ಕುಮಾರ್ ಸುಂದಾಳ, ವ್ಯವಸ್ಥಾಪಕ ಶಿವಶರಣಪ್ಪ ವಗ್ಗೆ, ಗ್ರಾಮದ ಹಿರಿಯ ಮುಖಂಡ ಸಂಗಮೇಶ್ವರ ಪಾಟೀಲ, ಮಾರುತಿ ಪಾಟೀಲ, ಶಾಮರಾವ್ ಪಾಟೀಲ, ಅಮರೇಶ್ವರ ಪಾಟೀಲ ರಾಜಕುಮಾರ ಪಾಟೀಲ, ಪ್ರೇಮಸಾಗರ ಪಾಟೀಲ, ಮಲ್ಲಿಕಾರ್ಜುನ ಕೋಟಿ, ಸಾವಿರಾರು ಭಕ್ತಾದಿಗಳು ಇದ್ದರು.

# ಶ್ರೀ ಕೃಷ್ಣನ ಜೀವನ ಮತ್ತು ಭಗವದ್ಗೀತೆ ಯುವಪೀಳಿಗೆ ಅರಿತುಕೊಳ್ಳಬೇಕು

ವಿಜಯ ದುಂಬಿ ಸುದ್ದಿ....

**ರಬಕವಿ ಬನಹಟ್ಟಿಯ: ನಗರದ ತಹಶೀಲ್ದಾರ ಕಚೇರಿಯಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಅಂಗವಾಗಿ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮವನ್ನು ಭಕ್ತಿಭಾವದಿಂದ ಆಚರಿಸಲಾಯಿತು.**

ಈ ಸಂದರ್ಭದಲ್ಲಿ ಶ್ರೀಕೃಷ್ಣನ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ನೆರವೇರಿಸಿದ ರಬಕವಿ ಬನಹಟ್ಟಿಯ ತಹಶೀಲ್ದಾರ ಗಿರೀಶ ಸ್ವಾದಿ ಅಧಿಕಾರಿಗಳು ಹಾಗೂ ಬ್ರಾಹ್ಮಣ ಸಮಾಜದ ಹಿರಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿ



ಶ್ರೀಕೃಷ್ಣನಿಗೆ ಭಕ್ತಿಪೂರ್ವಕ ನಮನ ಸಲ್ಲಿಸಿದರು.

ಶ್ರೀಕೃಷ್ಣನ ಜೀವನ ಸಂದೇಶ, ಧರ್ಮ ಹಾಗೂ ಸತ್ಯದ ಮಾರ್ಗದಲ್ಲಿ ಸಾಗುವ ಪ್ರೇರಣೆಯಾಗಿದೆ. ಶ್ರೀಕೃಷ್ಣನು ಕೇವಲ ದೇವರ್ಗಿ ಮಾತ್ರವಲ್ಲ ಧರ್ಮ ನೀತಿ ಪ್ರೇಮ ಮತ್ತು ಕರ್ತವ್ಯದ ಸಂದೇಶವನ್ನು ಜಗತ್ತಿಗೆ ಸಾರಿದ ಮಹಾನ್ ದಾರ್ಶನಿಕನಾಗಿ ನಮ್ಮೆಲ್ಲರಿಗೂ ಆದರ್ಶವಾಗಿದ್ದಾನೆ ಎಂದು ಗಿರೀಶ ಸ್ವಾದಿ ಹೇಳಿದರು.. ಮಹಾಭಾರತದ ಸಂದರ್ಭದಲ್ಲಿ ಅರ್ಜುನನಿಗೆ ಶ್ರೀಕೃಷ್ಣನು ನೀಡಿದ ಭಗವದ್ಗೀತೆಯ ಉಪದೇಶ ಇಂದಿಗೂ ಇಡಿ ಮನುಕುಲಕ್ಕೆ ದಾರಿದೀಪವಾಗಿದೆ. "ಕರ್ಮ ಮಾಡು ಫಲದ ಬಗ್ಗೆ ಚಿಂತಿಸಬೇಡ " ಎಂಬ ಸಂದೇಶ ನಮ್ಮ ಜೀವನದಲ್ಲಿ ಕರ್ತವ್ಯ ನಿಷ್ಠೆ ಮತ್ತು ಆತ್ಮವಿಶ್ವಾಸ ವನ್ನು ಬೆಳೆಸುತ್ತದೆ ಎಂದು ಡಾ ಬಿ ಎನ್ ಬಾಗಲಕೋಟ ಹೇಳಿದರು. ಮತ್ತು ಸರಳ ಹಾಗೂ ಶ್ರದ್ಧಾಭಕ್ತಿಯಿಂದ ನಡೆದ ಜನ್ಮಾಷ್ಟಮಿ ಆಚರಣೆ ಗಮನ ಸೆಳೆಯಿತು.

ಉಪಸ್ಥಿತಿಯಲ್ಲಿ ಕಂದಾಯ ನೀರಿಕ್ಷಕರು ಪ್ರಕಾಶ ಮಠಪತಿ ಗ್ರಾಮ ಆಡಳಿತ ಅಧಿಕಾರಿಗಳು ಸದಾಶಿವ ಕುಂಬಾರ ಚೇತನ ಬಜಂತ್ರಿ ಅಲಿಸಾಬ ತಾಂಬೋಳಿ ರವಿ ಹುಲ್ಲನ್ನವರ ಸಂಗಮೇಶ ಸಜ್ಜನ ಪ್ರಕಾಶ ವಂದಾಲ ಬೋರಗಿ ನಾಯಕ ಪ್ರಸನ್ನ ಮಮದಾಪೂರ ಶ್ರೀಪಾದ ಬಾಗಲಕೋಟ ಚೇತನ ಮಮದಾಪೂರ ರಾಜು ಕುಲಕರ್ಣಿ ರೀಜು ಯಾದವಾಡ ಅನಿಲ ಶುಕ್ಲೆ ರಾಜು ಶಾಸ್ತ್ರಿಗೊಲರ ಮುಂತಾದವರು ಹಾಜರಿದ್ದರು.

## ಶ್ರೀ ಕೃಷ್ಣನ ಜೀವನ ಮತ್ತು ಭಗವದ್ಗೀತೆ ಯುವಪೀಳಿಗೆ ಅರಿತುಕೊಳ್ಳಬೇಕು

ವಿಜಯ ದುಂಬಿ ಸುದ್ದಿ....

**ರಬಕವಿ ಬನಹಟ್ಟಿಯ: ನಗರದ ತಹಶೀಲ್ದಾರ ಕಚೇರಿಯಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಅಂಗವಾಗಿ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮವನ್ನು ಭಕ್ತಿಭಾವದಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಶ್ರೀಕೃಷ್ಣನ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ನೆರವೇರಿಸಿದ ರಬಕವಿ ಬನಹಟ್ಟಿಯ ತಹಶೀಲ್ದಾರ ಗಿರೀಶ ಸ್ವಾದಿ ಅಧಿಕಾರಿಗಳು ಹಾಗೂ ಬ್ರಾಹ್ಮಣ ಸಮಾಜದ ಹಿರಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿ ಶ್ರೀಕೃಷ್ಣನಿಗೆ ಭಕ್ತಿಪೂರ್ವಕ ನಮನ ಸಲ್ಲಿಸಿದರು.**



ಶ್ರೀಕೃಷ್ಣನ ಜೀವನ ಸಂದೇಶ, ಧರ್ಮ ಹಾಗೂ ಸತ್ಯದ ಮಾರ್ಗದಲ್ಲಿ ಸಾಗುವ ಪ್ರೇರಣೆಯಾಗಿದೆ. ಶ್ರೀಕೃಷ್ಣನು ಕೇವಲ ದೇವರ್ಗಿ ಮಾತ್ರವಲ್ಲ ಧರ್ಮ ನೀತಿ ಪ್ರೇಮ ಮತ್ತು ಕರ್ತವ್ಯದ ಸಂದೇಶವನ್ನು ಜಗತ್ತಿಗೆ ಸಾರಿದ ಮಹಾನ್ ದಾರ್ಶನಿಕನಾಗಿ ನಮ್ಮೆಲ್ಲರಿಗೂ ಆದರ್ಶವಾಗಿದ್ದಾನೆ ಎಂದು ಗಿರೀಶ ಸ್ವಾದಿ ಹೇಳಿದರು.. ಮಹಾಭಾರತದ ಸಂದರ್ಭದಲ್ಲಿ ಅಜು9ನನಿಗೆ ಶ್ರೀಕೃಷ್ಣನು ನೀಡಿದ ಭಗವದ್ಗೀತೆಯ ಉಪದೇಶ ಇಂದಿಗೂ ಇಡಿ ಮನುಕುಲಕ್ಕೆ ದಾರಿದೀಪವಾಗಿದೆ. "ಕರ್ಮ ಮಾಡು ಫಲದ ಬಗ್ಗೆ ಚಿಂತಿಸಬೇಡ " ಎಂಬ ಸಂದೇಶ ನಮ್ಮ ಜೀವನದಲ್ಲಿ ಕರ್ತವ್ಯ ನಿಷ್ಠೆ ಮತ್ತು ಆತ್ಮವಿಶ್ವಾಸ ವನ್ನು ಬೆಳೆಸುತ್ತದೆ ಎಂದು ಡಾ ಬಿ ಎನ್ ಬಾಗಲಕೋಟ ಹೇಳಿದರು. ಮತ್ತು ಸರಳ ಹಾಗೂ ಶ್ರದ್ಧಾಭಕ್ತಿಯಿಂದ ನಡೆದ ಜನ್ಮಾಷ್ಟಮಿ ಆಚರಣೆ ಗಮನ ಸೆಳೆಯಿತು. ಉಪಸ್ಥಿತಿಯಲ್ಲಿ ಕಂದಾಯ ನೀರಿಕ್ಷಕರು ಪ್ರಕಾಶ ಮಠಪತಿ ಗ್ರಾಮ ಆಡಳಿತ ಅಧಿಕಾರಿಗಳು ಸದಾಶಿವ ಕುಂಬಾರ ಚೇತನ ಬಜಂತ್ರಿ ಅಲಿಸಾಬ ತಾಂಬೋಳಿ ರವಿ ಹುಲ್ಲನ್ನವರ ಸಂಗಮೇಶ ಸಜ್ಜನ ಪ್ರಕಾಶ ವಂದಾಲ ಬೋರಗಿ ನಾಯಕ ಪ್ರಸನ್ನ ಮಮದಾಪೂರ ಶ್ರೀಪಾದ ಬಾಗಲಕೋಟ ಚೇತನ ಮಮದಾಪೂರ ರಾಜು ಕುಲಕರ್ಣಿ ರೀಜು ಯಾದವಾಡ ಅನಿಲ ಶುಕ್ಲೆ ರಾಜು ಶಾಸ್ತ್ರಿಗೊಲರ ಮುಂತಾದವರು ಹಾಜರಿದ್ದರು.

# ಜಿಲ್ಲಾ ಉಸ್ತುವಾರಿ ಸಚಿವರಿಂದ 'ಪ್ರಜಾಸೇವಾ ಆಂದೋಲನ'ಕ್ಕೆ ಚಾಲನೆ

## ಕಾಲಮಿತಿಯೊಳಗೆ ಸಾರ್ವಜನಿಕರ ಅರ್ಜಿ ವಿಲೇವಾರಿಗೆ ಕೆ.ಹೆಚ್. ಮುನಿಯಪ್ಪ ಸೂಚನ



ವಿಜಯ ದುಂಬಿ ಸುದ್ದಿ....

**ದೇವನಹಳ್ಳಿ: ಪ್ರಜಾ ಸೇವಾ ಆಂದೋಲನದ ಮೂಲಕ ಜನರಿಂದ ಸ್ವೀಕರಿಸುವ ಅರ್ಜಿಗಳಿಗೆ ಕಾನೂನು ವ್ಯಾಪ್ತಿ ಹೊರತುಪಡಿಸಿ, ಉಳಿದವುಗಳನ್ನು ನಿಗದಿತ ಕಾಲಮಿತಿಯೊಳಗೆ ಇತ್ಯರ್ಥಪಡಿಸಲಾಗುವುದು ಎಂದು ಸಮಾಜ ಕಲ್ಯಾಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ ತಿಳಿಸಿದರು.**

ತಾಲ್ಲೂಕಿನ ವಿಜಯಪುರ ಪಟ್ಟಣದ ಅನ್ನಪೂರ್ಣೇಶ್ವರಿ ಕಲ್ಯಾಣ ಮಂಟಪದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಪ್ರಜಾ ಸೇವಾ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ತಾಲ್ಲೂಕು ಮಟ್ಟದ ಪ್ರಜಾ ಸೇವಾ ಆಂದೋಲನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜನರು ಸರ್ಕಾರಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿ, ಒಂದೇ ಸೂರಿನಡಿ ತ್ವರಿತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಪ್ರಜಾ ಸೇವಾ ಇಲಾಖೆ ಕಾರ್ಯನಿರ್ವಹಿಸುತ್ತಿದೆ.

ಸಾರ್ವಜನಿಕರ ಸ್ಥಳೀಯ ಸಮಸ್ಯೆಗಳನ್ನು ಸ್ಥಳದಲ್ಲೇ ಇತ್ಯರ್ಥಪಡಿಸಲು ಪ್ರತಿ ಶನಿವಾರ ಪ್ರಜಾ ಸೇವಾ ಆಂದೋಲನ ಸಭೆ ನಡೆಯಲಿದ್ದು, ಹೋಬಳಿ ಮಟ್ಟದಲ್ಲೂ ಶಾಸಕರ ಅಧ್ಯಕ್ಷತೆಯಲ್ಲಿ ಈ ಕಾರ್ಯಕ್ರಮ ಆಯೋಜನೆಯಾಗಲಿದೆ ಎಂದರು. ಪಿಂಚಣಿ, ವಸತಿ, ಜಮೀನು, ಪೋಡಿ, ಖಾತೆ ಬದಲಾವಣೆ, ರಸ್ತೆ, ಪೊಲೀಸ್ ಸೇವೆ, ಗ್ಯಾರಂಟಿ ಯೋಜನೆಗಳು ಸೇರಿದಂತೆ ವಿವಿಧ ಸಮಸ್ಯೆಗಳಿಗೆ ಸಾರ್ವಜನಿಕರು ಆಂದೋಲನದಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಅಧಿಕಾರಿಗಳು ಸಾರ್ವಜನಿಕರ ದೂರುಗಳನ್ನು ವಿಳಂಬ ಮಾಡದೆ ನಿಯಮಾನುಸಾರ ಪರಿಶೀಲಿಸಿ ಸೂಕ್ತ ಪರಿಹಾರ ಒದಗಿಸಬೇಕು ಎಂದು ಅವರು ಸೂಚಿಸಿದರು.

**ಫಲಾನುಭವಿಗಳಿಗೆ ಸವಲತ್ತು ವಿತರಣೆ**

ಕಾರ್ಯಕ್ರಮದಲ್ಲಿ ಭಾಗ್ಯಲಕ್ಷ್ಮಿ ಯೋಜನೆಯ ಬಾಂಡ್, ಗ್ಯಾರಂಟಿ ಜಾಬ್ ಕಾರ್ಡ್, ಕೃಷಿ ಹಾಗೂ ತೋಟಗಾರಿಕೆ ಇಲಾಖೆಯ ಹನಿ ನೀರಾವರಿ ಸವಲತ್ತು, ಸಾಮಾಜಿಕ ಭದ್ರತಾ ಪಿಂಚಣಿ ಮತ್ತು ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಯಿತು. ಸಮಾರಂಭದಲ್ಲಿ ಜಿಲ್ಲಾಧಿಕಾರಿ ಡಾ. ಕೆ. ಎನ್. ಅನುರಾಧ, ಜಿ.ಪಂ. ಸಿಇಒ ಡಾ. ವಾಸಂತಿ ಅಮರ್, ಎಸ್‌ಪಿ ಚಂದ್ರಕಾಂತ್, ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ರಾಜಣ್ಣ, ವಿಜಯಪುರ ಪುರಸಭೆ ಅಧ್ಯಕ್ಷೆ ಭವ್ಯ ಮಹೇಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಪರಪ್ಪನ ಅಗ್ರಹಾರ ಹಲ್ಲೆ, ಕೆಪಿಎಸ್‌ಸಿ ತನಿಖೆ ಹಾಗೂ ಮನ್ ಕೀ ಬಾತ್ ವಿಚಾರ ಸಚಿವ ಪ್ರಿಯಾಂಕ್ ಖರ್ಗೆ

ವಿಜಯ ದುಂಬಿ ಸುದ್ದಿ....

**ಕಲಬುರಗಿ: ಪರಪ್ಪನ ಅಗ್ರಹಾರ ಜೈಲಿನಲ್ಲಿ ಸಿಬ್ಬಂದಿ ಮೇಲೆ ನಡೆದ ಹಲ್ಲೆ ಪ್ರಕರಣ, ಕೆಪಿಎಸ್‌ಸಿ ಹಗರಣದ ತನಿಖೆ ಹಾಗೂ ಮನ್ ಕೀ ಬಾತ್‌ಗೆ ಸಂಬಂಧಿಸಿದಂತೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಮಾಧ್ಯಮಗಳೊಂದಿಗೆ ಮಾತನಾಡಿ ಹಲವು ಪ್ರಮುಖ ವಿಷಯಗಳನ್ನು ಸ್ಪಷ್ಟಪಡಿಸಿದ್ದಾರೆ.**

ಜೈಲು ಸಿಬ್ಬಂದಿ ಮೇಲಿನ ಹಲ್ಲೆ ಹಾಗೂ ಸುಧಾರಣೆ ಕ್ರಮಗಳು ಪರಪ್ಪನ ಅಗ್ರಹಾರ ಜೈಲಿನಲ್ಲಿ ಕೆಲ ಕೈದಿಗಳು ತೀವ್ರ ದುಶ್ಚಟಕ್ಕೆ ಒಳಗಾಗಿರುತ್ತಾರೆ. ಅವರಿಗೆ ಗುಟ್ಕಾ, ತಂಬಾಕು, ಗಾಂಜಾದಂತಹ ಪದಾರ್ಥಗಳು ಸಿಗದಿದ್ದಾಗ ಈ ರೀತಿ ಹಿಂಸಾತ್ಮಕವಾಗಿ ವರ್ತಿಸುತ್ತಾರೆ. ಕೌನ್ಸಿಲಿಂಗ್ ಹಾಗೂ ನಿಗಾ: ಇಂತಹ ಕೈದಿಗಳಿಗೆ ಕಾಲಕಾಲಕ್ಕೆ ಕೌನ್ಸಿಲಿಂಗ್ ನಡೆಸಲಾಗುತ್ತದೆ. ಹಿತೇಂದ್ರ ಸಮಿತಿ ವರದಿಯ ಪ್ರಕಾರ ಕೈದಿಗಳ ಮಾನಸಿಕ ಸ್ಥಿತಿಗತಿ ಹಾಗೂ ಭದ್ರತೆಯ ಮೇಲೆ ಕಟ್ಟುನಿಟ್ಟಿನ ನಿಗಾ ವಹಿಸಲಾಗುತ್ತಿದೆ. ಸುರಕ್ಷತೆ ಹೆಚ್ಚಳ: ಜೈಲಿನ ಗೋಡೆಗಳ ಎತ್ತರವನ್ನು



ಹೆಚ್ಚಿಸುವುದು ಹಾಗೂ ಜೈಲು ಸಿಬ್ಬಂದಿಯ ಸಂಖ್ಯೆಯನ್ನು ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುವುದು.

ತನಿಖೆಗೆ ಆದೇಶ: ಸಿಬ್ಬಂದಿ ಮೇಲೆ ಯಾವ ಕಾರಣಕ್ಕೆ ಹಲ್ಲೆ ನಡೆದಿದೆ ಎಂಬುದರ ಬಗ್ಗೆ ಸಮಗ್ರ ತನಿಖೆ ನಡೆಸಲಾಗುವುದು.

ಹೊಸ ಕಾರಾಗೃಹ ನಿರ್ಮಾಣ:ಪ್ರಸ್ತುತ ಪರಪ್ಪನ ಅಗ್ರಹಾರದಲ್ಲಿ ಕೈದಿಗಳ ಸಂಖ್ಯೆ ಹೆಚ್ಚಾಗಿದೆ. ಈ ಸಮಸ್ಯೆಗೆ ಪರಿಹಾರವಾಗಿ ನಾಲ್ಕೈದು ಹೊಸ ಕಾರಾಗೃಹಗಳ ನಿರ್ಮಾಣ ಕಾರ್ಯ ನಡೆಯುತ್ತಿದ್ದು, ಹೊಸ ಜೈಲುಗಳಿಗೆ ಕೈದಿಗಳನ್ನು ಸ್ಥಳಾಂತರಿಸಿದಾಗ ಇಂತಹ ಘಟನೆಗಳಿಗೆ ಮುಕ್ತಿ ಸಿಗಲಿದೆ.

ಮನ್ ಕೀ ಬಾತ್ ಇಡ್ಲಿ ಬಂಡಿ ಸ್ಥಳಾಂತರ ವಿಚಾರ ಬೆಂಗಳೂರಿನಲ್ಲಿ ಮನ್ ಕೀ ಬಾತ್‌ನಲ್ಲಿ ಪ್ರಸ್ತಾಪವಾದ ಇಡ್ಲಿ ಬಂಡಿ ಸ್ಥಳಾಂತರದ ಕುರಿತು ಪ್ರತಿಕ್ರಿಯಿಸಿದ ಸಚಿವರು, "ಪ್ರಧಾನಿ ಮೋದಿಯವರು ಮನ್ ಕೀ ಬಾತ್‌ನಲ್ಲಿ ಮಾತನಾಡಿದ ತಕ್ಷಣ ಕಾನೂನು ಅಥವಾ ನಿಯಮಗಳನ್ನು ಬದಲಾಯಿಸಲು ಬರುವುದಿಲ್ಲ. ಸಾರ್ವಜನಿಕ ಸ್ಥಳಗಳಿಂದ ಗುಡಂಗಿ ಹಾಗೂ ಅಂಗಡಿಗಳನ್ನು ತೆರವುಗೊಳಿಸುವುದು ಸಾಮಾನ್ಯ ಪ್ರಕ್ರಿಯೆ. ಇಲ್ಲದಿದ್ದರೆ ಸಾರ್ವಜನಿಕರಿಗೆ ತೊಂದರೆಯಾಗುತ್ತದೆ" ಎಂದು ಹೇಳಿದರು.

ಶ್ರೀರಾಮುಲು ಆರೋಪಕ್ಕೆ ಪ್ರಿಯಾಂಕ್ ಖರ್ಗೆ ತಿರುಗೇಟು "ಕೆಪಿಎಸ್‌ಸಿ ಹಗರಣದಲ್ಲಿ ಪ್ರಿಯಾಂಕ್ ಖರ್ಗೆ ಜೈಲಿಗೆ ಹೋಗಲಿದ್ದಾರೆ" ಎಂಬ ಬಿಜೆಪಿ ನಾಯಕ ಬಿ. ಶ್ರೀರಾಮುಲು ಹೇಳಿಕೆಗೆ ಸಚಿವರು ಖಾರವಾಗಿ ತಿರುಗೇಟು ನೀಡಿದ್ದಾರೆ. ಸವಾಲು: "ಶ್ರೀರಾಮುಲು ಅವರಿಗೆ ಮೊದಲು ಕೆಪಿಎಸ್‌ಸಿ (KPSC) ಫುಲ್‌ಫಾರ್ಮ್ ಹೇಳಲು ತಿಳಿಸಿ, ಜೊತೆಗೆ ಸರಿಯಾಗಿ ಕನ್ನಡ ಮಾತನಾಡಲು ಹೇಳಿ" ಎಂದು ವ್ಯಂಗ್ಯವಾಡಿದರು. ಚುನಾವಣಾ ಇತಿಹಾಸ: "ನಾನು ಒಂದೇ ಕ್ಷೇತ್ರದಲ್ಲಿ ನಾಲ್ಕು ಬಾರಿ ಹಾಗೂ ಮಲ್ಲಿಕಾರ್ಜುನ ಖರ್ಗೆಯವರು ಒಂದೇ ಕ್ಷೇತ್ರದಲ್ಲಿ ಒಂಬತ್ತು ಬಾರಿ ಸ್ಪರ್ಧಿಸಿ ಗೆದ್ದಿದ್ದೇವೆ.

ಆದರೆ ಶ್ರೀರಾಮುಲು ಅವರು ಜನರಿಂದ ತಿರಸ್ಕಾರಗೊಂಡು ಬೇರೆ ಬೇರೆ ಕ್ಷೇತ್ರಗಳಲ್ಲಿ ಸ್ಪರ್ಧಿಸಿದ್ದಾರೆ" ಎಂದರು. ತನಿಖೆ ಡೈವರ್ಟ್ ಆಗಲ್ಲ: "ನಾನು ಗೃಹ ಸಚಿವನಾಗಿರುವವರೆಗೂ ಕೆಪಿಎಸ್‌ಸಿ ಹಗರಣದ ತನಿಖೆಯನ್ನು ಯಾವುದೇ ಕಾರಣಕ್ಕೂ ಬೇರೆಡೆಗೆ ಡೈವರ್ಟ್ ಮಾಡಲು ಬಿಡುವುದಿಲ್ಲ. ಈ ಪ್ರಕರಣದಲ್ಲಿ ಬಲವಾದ ಸಾಕ್ಷ್ಯಾಧಾರಗಳಿವೆ. ಯುವಕರ ಭವಿಷ್ಯದ ಜೊತೆ ಚೆಲ್ಲಾಟವಾಡಲು ನಾವು ಬಿಡುವುದಿಲ್ಲ" ಎಂದು ಭರವಸೆ ನೀಡಿದರು. **ಫಾಸ್ಟ್‌ಟ್ರ್ಯಾಕ್ ಕೋರ್ಟ್:** ಫಾಸ್ಟ್‌ಟ್ರ್ಯಾಕ್ ಕೋರ್ಟ್ ಸ್ಥಾಪನೆಗೆ ಸಂಬಂಧಿಸಿದಂತೆ ಯಾವುದೇ ಆತಂಕ ಬೇಡ, ಈ ಬಗ್ಗೆ ಶೀಘ್ರದಲ್ಲೇ ಮುಖ್ಯಮಂತ್ರಿಗಳ ಜೊತೆ ಚರ್ಚಿಸಲಾಗುವುದು ಎಂದು ಹೇಳಿದರು.

# ಕ್ಷೇತ್ರದಲ್ಲಾಗುತ್ತಿರುವ ಅಭಿವೃದ್ಧಿ ಕಾರ್ಯಗಳಿಗೆ ಸಿದ್ಧಗಂಗಾ ಶ್ರೀಗಳ ಶ್ಲಾಘನೆ

## 39 ಮಂದಿ ಆದರ್ಶ ಶಿಕ್ಷಕರಿಗೆ 'ಸದಾಶಿವ ಗುರುಶ್ರೀ' ಪ್ರಶಸ್ತಿ ಪ್ರದಾನ

ವಿಜಯ ದುಂಬಿ ಸುದ್ದಿ....

**ನೆಲಮಂಗಲ: ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ತಾವು ಶ್ರಮಿಸುತ್ತಿದ್ದು, ಮುಂದಿನ ಒಂದೂವರೆ ವರ್ಷದೊಳಗೆ ನೆಲಮಂಗಲಕ್ಕೆ ಕಾವೇರಿ ನೀರು ತರಲಾಗುವುದು. ಜೊತೆಗೆ ಸೋಂಪುರಕ್ಕೂ ಶಾಶ್ವತ ಕುಡಿಯುವ ನೀರಿನ ಯೋಜನೆಯಾಗಿ ಕಾವೇರಿ ನೀರು ತರಲು ಮುಂದಾಗಿದ್ದೇನೆ ಎಂದು ಶಾಸಕ ಎನ್. ಶ್ರೀನಿವಾಸ್ ತಿಳಿಸಿದರು. ನಗರದ ಪವಾಡ ಬಸವಣ್ಣ ದೇವರ ಮಠದ ಆವರಣದಲ್ಲಿ ಆಯೋಜಿಸಲಾಗಿದ್ದ ಶ್ರೀ ಸದಾಶಿವ ಸ್ವಾಮೀಜಿಗಳ 24ನೇ ಪುಣ್ಯಸ್ಮರಣೋತ್ಸವ ಹಾಗೂ ಆದರ್ಶ ಶಿಕ್ಷಕರಿಗೆ 'ಸದಾಶಿವ ಗುರುಶ್ರೀ ಪ್ರಶಸ್ತಿ' ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು.**

ಸ್ಥಳೀಯ ಯುವಕ-ರಿಗೆ ಉದ್ಯೋಗ ? ಉಖಿಖಿಅ ಕೇಂದ್ರ: ಸ್ಥಳೀಯ ಹಾಗೂ ನಿರುದ್ಯೋಗಿ ಯುವಕ-ರಿಗೆ ಉದ್ಯೋಗಾಧಾರಿತ ತಾಂತ್ರಿಕ ಕೌಶಲ್ಯ ತರಬೇತಿ ನೀಡಲು ರೂ. 60 ರಿಂದ 100 ಕೋಟಿ ಅನುದಾನದಲ್ಲಿ ನೆಲಮಂಗಲಕ್ಕೆ ಜಿಟಿಟಿಸಿ (GTTC) ಕೇಂದ್ರವನ್ನು ಕೆಲವೇ ದಿನಗಳಲ್ಲಿ ಮಂಜೂರು ಮಾಡಿಸಿಕೊಂಡು ಬರಲಾಗುವುದು. ನಗರದ ಒಳಚರಂಡಿ ಯೋಜನೆಗಾಗಿ ರೂ. 365 ಕೋಟಿ ವೆಚ್ಚದ ಡಿಪಿಆರ್ ಸಿದ್ಧವಾಗುತ್ತಿದೆ ಎಂದು ಶಾಸಕರು ಮಾಹಿತಿ ನೀಡಿದರು. ಕ್ಷೇತ್ರಕ್ಕೆ ಶ್ರೀಮಠಗಳ ಕೊಡುಗೆ ಅಪಾರವಾಗಿದ್ದು, ಪೂಜ್ಯರ ಸಲಹೆ-ಸೂಚನೆಗಳು ತಮ್ಮ ಕೆಲಸಕ್ಕೆ ಮತ್ತಷ್ಟು ಬಲ ತಂದಿವೆ ಎಂದರು.



ಶಾಸಕರ ಅಭಿವೃದ್ಧಿ ಕೆಲಸಕ್ಕೆ ಸಿದ್ಧಗಂಗಾ ಶ್ರೀಗಳ ಶ್ಲಾಘನೆ: ಕಾರ್ಯಕ್ರಮ ಉದ್ಘಾಟಿಸಿ ಆಶೀರ್ವಚನ ನೀಡಿದ ತುಮಕೂರು ಸಿದ್ಧಗಂಗಾ ಮಠದ ಶ್ರೀ ಸಿದ್ಧಲಿಂಗ ಮಹಾಸ್ವಾಮೀಜಿಗಳು, ಶಾಸಕ ಎನ್. ಶ್ರೀನಿವಾಸ್ ಅವರು ಮಠ-ಮಾನ್ಯಗಳ ಮೇಲೆ ಅಪಾರ ಗೌರವವಿಟ್ಟುಕೊಂಡು ಕ್ಷೇತ್ರದಲ್ಲಿ ಅನೇಕ ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿರುವುದು ಶ್ಲಾಘನೀಯ. ಕ್ರಿಯಾಶೀಲವಾಗಿ ಕ್ಷೇತ್ರದ ಅಭಿವೃದ್ಧಿ ಬಯಸುವ ಇಂತಹ ಶಾಸಕರು ಸುದೀರ್ಘ ಕಾಲ ಜನಸೇವೆ ಮಾಡಲು ಅವಕಾಶ ಸಿಗಲಿ ಎಂದು ಹಾರೈಸಿದರು. ಇದೇ ವೇಳೆ, ಆಧುನಿಕ ತಂತ್ರಜ್ಞಾನದ ಸಮಾಜದಲ್ಲಿ ಯುವಕರು ಸಂಸ್ಕಾರಯುತ ಜ್ಞಾನದ ದಾಸರಾಗಬೇಕು. ಮಕ್ಕಳಿಗೆ ಗುರು ಮತ್ತು ಸಂಸ್ಕಾರದ ಮಹತ್ವವನ್ನು ತಿಳಿಸಿಕೊಡುವುದು ಅಗತ್ಯ ಎಂದು ಶ್ರೀಗಳು ಕಿವಿಮಾತು ಹೇಳಿದರು.

39 ಶಿಕ್ಷಕರಿಗೆ 'ಸದಾಶಿವ ಗುರುಶ್ರೀ' ಗೌರವ: ಸದಾಶಿವಗುರುಶ್ರೀ ಪ್ರಶಸ್ತಿ : ಶ್ರೀ ಪವಾಡ ಬಸವಣ್ಣ ದೇವರ ಮಠದ ಪೀಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿರವರ ನೇತೃತ್ವದಲ್ಲಿ ಶಿಕ್ಷಕರಾದ ಸಿ.ಪಾಲಯ್ಯ, ಡಾ.ಪಿ ನಾಗೇಂದ್ರಸ್ವಾಮಿ, ಪ್ರಕಾಶ್. ಎಚ್.ಎಸ್, ಎಂ.ಬಿ ಮಹದೇವಯ್ಯ, ಚೇತನಾ. ಎಸ್, ರವಿ.ಜಿ.ಡಿ, ಪರಶಿವಮೂರ್ತಿ, ರಾಮಚಂದ್ರ ತಿಮ್ಮಪ್ಪ ಭಟ್, ಸಿದ್ದರಾಮೇಗೌಡ, ಬಸಪ್ಪ, ನರಸಿಂಹಯ್ಯ, ಶಾರದಮ್ಮ, ಹರ್ಷವರ್ಧನ್, ಕಮಲಾಬಾಯಿ, ಜಿನ್ನಹನುಮಯ್ಯ, ಚೆನ್ನೇಗೌಡ,







ಪ್ರಸನ್ನಕುಮಾರ್, ಸುಧಾಮಣಿ,ನಾರಾಯಣ, ರಾಧಾ, ಮಂಜುನಾಥ್, ರಚನಾ, ಶಾಹಿನಾ ಅಲ್ಲಾಪುರ, ಗೀತಾ, ರೇಣುಕಯ್ಯ, ಅಂಜನಮೂರ್ತಿ, ಪ್ರೀತಿಚೌದರಿ, ಅಕ್ಷತ, ಸಿದ್ದಲಿಂಗಯ್ಯ,ಗೀತಾ, ರುದ್ರಾರಾಧ್ಯ,ಶಶಿಕಲಾ, ಪ್ರಮೀಳಾ, ರೇಣುಕಮ್ಮ, ಪೂಜಗಯ್ಯ, ಸೌಭಾಗ್ಯ,ಸತೀಶ್, ಹೇಮಣ್ಣ, ಮೋಹನ್‌ಕುಮಾರ್ ಸೇರಿದಂತೆ 39 ಶಿಕ್ಷಕ-ರಿಗೆ ಸದಾಶಿವ ಗುರುಶ್ರೀ ಪ್ರಶಸ್ತಿಯನ್ನು ನೀಡಿ ಅಭಿನಂದನೆ ಸಲ್ಲಿಸಲಾಯಿತು. ಸಮಾರಂಭದಲ್ಲಿ ಎನ್‌ಪಿಎ ಅಧ್ಯಕ್ಷ ಎಂ.ಕೆ. ನಾಗರಾಜು, ನಗರಸಭೆ ಅಧ್ಯಕ್ಷ ಎನ್. ಗಣೇಶ್, ಗದ್ದುಗೆಮಠದ ಶ್ರೀ ಮಹಂತಸ್ವಾಮಿ, ಹಿರಿಯ ನ್ಯಾಯವಾದಿ ಲಕ್ಷ್ಮೀನಾರಾಯಣಪ್ಪ, ವೀರಶೈವ ಲಿಂಗಾಯತ ಸಂಘದ ಜಿಲ್ಲಾಧ್ಯಕ್ಷ ರೇವಣಸಿದ್ದಯ್ಯ, ಟಿಎಪಿಸಿಎಂಎಸ್ ಅಧ್ಯಕ್ಷ ಹನುಮಂತರಾಜು ಸೇ-ರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

## ಬೊಲಿವಿಯಾದ ಸೇನಾ ನೆಲೆಯಲ್ಲಿ ಭೀಕರ ಸ್ಫೋಟ : 10ಕ್ಕೂ ಹೆಚ್ಚು ಮಂದಿ ಸಾವು

ವಿಜಯ ದುಂಬಿ ಸುದ್ದಿ....

**ಲಾ ಪಾಜ್: ದಕ್ಷಿಣ ಅಮೆರಿಕದ ಬೊಲಿವಿಯಾದ ರಾಜಧಾನಿ ಲಾ ಪಾಜ್ ಸಮೀಪದ ಸೇನಾ ನೆಲೆಯೊಂದರಲ್ಲಿ ಸಂಭವಿಸಿದ ಭೀಕರ ಸ್ಫೋಟದಲ್ಲಿ ಕನಿಷ್ಠ 10ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದು, 60ಕ್ಕೂ ಅಧಿಕ ಮಂದಿ ಗಾಯಗೊಂಡಿದ್ದಾರೆ. ಪಶ್ಚಿಮ ಬೊಲಿವಿಯಾದ ವಿಯಾಚಾ ನಗರದ ಸೇನಾ ಬ್ಯಾರಕ್‌ನಲ್ಲಿರುವ ಶಸ್ತ್ರಾಸ್ತ್ರ ಸಂಗ್ರಹಣಾ ವಿಭಾಗದಲ್ಲಿ ಈ ಸ್ಫೋಟ ಸಂಭವಿಸಿದೆ. ಸ್ಫೋಟದ ತೀವ್ರತೆಗೆ ಸೇನಾ ನೆಲೆಯ ಸುತ್ತಮುತ್ತಲಿನ ಹಲವು ಮನೆಗಳು ಹಾಗೂ ಕಟ್ಟಡಗಳು ಹಾನಿಗೊಳಗಾಗಿದ್ದು, ಅವಶೇಷಗಳಡಿ ಸಿಲುಕಿರುವ ಇತರ ಏಳು ಮಂದಿಗಾಗಿ ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ.**

ಸ್ಥಳೀಯ ಕಾಲಮಾನ ಮಧ್ಯಾಹ್ನ ಸುಮಾರು 2.30ಕ್ಕೆ



ಪಟಾಕಿ ಹಾಗೂ ಸ್ಫೋಟಕಗಳನ್ನು ಸಂಗ್ರಹಿಸಿಡಲಾಗಿದ್ದ ಗೋದಾಮಿನಲ್ಲಿ ಸ್ಫೋಟ ಸಂಭವಿಸಿದೆ. ಕ್ಷಣಾರ್ಧದಲ್ಲೇ ದಟ್ಟ ಕಪ್ಪು ಹೊಗೆ ಆಕಾಶದೆತ್ತರಕ್ಕೆ ವ್ಯಾಪಿಸಿದ್ದು, ಸ್ಫೋಟದ ಸದ್ದು ಇಡೀ ನಗರವನ್ನು ಬೆಚ್ಚಿಬೀಳಿಸಿದೆ. ಸ್ಥಳೀಯ ಆರೋಗ್ಯ ನಿರ್ದೇಶಕಿ ರೀಟಾ ನೆಬ್ರಸ್ಕಾ ಅವರ ಪ್ರಕಾರ, ಘಟನೆಯಲ್ಲಿ ಇದುವರೆಗೆ 10ಕ್ಕೂ ಹೆಚ್ಚು ಮಂದಿ ಮೃತಪಟ್ಟಿರುವುದು ದೃಢಪಟ್ಟಿದೆ. ಗಾಯಗೊಂಡ 62 ಮಂದಿಯಲ್ಲಿ 52 ಮಂದಿ ನಾಗ-ರಿಕರಾಗಿದ್ದು, ಉಳಿದವರು ಕರ್ತವ್ಯದಲ್ಲಿದ್ದ ಯೋಧರು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪುಟ್ಟ ಬಾಲಕಿ ಸೇರಿದಂತೆ ಸ್ಥಿತಿ ಗಂಭೀರವಾಗಿರುವ 14 ಮಂದಿಯನ್ನು ಹೆಚ್ಚಿನ ಚಿಕಿತ್ಸೆಗಾಗಿ ಲಾ ಪಾಜ್‌ನ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಿಗೆ ಸ್ಥಳಾಂತರಿಸಲಾಗಿದೆ. ಸ್ಫೋಟ ಸಂಭವಿಸಿದ ಸ್ಥಳದಲ್ಲಿ ಇನ್ನೂ ಹೆಚ್ಚಿನ ಪ್ರಮಾಣದ ಶಾಖ ಹಾಗೂ ಸ್ಫೋಟಿಸದೆ ಉಳಿದಿರುವ ಸ್ಫೋಟಕಗಳಿರುವ ಹಿನ್ನೆಲೆಯಲ್ಲಿ ಮತ್ತೊಂದು ಸ್ಫೋಟ ಸಂಭವಿಸುವ ಸಾಧ್ಯತೆಯಿದೆ ಎಂದು ರಕ್ಷಣಾ ಪಡೆಗಳು ಎಚ್ಚರಿಕೆ ನೀಡಿವೆ. ಮುನ್ನೆಚ್ಚರಿಕೆ ಕ್ರಮವಾಗಿ ಸಾರ್ವಜನಿಕರು ಸೇನಾ ನೆಲೆಯಿಂದ ಕನಿಷ್ಠ 150 ಮೀಟರ್ ದೂರ ಇರುವಂತೆ ಸೂಚಿಸಲಾಗಿದೆ. ಸೇನಾ ನೆಲೆಯ ಗೋಡೆಗೆ ಹೊಂದಿಕೊಂಡಿದ್ದ ಒಂದು ಡಜನ್‌ಗೂ ಹೆಚ್ಚು ವಸತಿ ಕಟ್ಟಡಗಳ ಕಿಟಕಿ ಗಾಜುಗಳು ಹಾಗೂ ಛಾವಣಿಗಳು ಸ್ಫೋಟದ ತೀವ್ರ ಒತ್ತಡಕ್ಕೆ ಹಾನಿಗೊಳಗಾಗಿವೆ. ಸ್ಫೋಟಕ್ಕೆ ನಿಖರ ಕಾರಣವೇನು ಎಂಬುದು ಇನ್ನೂ ತಿಳಿದುಬಂದಿಲ್ಲ. ಈ ಕುರಿತು ಮಿಲಿಟರಿ ಹಾಗೂ ನಾಗರಿಕ ಪೊಲೀಸರು ಜಂಟಿಯಾಗಿ ತನಿಖೆ ನಡೆಸುವಂತೆ ಬೊಲಿವಿಯಾದ ರಕ್ಷಣಾ ಸಚಿವ ಅರ್ನೆಸ್ಟೊ ಜಸ್ಟಿನಿಯಾನೊ ಆದೇಶಿಸಿದ್ದಾರೆ. ಸುಮಾರು 1 ಲಕ್ಷ ಜನಸಂಖ್ಯೆ ಹೊಂದಿರುವ ವಿಯಾಚಾ ನಗರವು ಬೊಲಿವಿಯಾದ ಆಡಳಿತ ರಾಜಧಾನಿ ಲಾ ಪಾಜ್‌ನಿಂದ ಸುಮಾರು 30 ಕಿ.ಮೀ. (19 ಮೈಲಿ) ದೂರದಲ್ಲಿದೆ.

# ವಿರೋಧ ಪಕ್ಷಗಳ ಆರೋಪಕ್ಕೆ ಶಾಸಕ ಎನ್.ಶ್ರೀನಿವಾಸ್ ತಿರುಗೇಟು

## 101 ಅರ್ಜಿಗಳ ಸ್ವೀಕಾರ: ಪ್ರಜಾಸೇವಾ ಆಂದೋಲನಕ್ಕೆ ಚಾಲನೆ ನೀಡಿ ನೆಲಮಂಗಲ ಶಾಸಕ ಸವಾಲು

ವಿಜಯ ದುಂಬಿ ಸುದ್ದಿ....

**ನೆಲಮಂಗಲ: "ಕ್ಷೇತ್ರದಲ್ಲಿ ನಡೆಯುತ್ತಿದ್ದ ಅಕ್ರಮಗಳಿಗೆ ಬ್ರೇಕ್ ಹಾಕಿ, ಹಣ ವಸೂಲಿ ಹಾಗೂ ಜನರಿಗೆ ಮೋಸ ಮಾಡುವುದನ್ನು ನಿಲ್ಲಿಸಿರುವುದು ದೌರ್ಜನ್ಯವಾಗುತ್ತದೆಯೇ?" ಎಂದು ನೆಲಮಂಗಲ ಶಾಸಕ ಎನ್.ಶ್ರೀನಿವಾಸ್ ವಿರೋಧ ಪಕ್ಷಗಳ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ತಾಲೂಕು ಕಚೇರಿ ಆವರಣದಲ್ಲಿ ತಾಲೂಕು ಆಡಳಿತದಿಂದ ಆಯೋಜಿಸಲಾಗಿದ್ದ 'ಪ್ರಜಾಸೇವಾ ಆಂದೋಲನ'ಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ವಿರೋಧ ಪಕ್ಷಗಳ ಪ್ರತಿಭಟನೆಗೆ ನೇರ ಶೈಲಿಯಲ್ಲಿ ಉತ್ತರ ನೀಡಿದರು.**

"ಕ್ಷೇತ್ರದ ಅಭಿವೃದ್ಧಿಗೆ ನಿರಂತರವಾಗಿ ಹೋರಾಟ ಮಾಡಿ ಅನುದಾನ ತಂದು ಕೆಲಸ ಮಾಡಿಸುತ್ತಿದ್ದೇನೆ. ಹಿಂದಿನ ಶಾಸಕರು ನೀಡಿದ್ದ ಆಶ್ವಾಸನೆಗಳನ್ನು ಇಂದು ನಾನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದ್ದೇನೆ. ತಪ್ಪು ಮಾಡುವುದನ್ನು ನಿಲ್ಲಿಸಿದ್ದಕ್ಕೆ ಅದನ್ನು ದೌರ್ಜನ್ಯ ಎಂದು ಬಿಂಬಿಸಲಾಗುತ್ತಿದೆ. ನಾನು ತಪ್ಪು ಮಾಡಿದ್ದರೆ 2028ರ ಚುನಾವಣೆಯಲ್ಲಿ ಜನರೇ ಸೂಕ್ತ ಉತ್ತರ ನೀಡಲಿದ್ದಾರೆ," ಎಂದು ಸವಾಲು ಎಸೆದರು.

ಜನರ ಮನೆಬಾಗಿಲಿಗೆ ಸರಕಾರದ ಸೇವೆ: ಸರಕಾರವೇ ಜನರ ಮನೆಬಾಗಿಲಿಗೆ ಸೇವೆ ತಲುಪಿಸಬೇಕೆಂಬ ಉದ್ದೇಶದಿಂದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು 'ಪ್ರಜಾಸೇವಾ ಇಲಾಖೆ'ಯನ್ನು ಆರಂಭಿಸಿದ್ದಾರೆ. ಇದರಿಂದ ಕ್ಷೇತ್ರದ ಪ್ರಜೆಗಳ ಸಮಸ್ಯೆಗೆ ತುರ್ತಾಗಿ ಸ್ಪಂದಿಸಲು ಸಾಧ್ಯವಾಗಲಿದೆ. ತಾವು ಶಾಸಕರಾದ ಆರಂಭದಲ್ಲೇ 'ಜನಸ್ಪಂದನಾ' ಸಭೆಗಳನ್ನು ನಡೆಸಿದ್ದನ್ನು ಸ್ಮ-ರಿಸಿದ ಶಾಸಕರು, ಈಗ ಸರಕಾರವೇ ಪ್ರತ್ಯೇಕ ಇಲಾಖೆ ಮಾಡುವ ಮೂಲಕ ಸಾರ್ವಜನಿಕರ ದೂರುಗಳು ನೇರವಾಗಿ ಅಧಿಕಾರಿಗಳ ಗಮನಕ್ಕೆ ಬರುವಂತೆ ಮಾಡಿದೆ ಎಂದರು. ಸ್ವೀಕರಿಸುವ ಪ್ರತಿಯೊಂದು ಮನವಿಯೂ ಆನ್‌ಲೈನ್ ಮೂಲಕ ತಕ್ಷಣ ನೋಂದಣಿಯಾಗಲಿದ್ದು, ಶೀಘ್ರ ಪರಿಹಾರ ಸಿಗಲಿದೆ ಎಂದರು.



ಸ್ಥಳದಲ್ಲೇ 101 ಅರ್ಜಿಗಳ ಸ್ವೀಕಾರ, ಆನ್‌ಲೈನ್ ಎಂಟ್ರಿ: ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಒಟ್ಟು 101 ಅರ್ಜಿಗಳನ್ನು ಸ್ವೀಕರಿಸಲಾಯಿತು.

- ಕಂದಾಯ ಇಲಾಖೆ: 68
- ಪಂಚಾಯತ್ ರಾಜ್ ಇಲಾಖೆ: 22
- ನಗರಸಭೆ: 07
- ಎಡಿಎಲ್‌ಆರ್: 04

ಸ್ವೀಕರಿಸಿದ ಅರ್ಜಿಗಳನ್ನು ತಕ್ಷಣವೇ ಪ್ರಜಾಸೇವಾ ಇಲಾಖೆಯ ಪೋರ್ಟಲ್‌ನಲ್ಲಿ ಆನ್‌ಲೈನ್ ನೋಂದಣಿ ಮಾಡಿಸಿ, ಶೀಘ್ರ ವಿಲೇವಾರಿಗೆ ತಹಸೀಲ್ದಾರ್ ಹಾಗೂ ಇಲಾಖಾ ಅಧಿಕಾರಿಗಳಿಗೆ ಶಾಸಕರು ನಿರ್ದೇಶನ ನೀಡಿದರು. ಸಭೆಗೆ ಆಗಮಿಸಿದ್ದ ಸಾರ್ವಜನಿಕ-ರಿಗೆ ತಿಂಡಿಯ ವ್ಯವಸ್ಥೆ ಮಾಡಲಾಗಿತ್ತು.



ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಮಲ್ಲೇಶ್‌ಬೀರಪ್ಪ ಪೂಜಾರ್, ಎನ್‌ಪಿಎ ಅಧ್ಯಕ್ಷ ಎಂ.ಕೆ. ನಾಗರಾಜು, ನಗರಸಭೆ ಅಧ್ಯಕ್ಷ ಎನ್. ಗಣೇಶ್, ಪೌರಾಯುಕ್ತ ಗಂಗಾಧರ್, ಬಮೂಲ್ ವೃತ್ತಿಪರ ನಿರ್ದೇಶಕ ಮುನಿರಾಮು ಹಾಗೂ ಮುಖಂಡರಾದ ಪ್ರದೀಪ್, ಕೆ. ಕೃಷ್ಣಪ್ಪ, ನರಸಿಂಹಮೂರ್ತಿ, ಸಿ.ಎನ್. ಗೌಡ, ಮುನಿರಾಜು, ಕೆಂಪರಾಜು, ಬಿ.ಜಿ. ವಾಸು, ಮನುಗೌಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸಹಕಾರ ಸಂಘಗಳಲ್ಲಿ ರೈತರು ವಹಿವಾಟು ಮಾಡಿ :ಸಂಘದ ಅಧ್ಯಕ್ಷ ರಾಜೇಶ್



ವಿಜಯ ದುಂಬಿ ಸುದ್ದಿ....

**ದಾಬಸ್‌ಪೇಟೆ: ರಾಷ್ಟ್ರೀಕೃತ ಬ್ಯಾಂಕುಗಳಿಗೆ ಹೋಲಿಸಿದರೆ ಸಹಕಾರ ಸಂಘಗಳ ಮೂಲಕ ತ್ವರಿತಗತಿಯಲ್ಲಿ ಸಾಲ ಸೌಲಭ್ಯ ಪಡೆದುಕೊಳ್ಳಬಹುದಾಗಿದ್ದು, ರೈತರು ಸಹಕಾರ ಸಂಘಗಳಲ್ಲಿ ವಹಿವಾಟು ಮಾಡಬೇಕೆಂದು ಸಂಘದ ಅಧ್ಯಕ್ಷ ರಾಜೇಶ್ ತಿಳಿಸಿದರು. ಸೋಂಪುರ ಹೋಬಳಿಯ ಬಿಲ್ಲನಕೋಟೆ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ 2025-26ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.**

ರೈತರನ್ನು ಆರ್ಥಿಕವಾಗಿ ಸಬಲರನ್ನಾಗಿಸುವುದು ಮತ್ತು ಅವರ ಏಳಿಗೆಗೆ ಶ್ರಮಿಸುವುದು ಸಹಕಾರ ಸಂಘಗಳ ಮೂಲ ಉದ್ದೇಶವಾಗಿದೆ. ಗ್ರಾಮೀಣ ಭಾಗದ ಆರ್ಥಿಕ ಬೆಳವಣಿಗೆಯಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳು ಶ್ರಮಿಸುತ್ತಿವೆ. ಸದಸ್ಯರು ತಾವು ಪಡೆದ ಸಾಲವನ್ನು ಸಕಾಲದಲ್ಲಿ ಮರುಪಾವತಿ ಮಾಡಿದಲ್ಲಿ ಸಂಘ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ ಎಂದರು. ಸಿಇಒ ಚಿಕ್ಕರಾಜು ಮಾತನಾಡಿ ನಮ್ಮ ಸಂಘದಲ್ಲಿ 2182 ಸದಸ್ಯರಿದ್ದು, ಕೆಸಿಸಿ ಸಾಲವನ್ನು 392 ಸದಸ್ಯರಿಗೆ 3 ಕೋಟಿ 48 ಲಕ್ಷ ರೂಗಳು, 5 ಸ್ವಸಹಾಯ ಗುಂಪುಗಳಿಗೆ 25 ಲಕ್ಷದ 98 ಸಾವಿರ ಸಾಲ ನೀಡಿದ್ದು, ಪ್ರಸಕ್ತ ವರ್ಷದಲ್ಲಿ 3 ಲಕ್ಷದ 54 ಸಾವಿರ ಲಾಭಾಂಶ ಬಂದಿದೆ.

ನಮ್ಮ ಸಂಘದಲ್ಲಿ ರೈತರು ಹೆಚ್ಚಿನ ವ್ಯವಹಾರ ನಡೆಸಿ ಸಹಕಾರ ಬ್ಯಾಂಕ್ ಗಳ ಪ್ರಗತಿಗೆ ಸಹಕರಿಸಿ ಎಂದರು. ಸಭೆಯಲ್ಲಿ ಸಂಘದ ಉಪಾಧ್ಯಕ್ಷ ಮಹೇಶ್ ಕುಮಾರ್, ನಿರ್ದೇಶಕರುಗಳಾದ ರಮೇಶ್, ಚನ್ನೇಗೌಡ, ವೆಂಕಟೇಶ್, ಚಿದಾನಂದಮೂರ್ತಿ, ವಿಜಯಕುಮಾರ್, ರಂಗಧಾಮೇಗೌಡ, ಧನಲಕ್ಷ್ಮಿ ಕಲಾವತಿ, ಲಕ್ಷ್ಮಿನರಸಮ್ಮ, ರೇಣುಕಮ್ಮ, ಬಿಡಿಸಿಸಿ ಬ್ಯಾಂಕ್ ಮೇಲ್ವಿಚಾರಕರುಗಳಾದ ನರಸಿಂಹಮೂರ್ತಿ, ರವಿಕುಮಾರ್, ಸಿಬ್ಬಂದಿ ವರ್ಗದವರಾದ ಗೋವಿಂದರಾಜು, ಗೀತಾ, ನವೀನ್ ಕುಮಾರ್ ಸೇರಿದಂತೆ ರೈತರು ಮತ್ತಿತ್ತರಿದ್ದರು.

# ಸಹೋದರತ್ವದ ಜೊತೆಗೆ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು : ಲಕ್ಷ್ಮೀನಾರಾಯಣ್

ವಿಜಯ ದುಂಬಿ ಸುದ್ದಿ....

**ದೇವನಹಳ್ಳಿ: ಗಣೇಶ ಹಬ್ಬದ ಅಂಗವಾಗಿ ಪಟ್ಟಣ ಸೇರಿದಂತೆ ಗ್ರಾಮೀಣ ಪ್ರದೇಶದಲ್ಲಿನ ಸಾರ್ವಜನಿಕರು ಗಣೇಶ ಮೂರ್ತಿ ಇಟ್ಟು ಪೂಜಿಸಲು ಕಡ್ಡಾಯವಾಗಿ ಸರ್ಕಾರದ ನಿಯಮಗಳನ್ನು ಕಟ್ಟು ನಿಟ್ಟಾಗಿ ಪಾಲಿಸಬೇಕು. ಹಬ್ಬದ ವೇಳೆ ಎಲ್ಲರೂ ಸಹೋದರತ್ವ ಕಾಪಾಡಬೇಕು ಎಂದು ಸರ್ಕಲ್ ಇನ್‌ಸ್ಪೆಕ್ಟರ್ ಲಕ್ಷ್ಮಿನಾರಾಯಣ್ ತಿಳಿಸಿದರು. ಪಟ್ಟಣದ ಸುಬ್ಬಮ್ಮ ಚನ್ನಪ್ಪ ಸಮುದಾಯ ಭವನದಲ್ಲಿ ಗೌರಿ-ಗಣೇಶ ಹಬ್ಬದ ಪ್ರಯುಕ್ತ ವಿಜಯಪುರ ಪೊಲೀಸ್ ಠಾಣೆ ವತಿಯಿಂದ ಶುಕ್ರವಾರ ನಡೆದ ಶಾಂತಿ ಸಭೆಯಲ್ಲಿ ಅವರು ಮಾತನಾಡಿದರು.**

ಗಣೇಶ ಮೂರ್ತಿ ಪ್ರತಿಷ್ಠಾಪನೆಗೂ ಮುನ್ನ ಸಮಿತಿಯವರು ಪೊಲೀಸ್ ಇಲಾಖೆ, ಬೆಸ್ಕಾಂ, ಪುರಸಭೆ, ಸ್ಥಳೀಯ ಗ್ರಾಮ



ಪಂಚಾಯಿತಿಗಳು, ಆಹಾರ ಇಲಾಖೆಯಿಂದ ಕಡ್ಡಾಯವಾಗಿ ಅನುಮತಿ ಪತ್ರವನ್ನು ಪಡೆಯಬೇಕು. ಮೂರ್ತಿಯ ಪ್ರತಿಷ್ಠಾಪನೆಗೆ ಸ್ಥಳ, ವಿಸರ್ಜನೆ ಮಾಡುವ ದಿನಾಂಕ, ಮೆರವಣಿಗೆ ಹೋಗುವ ಮಾರ್ಗ, ವಿಸರ್ಜನೆ ಮಾಡುವ ಸ್ಥಳ ಸೇರಿದಂತೆ ಅಗತ್ಯವಾದ ಎಲ್ಲ ಮಾಹಿತಿಯನ್ನು ಪೊಲೀಸ್ ಠಾಣೆಗೆ ಕಡ್ಡಾಯವಾಗಿ ನೀಡಬೇಕು ಎಂದರು. ಬ್ಯಾನರ್, ಬಂಟಿಂಗ್ಸ್ ಅಳವಡಿಕೆ, ವಿದ್ಯುತ್ ಸಂಪರ್ಕ ಪಡೆಯಲು, ಪ್ರಸಾದ ವಿತ-ರಿಸಲು ಸಂಬಂಧಪಟ್ಟ ಇಲಾಖೆಯ ಅಧಿಕಾ-ರಿಗಳಿಂದ ಅನುಮತಿ ಪಡೆಯಬೇಕು. ಮೂರ್ತಿ ಪ್ರತಿಷ್ಠಾಪನಾ ಸ್ಥಳದಲ್ಲಿ ಇಬ್ಬರು ಸ್ವಯಂ ಸೇವಕರನ್ನು ನೇಮಿಸಬೇಕು. ಮುಂಜಾಗ್ರತವಾಗಿ ಬೆಂಕಿ ನಂದಿಸುವ ಸಾಧನ ಇಟ್ಟಿರಬೇಕು ಎಂದರು.

ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗುವಂತೆ ರಸ್ತೆಯಲ್ಲಿ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಬಾರದು. ಮೆರವಣಿಗೆ ವೇಳೆ ಡಿ.ಜೆ ಬಳಸಬಾರದು, ಪಟಾಕಿ ಸಿಡಿಸಬಾರದು, ಸಾಮಾಜಿಕ ಜಾಲತಾಣಗಳಲ್ಲಿ ಯಾವುದೇ ಕೋಮು ಸೌಹಾರ್ದಕ್ಕೆ ಭಂಗ ತರುವಂಥ ಪ್ರಚೋದನಕಾರಿ ಸಂದೇಶಗಳು ಅಥವಾ ವಿಡಿಯೊಗಳನ್ನು ಹಂಚಬಾರದು. ಯಾವುದೇ ಅಹಿತಕರ ಘಟನೆಗೆ ಅವಕಾಶ ನೀಡದೆ ಪ್ರತಿಯೊಬ್ಬರೂ ಕಾನೂನಿಗೆ ಗೌರವಿಸಿ ಹಬ್ಬ ಆಚರಿಸಬೇಕು ಎಂದು ಸೂಚಿಸಿದರು. ಪುರಸಭೆ ಮುಖ್ಯಾಧಿಕಾರಿ ಸತ್ಯನಾರಾಯಣ್ ಮಾತನಾಡಿ, ಗಣೇಶ ಪ್ರತಿಷ್ಠಾಪನೆಗಾಗಿ ಅನುಮತಿ ಪಡೆಯಲು ಸೆ .8, 9 ಮತ್ತು 11 ರಂದು ದಿನಾಂಕ ನಿಗಧಿಪಡಿಸಲಾಗಿದೆ.

ಪರಿಸರ ಸ್ನೇಹಿ ಮಣ್ಣಿನ ಗಣೇಶ ಮೂರ್ತಿಗಳ ಮಾರಾಟ ಹಾಗೂ ಪ್ರತಿಷ್ಠಾಪನೆಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ. ಪ್ಲಾಸ್ಟಿಕ್ ಬಳಕೆ ಮಾಡಬಾರದು, ಸ್ವಚ್ಛತೆಗೆ ಆದ್ಯತೆ ನೀಡಬೇಕು. ಎಲ್ಲ ರೀತಿಯ ಅಗತ್ಯ ಮುನ್ನೆಚ್ಚರಿಕೆಯ ಕ್ರಮಗಳನ್ನು ಅನುಸರಿಸಬೇಕು ಎಂದು ಮನವಿ ಮಾಡಿದರು. ಪುರಸಭೆಯ ಅಧಿಕಾರಿ ಶೇಖರ್ ರೆಡ್ಡಿ, ಬೆಸ್ಕಾಂ ಅಧಿಕಾರಿ ಶಂಭು, ವಿವಿಧ ಗ್ರಾಮ ಪಂಚಾಯಿತಿ ಪಿಡಿಒ ಹಾಗೂ ಗಣೇಶ ಪ್ರತಿಷ್ಠಾಪನಾ ಸಮಿತಿಯ ಮುಖಂಡರು ಇದ್ದರು.

# ಪ್ರಜಾಸೇವಾ ಆಂದೋಲನಕ್ಕೆ ಜಿಲ್ಲೆಯ ಐದು ವಿಧಾನಸಭಾ ಕ್ಷೇತ್ರಗಳಲ್ಲಿ ಏಕಕಾಲಕ್ಕೆ ಚಾಲನೆ

**ವಿಜಯ ದುಂಬಿ ಸುದ್ದಿ....**

**ಚಿಕ್ಕಬಳ್ಳಾಪುರ: ಜಿಲ್ಲೆಯ ಐದು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಶನಿವಾರ ಪ್ರಜಾಸೇವಾ ಆಂದೋಲನ ಸಭೆಗಳಿಗೆ ಏಕಕಾಲದಲ್ಲಿ ಚಾಲನೆ ನೀಡಲಾಗಿದ್ದು, ಸಾರ್ವಜನಿಕರಿಂದ ಅಹವಾಲು, ಅರ್ಜಿಗಳು ಹಾಗೂ ಕುಂದುಕೊರತೆಗಳನ್ನು ಸ್ವೀಕರಿಸಿ, ಅರ್ಹ ಅರ್ಜಿಗಳಿಗೆ ಸ್ಥಳದಲ್ಲೇ ಪರಿಹಾರ ಒದಗಿಸುವ ಕಾರ್ಯಕ್ಕೆ ಚಾಲನೆ ದೊರೆಯಿತು.**

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ವಿಜಯನಗರ ಜಿಲ್ಲೆಯ ಕೂಡ್ಲಿಗಿಯಲ್ಲಿ ಪ್ರಜಾಸೇವಾ ಆಂದೋಲನಕ್ಕೆ ಚಾಲನೆ ನೀಡಿದ ಬಳಿಕ, ಅದರ ಭಾಗವಾಗಿ ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ, ಚಿಕ್ಕಬಳ್ಳಾಪುರ, ಗೌರಿಬಿದನೂರು, ಶಿಡ್ಲಘಟ್ಟ ಹಾಗೂ ಚಿಂತಾಮಣಿ ವಿಧಾನಸಭಾ ಕ್ಷೇತ್ರಗಳಲ್ಲಿ ಸಭೆಗಳನ್ನು ಆಯೋಜಿಸಲಾಗಿತ್ತು. ಸಭೆಗಳಲ್ಲಿ ಸಾರ್ವಜನಿಕರಿಂದ ಅರ್ಜಿಗಳನ್ನು ಸ್ವೀಕರಿಸಿ, ಆನ್‌ಲೈನ್ ಮೂಲಕ ನೋಂದಣಿ ಮಾಡಿ ಸಂಬಂಧಪಟ್ಟ ಇಲಾಖೆಗಳ ಮೂಲಕ ವಿಲೇವಾರಿ ಮಾಡುವ ಪ್ರಕ್ರಿಯೆಗೆ ಚಾಲನೆ ನೀಡಲಾಯಿತು.

ಬಾಗೇಪಲ್ಲಿ ನಗರದ ಸರ್ಕಾರಿ ಬಾಲಕಿಯರ ಶಾಲಾ ಆವರಣದಲ್ಲಿ ಜಿಲ್ಲಾಧಿಕಾರಿ ಜಿ.ಪ್ರಭು ಅವರು ಸ್ಥಳೀಯ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಅವರ ಸಮ್ಮುಖದಲ್ಲಿ ಸಾರ್ವಜನಿಕರ ಅಹವಾಲುಗಳನ್ನು



ಸ್ವೀಕರಿಸಿ, ವಿವಿಧ ಅರ್ಜಿಗಳ ವಿಲೇವಾರಿಗೆ ಕ್ರಮ ಕೈಗೊಂಡರು. ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ನಂದಿ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ಉಪ ವಿಭಾಗಾಧಿಕಾರಿ ಡಿ.ಎಚ್.ಅಶ್ವಿನ್, ಗೌರಿಬಿದನೂರು ಕ್ಷೇತ್ರದ ತೊಂಡೇಬಾವಿ ಗ್ರಾಮದ ಶಿವಾನಂದ ಶಾಲಾ ಆವರಣದಲ್ಲಿ ಶಾಸಕ ಕೆ.ಹೆಚ್.ಪುಟ್ಟಸ್ವಾಮಿಗೌಡ, ಶಿಡ್ಲಘಟ್ಟ ಕ್ಷೇತ್ರದ ಸಾದಲಿ ಗ್ರಾಮದ ಕೆ.ಪಿ.ಎಸ್. ಶಾಲಾ ಆವರಣದಲ್ಲಿ ಶಾಸಕ ರವಿಕುಮಾರ್ ಹಾಗೂ ಚಿಂತಾಮಣಿ ಕ್ಷೇತ್ರದ ಮುಂಗಾನಹಳ್ಳಿ ಗ್ರಾಮದ ನಾಡಕಚೇರಿ ಆವರಣದಲ್ಲಿ ತಹಸೀಲ್ದಾರ್ ಸುದರ್ಶನ್ ಯಾದವ್ ಅವರ ನೇತೃತ್ವದಲ್ಲಿ ಪ್ರಜಾಸೇವಾ ಆಂದೋಲನ ಸಭೆಗಳು ನಡೆದವು.

ಸಭೆಗಳಲ್ಲಿ ಸ್ವೀಕರಿಸಲಾದ ಅರ್ಜಿಗಳು, ದೂರುಗಳು ಹಾಗೂ ಕುಂದುಕೊರತೆಗಳನ್ನು ಸ್ಕ್ಯಾನ್ ಮಾಡಿ ಖಕಉಖಖ ಪೋರ್ಟಲ್‌ನಲ್ಲಿ ನೋಂದಣಿ ಮಾಡಲಾಯಿತು. ಅರ್ಜಿದಾರರಿಗೆ ನಿಗದಿತ ಸ್ವೀಕೃತಿ ನಮೂನೆಗಳನ್ನು ವಿತರಿಸಲಾಯಿತು. ಅರ್ಹವಾಗಿದ್ದ ಕೆಲವು ಅರ್ಜಿಗಳನ್ನು ಸ್ಥಳದಲ್ಲೇ ವಿಲೇವಾರಿ ಮಾಡಿ, ಸಂಬಂಧಪಟ್ಟ ಫಲಾನುಭವಿಗಳಿಗೆ ಮಂಜೂರಾತಿ ಹಾಗೂ ಅನುಮೋದನಾ ಪತ್ರಗಳನ್ನು ವಿತರಿಸಲಾಯಿತು. ತಕ್ಷಣ ವಿಲೇವಾರಿ ಸಾಧ್ಯವಾಗದ ಅರ್ಜಿಗಳನ್ನು ಕಾಲಮಿತಿಯಲ್ಲಿ ಪರಿಹರಿಸುವ ಪ್ರಕ್ರಿಯೆ ಹಾಗೂ ಅದರ ಮುಂದಿನ ಹಂತಗಳ ಕುರಿತು ಅರ್ಜಿದಾರರಿಗೆ ಸ್ಥಳದಲ್ಲೇ ಮಾಹಿತಿ ನೀಡಲಾಯಿತು.

ಬಾಗೇಪಲ್ಲಿಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಜಿ.ಪ್ರಭು, "ಅಹವಾಲು ನಿಮ್ಮದು, ಪರಿಹಾರ ನಮ್ಮದ್ದು" ಎಂಬ ಆಶಯದಂತೆ ಸರ್ಕಾರವೇ ಜನರ ಮನೆ ಬಾಗಿಲಿಗೆ ಬಂದು ಸಾರ್ವಜನಿಕರ ಸಮಸ್ಯೆಗಳನ್ನು ಪರಿಹರಿಸುವ ಉದ್ದೇಶವನ್ನು ಪ್ರಜಾಸೇವಾ ಆಂದೋಲನ ಹೊಂದಿದೆ ಜಿಲ್ಲೆಯಲ್ಲಿ ಈ ಆಂದೋಲನವನ್ನು ರಾಜ್ಯಕ್ಕೆ ಮಾದರಿಯಾಗುವ ರೀತಿಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುವುದು ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕೇವಲ ಅರ್ಜಿ ಸಲ್ಲಿಸುವುದಷ್ಟೇ ಅಲ್ಲದೆ, ಸಾರ್ವಜನಿಕರು ನಿಗದಿತ ಸ್ವೀಕೃತಿ ಪಡೆಯುವುದು ಅತ್ಯಂತ ಮುಖ್ಯ. ಸ್ವೀಕೃತಿ ಪಡೆದ ಅರ್ಜಿಗಳು ಆನ್‌ಲೈನ್ ವ್ಯವಸ್ಥೆಯಲ್ಲಿ ದಾಖಲಾಗುವುದರಿಂದ ಅವುಗಳ ವಿಲೇವಾರಿ ಸ್ಥಿತಿಗತಿಯನ್ನು ಸುಲಭವಾಗಿ ತಿಳಿದುಕೊಳ್ಳಬಹುದಾಗಿದೆ.

ಇದರಿಂದ ಅಧಿಕಾರಿಗಳು ಬಾಕಿ ಇರುವ ಅರ್ಜಿಗಳ ಮೇಲೆ ನಿಗಾವಹಿಸಿ, ಕಾಲಮಿತಿಯಲ್ಲಿ ವಿಲೇವಾರಿ ಮಾಡಲು ಸಾಧ್ಯವಾಗಲಿದೆ ಎಂದು ತಿಳಿಸಿದರು. ಈಗಾಗಲೇ ಜಿಲ್ಲೆಯಲ್ಲಿ 35 ಇಲಾಖೆಗಳಲ್ಲಿ ಇ-ಕಚೇರಿಗಳು ಕಾರ್ಯಾರಂಭ ಮಾಡಿದ್ದು, ಇದರಿಂದ ಆಡಳಿತದಲ್ಲಿ ಇನ್ನಷ್ಟು ಪಾರದರ್ಶಕತೆ ಮತ್ತು ವೇಗ ದೊರೆತಿದೆ. ಭೂ ಸುರಕ್ಷ ಯೋಜನೆಯಡಿ ಜಿಲ್ಲೆಯಲ್ಲಿ ಬಹುತೇಕ ಕಂದಾಯ ದಾಖಲೆಗಳನ್ನು ನೀಡಲಾಗುತ್ತಿದ್ದು, ಮುಂದಿನ ಒಂದೆರಡು ತಿಂಗಳಲ್ಲಿ ಎಲ್ಲಾ ಕಂದಾಯ ದಾಖಲೆಗಳನ್ನು ಒದಗಿಸುವ ವ್ಯವಸ್ಥೆ ಕಲ್ಪಿಸಲಾಗುವುದು ಎಂದರು. ಆಂದೋಲನದ ಅಂಗವಾಗಿ ಅರ್ಜಿ ಸಲ್ಲಿಸುವ ವಿಧಾನವನ್ನು ಸಾರ್ವಜನಿಕರಿಗೆ ಪ್ರಾತ್ಯಕ್ಷಿಕೆ ಮೂಲಕ ತಿಳಿಸಲಾಯಿತು.

ವಿವಿಧ ಇಲಾಖೆಗಳು ಜಾಗೃತಿ ಮಳಿಗೆಗಳನ್ನು ತೆರೆದು ತಮ್ಮ ಇಲಾಖೆಗಳ ಯೋಜನೆಗಳು ಹಾಗೂ ಸೇವೆಗಳ ಕುರಿತು ಮಾಹಿತಿ ನೀಡಿದವು. ವಿವಿಧ ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯಗಳನ್ನು ವಿತರಿಸಲಾಯಿತು. ಜಿಲ್ಲಾ, ತಾಲ್ಲೂಕು ಹಾಗೂ ಸ್ಥಳೀಯ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಸಭೆಗಳಲ್ಲಿ ಭಾಗವಹಿಸಿ ಸಾರ್ವಜನಿಕರಿಂದ ಸ್ವೀಕರಿಸಲಾದ ಅರ್ಜಿಗಳನ್ನು ಇಲಾಖಾವಾರು ವಿಲೇವಾರಿ ಮಾಡಲು ಕ್ರಮ ಕೈಗೊಂಡರು. ಸಾರ್ವಜನಿಕರು ಉತ್ಸಾಹದಿಂದ ಭಾಗವಹಿಸಿ ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಂಡರು. ಸರ್ಕಾರದ ಸೇವೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವ ಉದ್ದೇಶದ ಈ ಪ್ರಜಾಸೇವಾ ಆಂದೋಲನ ಸಾರ್ವಜನಿಕ ವಲಯದಲ್ಲಿ ಮೆಚ್ಚುಗೆಗೆ ಪಾತ್ರವಾಯಿತು.

## ಚಾಲಕನ ಭೀಕರ ಹತ್ಯೆ: ಸಿಸಿಟಿವಿ ದೃಶ್ಯಾವಳಿಗಳ ಆಧಾರದ ಮೇಲೆ ತನಿಖೆ.

**ವಿಜಯ ದುಂಬಿ ಸುದ್ದಿ....**

**ಭಾಗ್ಯನಗರ: ಚಿಕ್ಕಬಳ್ಳಾಪುರ ಜಿಲ್ಲೆಯ ಭಾಗ್ಯನಗರ ತಾಲೂಕು ಕಸಬಾ ಹೋಬಳಿ ಘಂಟಂವಾರಿಪಲ್ಲಿ ಪಂಚಾಯಿತಿ ವ್ಯಾಪ್ತಿಯ ಕೊಂಡರೆಡ್ಡಿಪಲ್ಲಿಗೆ ಹೋಗುವ ಜೆಕೆಎನ್ ವೈನ್ ಸ್ಟೋರ್ (ಸಿಎಲ್-2) ಬಳಿಯಿರುವ ಹಳೆಯ ಶೆಡ್‌ನಲ್ಲಿ ಬಿಳ್ಳೂರು ಪಂಚಾಯಿತಿಯ ಉಗ್ರಾಣಂಪಲ್ಲಿ ಗ್ರಾಮದ ನಿವಾಸಿ ಹಾಗೂ ವೃತ್ತಿಯಲ್ಲಿ ಚಾಲಕರಾಗಿದ್ದ ನಾಗರಾಜು ಅವರ ಭೀಕರ ಹತ್ಯೆ ನಡೆದಿರುವ ಘಟನೆ ವರದಿಯಾಗಿದೆ.**



ಈ ಘಟನಾ ಸ್ಥಳಕ್ಕೆ ಜಿಲ್ಲಾ ವರಿಷ್ಠಾಧಿಕಾರಿ ಪದ್ಮನಿ ಸಾಹು, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಗನ್ನಾಥ್ ರೈ, ಫೊರೆನ್ಸಿಕ್ ತಜ್ಞ ಸುರೇಶ್ ಹಾಗೂ ಇನ್ಸ್‌ಪೆಕ್ಟರ್ ಅಜಯ್ ಸಾರಥಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಶ್ವಾನದಳ ಹಾಗೂ ವಿಧಿವಿಜ್ಞಾನ ತಜ್ಞರ ಸಹಾಯದಿಂದ ಮಾಹಿತಿ ಕಲೆಹಾಕುತ್ತಿದ್ದು, ಅಕ್ಕಪಕ್ಕದ ಸಿಸಿಟಿವಿ ಕ್ಯಾಮೆರಾಗಳನ್ನು ಪರಿಶೀಲಿಸುವ ಮೂಲಕ ಕೊಲೆಗಾರರನ್ನು ಶೀಘ್ರದಲ್ಲೇ ಪತ್ತೆ ಹಚ್ಚಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

# ನಾಲ್ಕನೇ ಶನಿವಾರ ವಿವಿಧ ಭಕ್ತಾದಿಗಳಿಂದ ದೇವರ ದರ್ಶನ

**ವಿಜಯ ದುಂಬಿ ಸುದ್ದಿ....**

**ಚಿಕ್ಕಬಳ್ಳಾಪುರ: ನಾಲ್ಕನೇ ಶನಿವಾರದ ಅಂಗವಾಗಿ ನಗರದ ವಿವಿಧ ದೇವಾಲಯ ಗಳಾದ ಶ್ರೀ ಲಕ್ಷ್ಮಿ ವೆಂಕಟೇಶ್ವರ ಸ್ವಾಮಿದೇವಾಲಯ , ಶನೇಶ್ವರ ದೇವಾಲಯ, ಆಂಜನೇಯ ಸ್ವಾಮಿ ದೇವಾಲಯ ಗಳಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳು ನಡೆದವು. ಈ ಸಂದರ್ಭದಲ್ಲಿ ವಿವಿಧೆಡೆಗಳಿಂದ ಆಗಮಿಸಿದ ಭಕ್ತಾದಿಗಳು ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿ, ದೀಪಾರಾಧನೆ ನೆರವೇರಿಸಿದರು.**

ದೇವರಿಗೆ ವಿವಿಧ ಬಗೆಯ ಪುಷ್ಪಗಳಿಂದ ಅಲಂಕಾರ ಮಾಡಲಾಗಿದ್ದು, ದೇವಸ್ಥಾನವು ಭಕ್ತಿಭಾವ ಹಾಗೂ ಹೂವಿನ ಅಲಂಕಾರದಿಂದ ಕಂಗೊಳಿಸಿತು. ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದು ಪ್ರಸಾದ ಸ್ವೀಕರಿಸಿದರು.



ನಾಲ್ಕನೇ ಶನಿವಾರದ ಪ್ರಯುಕ್ತ ದೇವಸ್ಥಾನಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಆಗಮಿಸಿದ್ದರಿಂದ



ವಿಶೇಷ ಪೂಜಾ ವಾತಾವರಣ ನಿರ್ಮಾಣವಾಗಿತ್ತು. ದೇವರ ದರ್ಶನ ಪಡೆದು ಭಕ್ತರು ತಮ್ಮ ಕುಟುಂಬದ

ಸುಖ, ಶಾಂತಿ ಮತ್ತು ಸಮೃದ್ಧಿಗಾಗಿ ಪ್ರಾರ್ಥಿಸಿದರು.

**ಚಿಕ್ಕಬಳ್ಳಾಪುರ ತಾಲೂಕಿನ ಕಾಡ ದಿಬ್ಬೂರು ಗ್ರಾಮದ ವ್ಯಾಪ್ತಿಗೆ ಸೇರಿರುವ ಶ್ರೀ ಲಕ್ಷ್ಮಿ ನರಸಿಂಹ ಸ್ವಾಮಿ ದೇವಾಲಯ ದಲ್ಲಿ ಇಂದು ವಿವಿಧ ಪೂಜಾ ಕೈಕಾರ್ಯಗಳು ಹಮ್ಮಿಕೊಳ್ಳಲಾಯಿತ್ತು. ಬೆಳಿಗ್ಗೆ ಯಿಂದಲ್ಲೇ ಭಕ್ತಾದಿಗಳು ಗಳು ದೇವಾಲಯಗೆ ಬಂದು ಶ್ರೀ ಲಕ್ಷ್ಮಿ ನರಸಿಂಹ ಸ್ವಾಮಿಯ ಅನುಗ್ರಹವನ್ನು ಪಡೆದು ದೇವರ ಕೃಪೆಗೆ ಪಾತ್ರ ರಾದರು. ಶ್ರೀ ಲಕ್ಷ್ಮಿ ನರಸಿಂಹ ಸ್ವಾಮಿಯ ವಿಶೇಷ ಪೂಜೆ, ಅಲಂಕಾರ , ತೀರ್ಥ ಪ್ರಸಾದ ವಿತರಣೆ ಮಾಡಲಾಯಿತ್ತು.**

## ಕಡೆ ಶ್ರಾವಣ ಶನಿವಾರ: ಬುರುಡಗುಂಟೆ ಶ್ರೀ ಲಕ್ಷ್ಮೀ ವೆಂಕಟರಮಣ ಸ್ವಾಮಿಗೆ ವಿಶೇಷ ಅಲಂಕಾರ

**ವಿಜಯ ದುಂಬಿ ಸುದ್ದಿ....**

**ಚೇಳೂರು: ಶ್ರಾವಣ ಶನಿವಾರದಂದು ತಾಲೂಕಿನ ವಿವಿಧ ದೇವಸ್ಥಾನಗಳಲ್ಲಿ ಶ್ರೀ ವೆಂಕಟರಮಣ (ವೆಂಕಟೇಶ್ವರ) ಸ್ವಾಮಿಗೆ ವಿಶೇಷ ಹೂವಿನ ಅಲಂಕಾರ ಮತ್ತು ಪೂಜಾ ಕೈಂಕರ್ಯಗಳನ್ನು ಶ್ರದ್ಧಾ ಭಕ್ತಿಯಿಂದ ನೆರವೇರಿಸಲಾಯಿತು.**



ನಾಲ್ಕನೇ ಶ್ರವಣ ಶನಿವಾರದ ಅಂಗವಾಗಿ ತಾಲೂಕಿನ ಬುರುಡಗುಂಟೆ ಸಮೀಪದ ಪುರಾತನ ಶ್ರೀ ವೆಂಕಟರಮಣಸ್ವಾಮಿ ದೇವಾಲಯಗಳಲ್ಲಿ ವಿಶೇಷ ಪೂಜೆ, ಅಲಂಕಾರಗಳು ನಡೆದವು. ದೇವಾಲಯದಲ್ಲಿ ಬೆಳಗ್ಗೆಯಿಂದಲೇ ಸ್ವಾಮಿಗೆ ನಾನಾ ರೀತಿಯ ಪರಿಮಳಯುಕ್ತ ಹೂವುಗಳು, ತುಳಸಿ ಮಾಲೆ ಹಾಗೂ ದವನದಿಂದ ವಿಶೇಷವಾಗಿ ಅಲಂಕಾರ ಪೂಜೆ ನೆರವೇರಿಸಲಾಯಿತು. ದೇವಸ್ಥಾನಗಳಲ್ಲಿ ಸಾಲು ಸಾಲಾಗಿ ನಿಂತಿದ್ದ ಭಕ್ತರರಿಂದ ಗೋವಿಂದ ನಾಮಸ್ಮರಣೆ ಮೊಳಗಲಿದ್ದು, ಪಟ್ಟಣ ಹಾಗೂ ವಿವಿಧ ಊರುಗಳಿಂದ ಭಕ್ತರು ನೂರಾರು ಸಂಖ್ಯೆಯಲ್ಲಿ ಭಾಗವಹಿಸಿದ ದೇವರ ಕೃಪೆಗೆ ಪಾತ್ರರಾದರು. ನೆರೆದಿದ್ದ ಭಕ್ತರಿಗೆ ದೇವಾಲಯದಿಂದ ಪ್ರಸಾದ ಹಾಗೂ ಅನ್ನಸಂತರ್ಪಣೆ ವಿನಿಯೋಗ ವ್ಯವಸ್ಥೆಯನ್ನು ಏರ್ಪಡಿಸಲಾಗಿತ್ತು. ಇದಲ್ಲದೆ ತಾಲೂಕಿನ ಚಿಟ್ಟಿಗಾನಪುರ ತಿರುಮಲಾಪುರ ಲಕ್ಷ್ಮೀ ನರಸಿಂಹಸ್ವಾಮಿ ದೇವಾಲಯ ಸೇರಿದಂತೆ ಏನಿಗದಲೆ ವೆಂಕಟರಮಣ ಸ್ವಾಮಿ ದೇವಾಲಯ, ಬುರಡಗುಂಟೆ,ಪಾಳ್ಯಕೆರೆ,ಮತ್ತಿತರ ದೇವಾಲಯಗಳ್ಳಿ ನೂರಾರು ಭಕ್ತರು ಕೋನೆ ಶ್ರಾವಣ ಶನಿವಾರದಂದು ವಿಶೇಷ ಪೂಜೆಗಳು ನಡೆಯಿತು. ಬುರುಡಗುಂಟೆ ಲಕ್ಷ್ಮೀ ವೆಂಕಟೇಶ್ವರ ಸ್ವಾಮಿ ದೇವಾಲಯದ ಪ್ರದಾನ ಅರ್ಚಕರಾದ ಪ್ರಭಾಕರ್ ಶರ್ಮಾ. ಎಂ. ಎಸ್. ನಾರಾಯಣಮೂರ್ತಿ. ಎಂ. ಎಸ್. ಲಕ್ಷ್ಮಣಮೂರ್ತಿ. ಕಿರಣ್ ಶರ್ಮಾ ದೇವಾಲಯದಲ್ಲಿ ದೇವರಿಗೆ ವಿಶೇಷ ಹುವಿನ ಅಲಂಕಾರ ಮಾಡಿದರು.

## 'ಬಾಗಿಲಿಗೆ ಬಂತು ಸರ್ಕಾರ': ಜನಸ್ಪಂದನ ಸಭೆಯಲ್ಲಿ ಶಾಸಕ ಬಿ.ಎನ್. ರವಿಕುಮಾರ್ ಅಭಿಮತ

# ತಾಲ್ಲೂಕು ಮಟ್ಟದ ಪ್ರಜಾ ಸೇವೆ ಅಂದೋಲನ ಯಶಸ್ವಿ

**ವಿಜಯ ದುಂಬಿ ಸುದ್ದಿ....**

**ಶಿಡ್ಲಘಟ್ಟ: ರೈತರು ಮತ್ತು ಸಾರ್ವಜನಿಕರು ತಮ್ಮ ವೈಯಕ್ತಿಕ ಕೆಲಸಗಳಿಗಾಗಿ ಸರ್ಕಾರಿ ಕಚೇರಿಗಳಿಗೆ ಅಲೆಯುವುದನ್ನು ತಪ್ಪಿಸುವ ನಿಟ್ಟಿನಲ್ಲಿ ಹಮ್ಮಿಕೊಳ್ಳಲಾಗಿರುವ 'ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ' ಜನಸ್ಪಂದನ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿದೆ ಎಂದು ಕ್ಷೇತ್ರದ ಶಾಸಕರಾದ ಬಿ.ಎನ್. ರವಿಕುಮಾರ್ ತಿಳಿಸಿದರು. ತಾಲ್ಲೂಕಿನ ಸಾದಲಿ ಹೋಬಳಿಯ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಆಯೋಜಿಸಲಾಗಿದ್ದ ಜನಸ್ಪಂದನ ಕಾರ್ಯಕ್ರಮದ ತಾಲ್ಲೂಕು ಮಟ್ಟದ ಪ್ರಜಾ ಸೇವೆ ಅಂದೋಲನ ಸಮಾರಂಭದಲ್ಲಿ ಅವರು ಮಾತನಾಡಿದರು.**

ಕಂದಾಯ, ಪಂಚಾಯತ್ ರಾಜ್, ಕೃಷಿ, ನೀರಾವರಿ ಹಾಗೂ ತೋಟಗಾರಿಕೆ ಸೇರಿದಂತೆ ತಾಲೂಕು ಮಟ್ಟದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಒಂದೇ ಸೂರಿನಡಿ ಲಭ್ಯವಿದ್ದು, ಸಾರ್ವಜನಿಕರ ಸಮಸ್ಯೆಗಳನ್ನು ಸ್ಥಳದಲ್ಲೇ ಇತ್ಯರ್ಥಪಡಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು. ತಲಕಾಯಲಬೆಟ್ಟ, ಸಾದಲಿ, ಈ.ತಿಮ್ಮಸಂದ್ರ, ದಿಬ್ಬೂರಹಳ್ಳಿ ಹಾಗೂ ಎಸ್. ದೇವಗಾನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನೂರಾರು ಗ್ರಾಮಸ್ಥರು ಈ ಸಭೆಯಲ್ಲಿ ಭಾಗವಹಿಸಿ ತಮ್ಮ ಕುಂದುಕೊರತೆಗಳನ್ನು ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳ ಮುಂದಿಟ್ಟರು. ಕಾರ್ಯಕ್ರಮದ ಆರಂಭದಲ್ಲಿ ಕೆಲವು ಸ್ಥಳೀಯರಿಂದ



ವಿರೋಧ ವ್ಯಕ್ತವಾಗಿದ್ದರೂ, ಪ್ರಸ್ತುತ ಸಾರ್ವಜನಿಕರಿಗೆ ಇದರಿಂದ ಹೆಚ್ಚಿನ ಅನುಕೂಲವಾಗುತ್ತಿದೆ.

ಸಾರ್ವಜನಿಕರು ಆಡಳಿತದ ಜೊತೆ ಕೈಜೋಡಿಸಬೇಕು ಎಂದು ಮನವಿ ಮಾಡಿದ ಶಾಸಕರು, ಸಲ್ಲಿಕೆಯಾದ ಅರ್ಜಿಗಳನ್ನು ಪರಿಶೀಲಿಸಿ ಒಂದು ವಾರದೊಳಗೆ ಸಮಸ್ಯೆ ಬಗೆಹರಿಸಬೇಕೆಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ರಸ್ತೆ ಒತ್ತುವರಿ ತೆರವು, ಪೌತಿ ಖಾತೆ, ಪಹಣಿ ತಿದ್ದುಪಡಿ, ಇ-ಸ್ವತ್ತು, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹಾಗೂ ವಿವಿಧ ಪಿಂಚಣಿ (ವೃದ್ಧಾಪ್ಯ, ವಿಧವಾ, ಅಂಗವಿಕಲ, ಮನಸ್ವಿನಿ) ಸೌಲಭ್ಯಗಳನ್ನು ಸ್ಥಳದಲ್ಲೇ ಒದಗಿಸಲು ಕ್ರಮ ವಹಿಸಲಾಗಿದೆ. ಕಾರ್ಯಕ್ರಮವನ್ನು ಉದ್ದೇಶಿಸಿ ತಹಶಿಲ್ದಾರ್ ಗಗನಸಿಂಧು ಅವರು ಮಾತನಾಡಿ ಸಾರ್ವಜನಿಕರು ಹಾಗೂ ರೈತರು ತಮ್ಮ ಸಣ್ಣಪುಟ್ಟ ಕೆಲಸ ಕಾರ್ಯಗಳಿಗಾಗಿ ಸರ್ಕಾರಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸುವ ನಿಟ್ಟಿನಲ್ಲಿ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದ್ದು, ಜನರ ಮನೆಬಾಗಿಲಿಗೇ ಸರ್ಕಾರಿ ಸೇವೆಗಳನ್ನು ತಲುಪಿಸುವ ಕಾರ್ಯಕ್ರಮ ರೂಪಿಸಿದೆ ಪ್ರತಿ ತಿಂಗಳ ಮೊದಲನೇ ಶನಿವಾರ ಮತ್ತು ಕೊನೆಯ ಶನಿವಾರ ಹೋಬಳಿವಾರು 'ಜನಸ್ಪಂದನ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಕಂದಾಯ, ಪಂಚಾಯತ್ ರಾಜ್, ಕೃಷಿ, ತೋಟಗಾರಿಕೆ ಸೇರಿದಂತೆ ತಾಲೂಕು ಮಟ್ಟದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಒಂದೇ ಸ್ಥಳದಲ್ಲಿ ಲಭ್ಯವಿರುತ್ತಾರೆ. ಸಾರ್ವಜನಿಕರು ನೀಡುವ ಕುಂದುಕೊರತೆಗಳ ಅರ್ಜಿಗಳನ್ನು ಪರಿಶೀಲಿಸಿ ಬಹುತೇಕ ಸಮಸ್ಯೆಗಳಿಗೆ ಸ್ಥಳದಲ್ಲೇ ಸೂಕ್ತ ಪರಿಹಾರ ಒದಗಿಸಲಾಗುತ್ತದೆ. ಸಭೆಯಲ್ಲಿ ಭಾಗವಹಿಸುವುದರಿಂದ ಸರ್ಕಾರದ ವಿವಿಧ ನೂತನ ಯೋಜನೆಗಳು ಹಾಗೂ ಸೌಲಭ್ಯಗಳ ಬಗ್ಗೆ ಸಾರ್ವಜನಿಕರಿಗೆ ಸರಳವಾಗಿ ಮಾಹಿತಿ ಸಿಗಲಿದೆ. ಜನಸಾಮಾನ್ಯರು ಮತ್ತು ಅಧಿಕಾರಿಗಳ ನಡುವೆ ನೇರ ಸಂಪರ್ಕ ಏರ್ಪಟ್ಟು, ಕೆಲಸ ಕಾರ್ಯಗಳು ಸುಲಭವಾಗಿ ನಡೆಯಲು ಇದು ಸಹಕಾರಿಯಾಗಲಿದೆ. ತಾಲೂಕಿನ ಪ್ರತಿಯೊಬ್ಬ ನಾಗರಿಕರು ಹಾಗೂ ರೈತರು ತಮ್ಮ ವ್ಯಾಪ್ತಿಯ ಹೋಬಳಿಗಳಲ್ಲಿ ನಡೆಯುವ ಈ 'ಜನಸ್ಪಂದನ' ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಇದರ ಸಂಪೂರ್ಣ ಸದುಪಯೋಗ ಪಡೆದುಕೊಳ್ಳಬೇಕೆಂದು ಮನವಿ ಮಾಡಿದರು.

ಸಭೆಯಲ್ಲಿ ಸಾರ್ವಜನಿಕರಿಗಾಗಿ ವಿಬಿ-ಜಿ-ರಾಮ್-ಜಿ' ಯೋಜನೆಯ ಮಾಹಿತಿ ಕೇಂದ್ರ ತೆರೆದು ಕರಪತ್ರಗಳನ್ನು ವಿತರಿಸಲಾಯಿತು. ಇದೇ ವೇಳೆ ಸಾದಲಿ ಹೋಬಳಿಯ ವಿವಿಧ ಪಂಚಾಯಿತಿಗಳ ಫಲಾನುಭವಿಗಳಿಗೆ ಹೊಸ ಜಾಬ್ ಕಾರ್ಡ್‌ಗಳನ್ನು ಶಾಸಕ ಬಿ.ಎನ್. ರವಿಕುಮಾರ್ ಮತ್ತು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಆರ್. ಹೇಮಾವತಿ ಅವರು ವಿತರಿಸಿದರು. ಸಂಜೀವಿನಿ ಯೋಜನೆಯಡಿ ಸೀರೆಗಳು, ತರಕಾರಿ, ನಾಟಿ ವೈದ್ಯಕೀಯ ಸೇವೆ, ಉಚಿತ ಆರೋಗ್ಯ ಶಿಬಿರ ಹಾಗೂ ಗೃಹಬಳಕೆ ಪೀಠೋಪಕರಣಗಳ ಖರೀದಿಗೆ ವಿಶೇಷ ವ್ಯವಸ್ಥೆ ಕಲ್ಪಿಸಲಾಗಿತ್ತು.

ತಾಲೂಕು ಇಓ ಹೇಮಾವತಿ.ಆರ್ ಅವರು ವಸತಿ ಯೋಜನೆಯಡಿ ಮಂಜೂರಾದ ನಿವೇಶನ, ಹಕ್ಕುಪತ್ರ ಹಾಗೂ ತಾಲೂಕಿನ 28 ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಕಾಮಗಾರಿಗಳ ಕುರಿತು ಸಮಗ್ರ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಗಗನಸಿಂಧು, ತಾಲೂಕು ಆಡಳಿತಾಧಿಕಾರಿ ಅಬಿದ್ ಎಸ್.ಎಸ್, ಆರಕ್ಷ ವೃತ್ತ ನಿರೀಕ್ಷಕ ಆನಂದ್ ಕುಮಾರ್, ನರೇಗಾ ಸಹಾಯಕ ನಿರ್ದೇಶಕ ಚಂದ್ರಪ್ಪ, ತಾಲೂಕು ಯೋಜನಾಧಿಕಾರಿ ಅನಿಲ್ ಕುಮಾರ್, ವಸತಿ ಯೋಜನಾಧಿಕಾರಿ ನಾಗೇಶ್, ರೈತ ಸಂಘದ ಮುಖಂಡರಾದ ಗೋವಿಂದರಾಜು, ಶಿವಾರೆಡ್ಡಿ, ಧನಂಜಯರೆಡ್ಡಿ, ಅಶ್ವತ್ಥರೆಡ್ಡಿ, ನರಸಿಂಹರೆಡ್ಡಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಪಿಡಿಓಗಳು ಮತ್ತು ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

# ಶೋಷಿತರನ್ನು ಐಕ್ಯತೆಗೊಳಿಸಿ ಪ್ರಜೆಗಳ ಹಿತರಕ್ಷಣೆಗೆ ಮುಂದಾಗಬೇಕು : ಬಿ ವಿ ಆನಂದ್

**ವಿಜಯ ದುಂಬಿ ಸುದ್ದಿ....**

**ಚಿಕ್ಕಬಳ್ಳಾಪುರ: ದಲಿತ ಸಂಘರ್ಷ ಸಮಿತಿಯ ಪದಾಧಿಕಾರಿಗಳು ಸಮಸ್ತ ಶೋಷಿತರನ್ನು ಐಕ್ಯತೆಗೊಳಿಸಿ ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ಪ್ರಜೆಗಳ ಹಿತರಕ್ಷಣೆಗೆ ಮುಂದಾಗಬೇಕು. ಎಂದು ಜಿಲ್ಲಾ ಸಂಚಾಲಕ ಬಿ ವಿ ಆನಂದ್ ಕರೆ ನೀಡಿದರು ಅವರು ಇಂದು ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದ್ದ ದಸಂಸ ಜಿಲ್ಲಾ ಸಮಿತಿ ಸಭೆಯ ಅದ್ಯಕ್ಷತೆ ವಹಿಸಿ ಮಾತನಾಡಿ ನಮ್ಮ ಪ್ರಜ್ಞಾವಂತ ಸಂಘಟನೆಗಳು ಮತ್ತು ಹೋರಾಟಗಾರರು ಹಾಗೂ ಬುದ್ಧಿಜೀವಿಗಳು ತಾವಿರುವ ಗುಲಾಮತನದ ರಾಜಕೀಯ ಕಪಿಮುಷ್ಟಿಯಿಂದ ಹೊರ ಬಂದು ಅಥವಾ ಅಲ್ಲಿಯೇ ಶೋಷಿತ ಸಮುದಾಯಗಳ ವಿಮುಕ್ತಿಗಾಗಿ ಹೋರಾಟ ಮಾಡುವ ಸ್ವಾಭಿಮಾನದ ವ್ಯಕ್ತಿತ್ವ ಬೆಳೆಸಿಕೊಳ್ಳಬೇಕು.**

ಇದನ್ನು ಬಾಬಾಸಾಹೇಬರು ಸಂವಿಧಾನದಲ್ಲಿ ಕಾನೂನಾತ್ಮಕವಾಗಿ ಅಡಕವಿರಿಸಿದ್ದಾರೆ ಎಂದರು.. ಎಪ್ಪತ್ತರ ದಶಕದ ದಲಿತ ಚಳುವಳಿಗೆ ಐವತ್ತು



ವರ್ಷಗಳಾದರೂ ಪ್ರಾಮಾಣಿಕವಾಗಿ ತಿಳಿದುಕೊಂಡು ಮುನ್ನಡೆಯಬೇಕಾದವರು ತಮ್ಮ ಸ್ವಾರ್ಥಕ್ಕಾಗಿ ಜೈಕಾರ ಕೂಗುವ ಬಾಲಬುಡಕರೊಂದಿಗೆ ಸಾಗುತ್ತಿರುವುದು ನೋವಿನ ಸಂಗತಿಯಾಗಿದೆ. ಈಗ ಖಂಡಿತಾ ಕಾಲ ಮಿಂಚಿಲ್ಲ ಅಳಿದುಳಿದಿರುವ ದಲಿತ ಚಳುವಳಿಯ ಹೋರಾಟಗಾರರು ನಾಡಿನಾದ್ಯಂತ ಉಳಿದಕೊಂಡಿದ್ದಾರೆ. ಪ್ರಾಮಾಣಿಕವಾಗಿ ಜನರಲ್ಲಿ ಭಾಗಿಯಾಗಿ ಅಂಬೇಡ್ಕರ್ ಅವರ ನೈತಿಕ ಪ್ರಜಾತಾಂತ್ರಿಕ ರಾಜಕೀಯ ಮೌಲ್ಯಗಳನ್ನು ಬಿತ್ತಿ ಪರ್ಯಾಯವಾಗಿ ರಾಜಕೀಯ ಪ್ರಜ್ಞೆ ಮೂಡಿಸುವುದು ಅತ್ಯವಶ್ಯವಾಗಿದೆ.

ಜಾಗೃತಿ ಮೂಡಿಸಿದರೆ ಖಂಡಿತಾ ಮುಂದಿನ ದಿನಗಳಲ್ಲಿ ಶೋಷಿತರ ಬಿಡುಗಡೆಗೆ ದಾರಿ ದೀಪವಾಗಲಿದೆ ಅಂಬೇಡ್ಕರ್ ಅವರ ನೈತಿಕ ಪ್ರಜಾತಾಂತ್ರಿಕ ರಾಜಕೀಯ ಮೌಲ್ಯಗಳನ್ನು ಒಳಗೊಂಡಂತೆ ಆಗಲಿ. ಎಪ್ಪತ್ತರ ದಶಕದ ದಲಿತ ಚಳುವಳಿಗೆ ಏಕೋ ಏನೋ ಅಂಬೇಡ್ಕರ್ ಅವರ ನೈತಿಕ ಪ್ರಜಾತಾಂತ್ರಿಕ ರಾಜಕೀಯ ಮೌಲ್ಯಗಳನ್ನು ಮೈಗೂಡಿಸಿಕೊಂಡು ಸಂವಿಧಾನಾತ್ಮಕ ಹಕ್ಕು ಮತ್ತು ಸಾಮಾಜಿಕ ಸಮಾನತೆಯ ಸಮಾಜ ನಿರ್ಮಾಣ ಮಾಡುವ ದೃಷ್ಟಿಕೋನ ಇಲ್ಲದಿರುವುದು ಅಥವಾ ಮರೆತಿರುವುದು ನೋವಿನ ಸಂಗತಿಯಾಗಿದೆ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಈ ಮೇಲೆ ಪ್ರಸ್ತಾಪಿಸಿದ ವಿಷಯಗಳ ಪೂರಕವಾಗಿ ದಸಂಸ ಚಟುವಟಿಕೆಗಳು ಸಾಗುತ್ತಾ ಪ್ರಜಾತಾಂತ್ರಿಕ ವ್ಯವಸ್ಥೆಯಲ್ಲಿ ಜನಸಾಮಾನ್ಯರೊಂದಿಗೆ ಪ್ರಾಮಾಣಿಕವಾಗಿ ಮತ್ತು ಪಾರದರ್ಶಕವಾಗಿ ಹಾಗೂ ಪರಿಣಾಮಕಾರಿಯಾಗಿ ತೊಡಗಿಸಿಕೊಳ್ಳಬೇಕೆಂದು ತಿಳಿಸಿದರು.

ಈ ಸಭೆಯಲ್ಲಿ ಜಿಲ್ಲಾ ಸಂಘಟನಾ ಸಂಚಾಲಕ ಟಿ ಎ ಚಲಪತಿ, ಕೋಟಪ್ಪ, ಬಿ ಎಂ ವೆಂಕಟನಾರಾಯಣಪ್ಪ, ಚೆಂಡೂರು ವೆಂಕಟೆಶಪ್ಪ, ಜಿಲ್ಲಾ ಖಜಾಂಚಿ ಗುಂಡಾಪುರ ಮೂರ್ತಿ, ಜಿಲ್ಲಾ ಸಮಿತಿ ಸದಸ್ಯ ಗಂಗುಲಪ್ಪ, ಕೋನಪ್ಪಲ್ಲಿ ರಾಮಯ್ಯ, ತಾಲ್ಲೂಕು ಸಂಚಾಲಕರಾದ ಜಯಕುಮಾರ್, ಸಂಘಟನಾ ಸಂಚಾಲಕರಾದ ನಡಿಪಣ್ಣ, ಪಿಳ್ಳಣ್ಣ, ಅಶ್ವಥ್ ಬಾಲಪ್ಪ, ಬಾಗೇಪಲ್ಲಿ ತಾಲ್ಲೂಕು ಸಂಚಾಲಕ ಎಲ್ ಎನ್ ನರಸಿಂಹಯ್ಯ, ಭಗವಾನ್ ಮೂರ್ತಿ, ಚೇಳೂರು ತಾಲ್ಲೂಕು ಸಂಚಾಲಕ ಡಿಕೆ ರಮೇಶ್, ಸುದಾಕರ್ ಶಿಡ್ಲಘಟ್ಟ ತಾಲ್ಲೂಕು ಸಂಚಾಲಕ ಲಕ್ಕೇನಹಳ್ಳಿ ವೆಂಕಟೇಶ್, ಅನಿಲ್, ಎನ್ ಟಿ ಆರ್ ಗೌರಿಬಿದನೂರು ತಾಲ್ಲೂಕು ಸಂಚಾಲಕ ಕಾದಲವೇಣಿ ನಾರಾಯಣಸ್ವಾಮಿ, ಇಡಗೂರು ಮೂರ್ತಿ. ಶ್ರೀನಿವಾಸ್ ಪಿಲಿಪ್ಸ್, ನಾಗೇಂದ್ರಬಾಬು, ಮಂಚೇನಹಳ್ಳಿ ತಾಲ್ಲೂಕು ಮಂಜುನಾಥ್ ಗೌಡಗೆರೆ ರಾಘವೇಂದ್ರ, ಕದಿರದೇವರಹಳ್ಳಿ ಅನಿಲ್ ಕುಮಾರ್, ಮಹಿಳಾ ಸಂಚಾಲಕಿ ಮಮತಾ, ಬಾಗ್ಯ ಲಲಿತ, ಸುಬ್ಬಮ್ಮ ವರ್ಲಕೊಂಡ, ವೆಂಕಟಲಕ್ಷ್ಮಮ್ಮ ಗಂಗನಮಿದ್ದೆ, ಮುಂತಾದವರು ಭಾಗವಹಿಸಿದ್ದರು.

# ಚೇರ್ಮನ್ಸ್ ಕ್ಲಬ್ ಮೇಲೆ ಆಹಾರ ಸುರಕ್ಷತಾ ಇಲಾಖೆ ದಾಳಿ: ಕೊಳೆತ ಮೆಣಸಿನಕಾಯಿ ಪತ್ತೆ

**ವಿಜಯ ದುಂಬಿ ಸುದ್ದಿ....**

**ಬೆಂಗಳೂರು: ನಗರದ ಹೋಟೆಲ್, ರೆಸ್ಟೋರೆಂಟ್‌ಗಳಲ್ಲಿ ಆಹಾರ ಸುರಕ್ಷತೆ ಮತ್ತು ನೈರ್ಮಲ್ಯ ಉಲ್ಲಂಘನೆಗಳ ವಿರುದ್ಧ ನಡೆಯುತ್ತಿರುವ ಕಾರ್ಯಾಚರಣೆ ಇದೀಗ ಪ್ರತಿಷ್ಠಿತ ಕ್ಲಬ್‌ಗಳಿಗೂ ವಿಸ್ತರಿಸಿದೆ. ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಅಧಿಕಾರಿಗಳು ಬೆಂಗಳೂರಿನ ವಿವಿಧ ಕ್ಲಬ್‌ಗಳ ಅಡುಗೆಮನೆ ಹಾಗೂ ಆಹಾರ ಸಂಗ್ರಹಣಾ ಪ್ರದೇಶಗಳಲ್ಲಿ ತಪಾಸಣೆ ನಡೆಸುತ್ತಿದ್ದಾರೆ. ಇತ್ತೀಚಿನ ತಪಾಸಣೆಗಳಲ್ಲಿ ಹಲವು ಕ್ಲಬ್‌ಗಳಲ್ಲಿ ಅವಧಿ ಮೀರಿದ ಆಹಾರ, ಅನೈರ್ಮಲ್ಯ, ಕೀಟಬಾಧೆ ಹಾಗೂ ಆಹಾರ ಸಂಗ್ರಹಣೆಯಲ್ಲಿ ನಿಯಮ ಉಲ್ಲಂಘನೆಗಳು ಪತ್ತೆಯಾಗಿವೆ.**

ಸಹಕಾರ ನಗರ?ಡಾಲರ್ಸ್ ಕಾಲೋನಿಯಲ್ಲಿರುವ ಚೇರ್ಮನ್ಸ್ ಕ್ಲಬ್ ಅಡುಗೆಮನೆಯ ಮೇಲೂ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ತಪಾಸಣೆ ವೇಳೆ ಅಡುಗೆಮನೆಯಲ್ಲಿ ತೀವ್ರ ಅನೈರ್ಮಲ್ಯ ಕಂಡುಬಂದಿದ್ದು, ಅವಧಿ ಮೀರಿದ ಸುಮಾರು 40 ಕೆ.ಜಿ. ಮೆಣಸಿನಕಾಯಿ ಪತ್ತೆಯಾಗಿದೆ. ಆಹಾರದಲ್ಲಿ ಬಳಸಲು ನಿಯಮಬಾಹಿರವಾಗಿರುವ ಕೃತಕ ಬಣ್ಣಗಳ ಬಳಕೆ ಅಥವಾ ಸಂಗ್ರಹವೂ ಅಧಿಕಾರಿಗಳ ಗಮನಕ್ಕೆ ಬಂದಿದೆ.

ಇದರ ಜತೆಗೆ ಸಸ್ಯಾಹಾರಿ ಮತ್ತು ಮಾಂಸಾಹಾರಿ ಆಹಾರ ಪದಾರ್ಥಗಳನ್ನು ಪ್ರತ್ಯೇಕವಾಗಿ ಸಂಗ್ರಹಿಸದೆ ಒಟ್ಟಿಗೆ ಇರಿಸಿರುವುದು, ಆಹಾರ ಸಂಗ್ರಹಣೆ ಮತ್ತು ನಿರ್ವಹಣೆಯಲ್ಲಿ ಅಗತ್ಯ ಮುನ್ನೆಚ್ಚರಿಕೆಗಳನ್ನು ಪಾಲಿಸದಿರುವುದು ಕೂಡ ಪತ್ತೆಯಾಗಿದೆ. ನಿಯಮ ಉಲ್ಲಂಘನೆಗಳ ಹಿನ್ನೆಲೆಯಲ್ಲಿ ಅಧಿಕಾರಿಗಳು ಕ್ಲಬ್‌ನ ಅಡುಗೆಮನೆಯನ್ನು ಮುಚ್ಚಿಸಿದ್ದಾರೆ.



ಬೆಂಗಳೂರಿನಲ್ಲಿ ಕಳೆದ ಕೆಲವು ದಿನಗಳಿಂದ ಆಹಾರ ಸುರಕ್ಷತಾ ಅಧಿಕಾರಿಗಳು ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು ಮತ್ತು ಇತರ ಆಹಾರ ಮಳಿಗೆಗಳ ಮೇಲೆ ನಿರಂತರ ತಪಾಸಣೆ ನಡೆಸುತ್ತಿದ್ದಾರೆ. ಮೂರು ದಿನಗಳ ವಿಶೇಷ ಕಾರ್ಯಾಚರಣೆಯೊಂದರಲ್ಲೇ 60 ಹೋಟೆಲ್‌ಗಳಲ್ಲಿ ತಪಾಸಣೆ ನಡೆಸಿ 77 ಆಹಾರ ಮಾದರಿಗಳನ್ನು ಸಂಗ್ರಹಿಸಲಾಗಿತ್ತು; 640 ಕೆ.ಜಿ. ಮಾಂಸ ಹಾಗೂ 276 ಕೆ.ಜಿ. ಕೊಳೆತ ತರಕಾರಿಗಳನ್ನು ವಶಪಡಿಸಿಕೊಳ್ಳಲಾಗಿತ್ತು.

ಇದಾದ ಬಳಿಕ ನಗರದ ಪ್ರತಿಷ್ಠಿತ ಕ್ಲಬ್‌ಗಳ ಅಡುಗೆಮನೆಗಳ ಮೇಲೂ ಅಧಿಕಾರಿಗಳು ಕಣ್ಣಿಟ್ಟಿದ್ದಾರೆ. ಆಗಸ್ಟ್ 25ರಂದು ನಡೆದ ವಿಶೇಷ ತಪಾಸಣೆಯಲ್ಲಿ ಸೆಂಚುರಿ ಕ್ಲಬ್, ಕೆಎಸ್‌ಸಿಎ ಕ್ಲಬ್, ರೇಸ್‌ಕೋರ್ಸ್ ಕ್ಲಬ್, ಬೋರಿಂಗ್ ಇನ್‌ಸ್ಟಿಟ್ಯೂಟ್, ಕ್ಯಾಥೋಲಿಕ್ ಕ್ಲಬ್, ಬ್ಯಾಡ್ಮಿಂಟನ್ ಕ್ಲಬ್, ಟೆನಿಸ್ ಕ್ಲಬ್, ವಿಜಯನಗರ ಕ್ಲಬ್, ಮಹಾಲಕ್ಷ್ಮಿ ಲೇಔಟ್ ಕ್ಲಬ್ ಮತ್ತು ಮಲ್ಲೇಶ್ವರಂ ಕ್ಲಬ್ ಸೇರಿದಂತೆ 10 ಕ್ಲಬ್‌ಗಳನ್ನು ಪರಿಶೀಲಿಸಲಾಗಿತ್ತು.

ಕೆಲವು ಕ್ಲಬ್‌ಗಳಲ್ಲಿ ಅವಧಿ ಮೀರಿದ ಆಹಾರ, ಜಿರಳೆಗಳ ಬಾಧೆ, ಅಡುಗೆಮನೆಯಲ್ಲಿ ಅನೈರ್ಮಲ್ಯ, ಸರಿಯಾದ ಲೇಬಲ್‌ಗಳ ಕೊರತೆ ಹಾಗೂ ಆಹಾರ ಸಂಗ್ರಹಣೆಯಲ್ಲಿ ಲೋಪಗಳು ಕಂಡುಬಂದಿದ್ದವು. ಗಂಭೀರ ಉಲ್ಲಂಘನೆಗಳ ಹಿನ್ನೆಲೆಯಲ್ಲಿ ನೋಟಿಸ್ ಜಾರಿ ಸೇರಿದಂತೆ ಕ್ರಮ ಕೈಗೊಳ್ಳಲಾಗಿದೆ. ಪ್ರತಿಷ್ಠಿತ ಕ್ಲಬ್‌ಗಳು ಸದಸ್ಯರು ಮತ್ತು ಗ್ರಾಹಕರಿಗೆ ಕಟ್ಟುನಿಟ್ಟಿನ ನಿಯಮಗಳನ್ನು ವಿಧಿಸುವುದರ ಜತೆಗೆ, ತಮ್ಮ ಅಡುಗೆಮನೆಗಳ ಆಹಾರ ಸುರಕ್ಷತೆ ಮತ್ತು ಸ್ವಚ್ಛತೆಯ ಮೇಲೂ ಅಷ್ಟೇ ಕಟ್ಟುನಿಟ್ಟಿನ ಗಮನ ಹರಿಸಬೇಕು ಎಂಬ ಚರ್ಚೆಗೂ ಈ ಕಾರ್ಯಾಚರಣೆ ಕಾರಣವಾಗಿದೆ.

**1ನೇ ಪುಟದಿಂದ....**

ಶ್ರೀಸಾಮಾನ್ಯರ ಸಮಸ್ಯೆಗಳನ್ನು ಪರಿಹರಿಸುವ ಕ್ರಾಂತಿಗೆ ಕಾರಣವಾಗಬೇಕು. ಶ್ರೀಸಾಮಾನ್ಯರು ಅರ್ಜಿ ಹಿಡಿದು ಯಾರ ಮನೆ ಬಾಗಿಲಿಗೂ ಅಲೆಯದಂತೆ ವ್ಯವಸ್ಥೆ ರೂಪಿಸುವ ಉದ್ದೇಶದಿಂದ ಇಲಾಖೆ ಆರಂಭಿಸಲಾಗಿದೆ ಎಂದರು.

ಪ್ರತಿಯೊಂದು ಇಲಾಖೆಯಲ್ಲೂ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದ್ದು, ಪ್ರಜಾಸೇವಾ ಇಲಾಖೆಯ ಮೂಲಕ ಸ್ವೀಕರಿಸುವ ಅಹವಾಲುಗಳನ್ನು 15ರಿಂದ 20 ದಿನಗಳೊಳಗೆ ಪರಿಹರಿಸಬೇಕು ಎಂದು ಸೂಚಿಸಲಾಗಿದೆ ಎಂದು ಹೇಳಿದರು.ಶಿವಕುಮಾರ್ ಅವರು ದೆಹಲಿಯ ತಿಹಾರ್ ಜೈಲಿನಲ್ಲಿದ್ದ ಸಂದರ್ಭದಲ್ಲಿ ಅವರನ್ನು ಭೇಟಿ ಮಾಡಲು ಬಂದ ಜನರ ಕಣ್ಣೀರು ಒರೆಸುವ ನಾಯಕರಾಗಬೇಕು ಎಂದು ಆಶಿಸಿದರು. ಬರಪೀಡಿತ ತಾಲ್ಲೂಕುಗಳ ಪಟ್ಟಿಗೆ ಸೇರಿಸಲು ಮನವಿ ಮುಜರಾಯಿ ಸಚಿವ ಕೆ.ಎಸ್. ಬಸವಂತಪ್ಪ ಮಾತನಾಡಿ, ವಿಜಯನಗರ ನೂತನ ಜಿಲ್ಲೆಯಾಗಿದ್ದು, ಹಲವು ಸಮಸ್ಯೆಗಳನ್ನು ಎದುರಿಸುತ್ತಿದೆ. ಅವುಗಳ ಪರಿಹಾರಕ್ಕೆ ಸರ್ಕಾರ ಅಗತ್ಯ ನೆರವು ನೀಡಬೇಕು ಎಂದು ಮನವಿ ಮಾಡಿದರು. ಮಳೆ ಕೊರತೆಯಿಂದ ಬರಗಾಲದ ಛಾಯೆ ಆವರಿಸಿರುವ ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳ ಪಟ್ಟಿಗೆ ಸೇರಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.ಕಾರ್ಯಕ್ರಮದಲ್ಲಿ ವಿಧಾನಸಭೆ ಉಪಾಧ್ಯಕ್ಷ ಮಂಕಾಳ ವೈದ್ಯ, ಸಂಸದ ಇ. ತುಕಾರಾಂ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಶಾಸಕರು ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ಕುಂಭಕರ್ಣನ ನಿದ್ದೆಯಲ್ಲಿರುವ ಸರ್ಕಾರವನ್ನು ಬಿಜೆಪಿ ಬಡಿದೆಬ್ಬಿಸುತ್ತಿದೆ: ವಿಜಯೇಂದ್ರ

**ವಿಜಯ ದುಂಬಿ ಸುದ್ದಿ....**

**ಕಾರಟಗಿ (ಕೊಪ್ಪಳ ಜಿಲ್ಲೆ): ಕುಂಭಕರ್ಣನ ನಿದ್ದೆಯಲ್ಲಿರುವ ರಾಜ್ಯ ಸರ್ಕಾರ ಮತ್ತು ಮುಖ್ಯಮಂತ್ರಿ ಅವರನ್ನು ಬಿಜೆಪಿ ಬಡಿದೆಬ್ಬಿಸುವ ಕೆಲಸ ಮಾಡುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಟೀಕಿಸಿದರು.**



ಬಳ್ಳಾರಿ ಚಲೋ ಪಾದಯಾತ್ರೆಯ ಐದನೇ ದಿನವಾದ ಇಂದು ಕಾರಟಗಿಯ ಎಪಿಎಂಸಿ ಯಾರ್ಡ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳ ನೆಪದಲ್ಲಿ ಗಾಳಿಯಲ್ಲಿ ಗೋಪುರ ಕಟ್ಟುತ್ತಿದೆ. ಇದನ್ನು ಹೊರತುಪಡಿಸಿ ರಾಜ್ಯದಲ್ಲಿ ಬೇರೆ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ ಎಂದು ಆರೋಪಿಸಿದರು. ಕಳೆದ ಮೂರು ವರ್ಷಗಳಿಂದ ಗ್ಯಾರಂಟಿ ಯೋಜನೆಗಳ ಬಗ್ಗೆ ಸರ್ಕಾರ ಭಾರಿ ಪ್ರಚಾರ ನಡೆಸಿದೆ. ಇದು ಜನಪ್ರಿಯ ಸರ್ಕಾರವಲ್ಲ, 'ಜಾಹೀರಾತು ಸರ್ಕಾರ' ಎಂದು ತಾನು ಈ ಹಿಂದೆಯೇ ಹೇಳಿದ್ದೆ ಎಂದು ವ್ಯಂಗ್ಯವಾಡಿದರು. ಮುಂದಿನ ಚುನಾವಣೆಯಲ್ಲೂ ತಮ್ಮದೇ ಸರ್ಕಾರ ಅಧಿಕಾರಕ್ಕೆ ಬರಲಿದೆ ಎಂಬ ಭ್ರಮೆಯಲ್ಲಿ ಕಾಂಗ್ರೆಸ್ ಇದೆ. ಆದರೆ ಎಲ್ಲ ವರ್ಗದ ಜನರಿಗೆ ಸರ್ಕಾರ ಅನ್ಯಾಯ ಮಾಡಿದೆ. ಆಡಳಿತ ಪಕ್ಷದ ಶಾಸಕರೇ ತಮ್ಮ ಸರ್ಕಾರ ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ಹೇಳುತ್ತಿದ್ದಾರೆ. ಇನ್ನಾದರೂ ಸರ್ಕಾರ ಎಚ್ಚೆತ್ತು ಬಡವರು ಮತ್ತು ರೈತರ ಬಗ್ಗೆ ಕಾಳಜಿ ವಹಿಸಬೇಕು ಎಂದರು. ಅರ್ಹ ಫಲಾನುಭವಿಗಳಿಗೆ ಗೃಹಲಕ್ಷ್ಮಿ ಯೋಜನೆಯ ಹಣ ತಲುಪದಿದ್ದರೆ ಇದಕ್ಕೆ ಯಾರು ಹೊಣೆ ಎಂದು ಪ್ರಶ್ನಿಸಿದ ವಿಜಯೇಂದ್ರ, ಶಕ್ತಿ ಯೋಜನೆಗೆ ಸರ್ಕಾರ ಭಾರಿ ಪ್ರಚಾರ ನೀಡುತ್ತಿದೆ. ಆದರೆ ಗ್ರಾಮೀಣ ಪ್ರದೇಶಗಳಲ್ಲಿ ಸಾಕಷ್ಟು ಬಸ್‌ಗಳೇ ಇಲ್ಲ. ಇದರಿಂದ ಶಾಲಾ–ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಹೇಳಿದರು. ಹಿಂದೆ ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ ಶಾಲಾ ಮಕ್ಕಳಿಗೆ ಸೈಕಲ್‌ಗಳನ್ನು ನೀಡಲಾಗಿತ್ತು. ಕಾಂಗ್ರೆಸ್ ಸರ್ಕಾರ ಆ ಯೋಜನೆಗೂ ಕನ್ನ ಹಾಕಿದೆ ಎಂದು ಆರೋಪಿಸಿದರು.

# ಕಾಳಗಿ ಪಟ್ಟಣದಲ್ಲಿ ನೂತನ ನ್ಯಾಯಾಲಯ ಉದ್ಘಾಟನೆ

**ವಿಜಯ ದುಂಬಿ ಸುದ್ದಿ....**

**ಕಾಳಗಿ: ಪಟ್ಟಣದಲ್ಲಿ ನೂತನವಾಗಿ ಸ್ಥಾಪಿಸಲಾದ ಸಿವಿಲ್ ನ್ಯಾಯಾಧೀಶರು ಹಾಗೂ ಜೆ-ಎಂಎಫ್‌ಸಿ ನ್ಯಾಯಾಲಯದ ಉದ್ಘಾಟನಾ ಸಮಾರಂಭ ಶನಿವಾರ ಬೆಳಿಗ್ಗೆ 11ಕ್ಕೆ ನ್ಯಾಯಾಲಯದ ಆವರಣದಲ್ಲಿ ನಡೆಯಿತು.**

ನ್ಯಾಯಮೂರ್ತಿ ಶಿವಶಂಕರ್ ಅಮರಣ್ಣವರ್ ಅವರಿಗೆ ಪೊಲೀಸ್ ಇಲಾಖೆಯಿಂದ ಸರ್ಕಾರಿ ಗೌರವಗಳೊಂದಿಗೆ ಸ್ವಾಗತ ಕೋರಿದರು. ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಹಾಗೂ ಕಲಬುರಗಿ ಜಿಲ್ಲೆಯ ಆಡಳಿತ ನ್ಯಾಯಾಧೀಶರಾದ ನ್ಯಾಯಮೂರ್ತಿ ಶಿವಶಂಕರ್ ಅಮರಣ್ಣವರ್ ಅವರು ನೂತನ ನ್ಯಾಯಾಲಯವನ್ನು ಉದ್ಘಾಟಿಸಿದರು. ನಂತರ ಶ್ರೀ ನೀಲಕಂಠ ಕಾಳೇಶ್ವರ ಕಲ್ಯಾಣ






ಮಂಟಪ ವೇದಿಕೆಯಲ್ಲಿ ಶ್ರೀನಿವಾಸ್ ನವಲಿ ಕಾರ್ಯಕ್ರಮದ ಸ್ವಾಗತ ಕೋರಿದರು. ವಿಧಾನ ಪರಿಷತ್ ಸದಸ್ಯ ಜಗದೇವ್ ಗುತ್ತೇದಾರ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದರು ಚಿಂಚೋಳಿ ವಿಧಾನಸಭಾ ಕ್ಷೇತ್ರದ ಶಾಸಕ ಡಾ. ಅವಿನಾಶ್ ಜಾಧವ್ ಅವರು ವಿಶೇಷ ಆಹ್ವಾನಿತರಾಗಿ ಭಾಗವಹಿಸಿದರು. ಜ್ಯೋತಿ ಬೆಳಗಿಸುವ ಮೂಲಕ ನ್ಯಾಯಮೂರ್ತಿ ಶಿವಶಂಕರ್ ಅಮರಣ್ಣವರ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ಮಾತನಾಡಿದ ನ್ಯಾಯಾಧೀಶರು ಕಾಳಗಿಯಲ್ಲಿ ನೂತನ ನ್ಯಾಯಾಲಯ ಆರಂಭವಾಗುತ್ತಿರುವುದರಿಂದ ಕಾಳಗಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರಿಗೆ ನ್ಯಾಯಾಂಗ ಸೇವೆಗಳು ಸ್ಥಳೀಯವಾಗಿಯೇ ಲಭ್ಯವಾಗಲಿದ್ದು, ನ್ಯಾಯಕ್ಕಾಗಿ ದೂರದ ಪ್ರದೇಶಗಳಿಗೆ ತೆರಳುವ ಅನಿವಾರ್ಯತೆ ಕಡಿಮೆಯಾಗಲಿದೆ. ನೂತನ ನ್ಯಾಯಾಲಯವು ಸಾರ್ವಜನಿಕರಿಗೆ ತ್ವರಿತ ಹಾಗೂ ಸುಲಭವಾಗಿ ನ್ಯಾಯ ದೊರಕಿಸುವಲ್ಲಿ ಮಹತ್ವದ ಪಾತ್ರ ವಹಿಸಲಿದೆ ಎಂದು ತಿಳಿಸಿದರು ಮುಂದಿನ ದಿನಗಳಲ್ಲಿ ಕೋರ್ಟಿನ (ಪರಮನೆಂಟ್ ) ಸ್ಥಳವಕಾಶವನ್ನು ಶ್ರೀ ಶಿವಶರಣಪ್ಪ ಕಮಲಾಪುರ್ 4 ಎಕ್ಕರೆ ತಮ್ಮ ಸ್ವಂತ ಜಾಗವನ್ನು ಕೋರ್ಟಿನ ಕಟ್ಟಡಕ್ಕೆ ಮೀಸಲಿಡುವುದಾಗಿ ತಿಳಿಸಿದರು.

ತಾಲೂಕಿನಲ್ಲಿ ಸರ್ಕಾರ ಅನೇಕ ಕಚೇರಿಗಳನ್ನು ತೆರೆದಿದೆ. ಆದರೆ ಸಿವಿಲ್ ಮತ್ತು ಜೆಎಂಎಫ್‌ಸಿ ಕೋರ್ಟ್ ಅಸ್ತಿತ್ವಕ್ಕೆ ಬಂದಿರಲಿಲ್ಲ. ಹೀಗಾಗಿ ತಾಲ್ಲೂಕಿನ ಜನರು ಚಿತ್ತಾಪುರ ಅಥ-ವಾ ಚಿಂಚೋಳಿ ಕೋರ್ಟ್‌ಗೆ ಅಲೆದಾಡುವುದು ಅಗತ್ಯವೇ ಇಲ್ಲ ಎಂದು ತಿಳಿಸಿದರು ಈ ಸಂದರ್ಭದಲ್ಲಿ ಕಾಳಗಿ ತಾಲೂಕಿನ ವಕೀಲರ ಸಂಘದ ಅಧ್ಯಕ್ಷ ಡಿ ಎಸ್ ನಾಮದರ ವಿಧಾನ ಪರಿಷತ್ ಸದಸ್ಯ ಜಗದೇವ ಗುತ್ತೇದಾರ್ ಜಿಲ್ಲಾ ನ್ಯಾಯಾಂಗ, ಕಲಬುರಗಿ ಹಾಗೂ ಕಾಳಗಿ ಬಾರ್ ಅಸೋಸಿಯೇಷನ್ (ಅಆಊಔಅ) ಸಾರ್ವಜನಿಕರು, ವಕೀಲರು ಹಾಗೂ ಗಣ್ಯರನ್ನು ಉಪಸ್ಥಿತರಿದ್ದರು

## ಹೋಟೆಲ್, ರೆಸ್ಟೋರೆಂಟ್, ಕ್ಲಬ್ ಬಳಿಕ ಪಿಜಿಗಳಿಗೂ ಆಹಾರ ಇಲಾಖೆ ದಾಳಿ, ಊಟದ ಮೇಜಿನ ಮೇಲೆ ತಿಗಣೆ ಔಷಧಿ!

**ವಿಜಯ ದುಂಬಿ ಸುದ್ದಿ....**

**ಬೆಂಗಳೂರು: ಹೋಟೆಲ್, ರೆಸ್ಟೋರೆಂಟ್‌ಗಳ ಬಳಿಕ ಇದೀಗ ಬೆಂಗಳೂರಿನ ಪಿಜಿಗಳಲ್ಲೂ ಆಹಾರ ಸುರಕ್ಷತಾ ಇಲಾಖೆ ದಾಳಿ ಮುಂದುವರಿಸಿದೆ. ಕಳಪೆ ಗುಣಮಟ್ಟದ ಆಹಾರ, ಸ್ವಚ್ಛತೆಯ ಕೊರತೆ ಹಾಗೂ ಆಹಾರ ಸಂಗ್ರಹಣೆಯಲ್ಲಿ ನಿಯಮ ಉಲ್ಲಂಘನೆ ಕುರಿತು ಬಂದ ದೂರುಗಳ ಹಿನ್ನೆಲೆಯಲ್ಲಿ ಶುಕ್ರವಾರ ವಿಶೇಷ ತಪಾಸಣಾ ಕಾರ್ಯಾಚರಣೆ ನಡೆಸಲಾಗಿದೆ.**

ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ಒಟ್ಟು 64 ಪಿಜಿಗಳ ಮೇಲೆ ಅಧಿಕಾರಿಗಳ ತಂಡ ದಾಳಿ ನಡೆಸಿ ಅಡುಗೆ ಮನೆ, ಆಹಾರ ತಯಾರಿಕೆ, ಸಂಗ್ರಹಣೆ, ನೀರು ಪೂರೈಕೆ ಹಾಗೂ ಸ್ವಚ್ಛತಾ ವ್ಯವಸ್ಥೆ ಪರಿಶೀಲಿಸಿದೆ. ತಪಾಸಣೆ ವೇಳೆ 23 ಪಿಜಿಗಳಲ್ಲಿ ಆಹಾರ ಸುರಕ್ಷತೆ ಮತ್ತು ಸ್ವಚ್ಛತೆಗೆ ಸಂಬಂಧಿಸಿದ ಲೋಪಗಳು ಕಂಡುಬಂದಿದ್ದು, ಸಂಬಂಧಪಟ್ಟ ಪಿಜಿಗಳಿಗೆ ನೋಟಿಸ್ ನೀಡಲಾಗಿದೆ. ಜೊತೆಗೆ ಆಹಾರದ



ಗುಣಮಟ್ಟ ಮತ್ತು ಸುರಕ್ಷತಾ ಮಾನದಂಡಗಳನ್ನು ಪರಿಶೀಲಿಸಲು 12 ಆಹಾರ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ.

ಅವಧಿ ಮೀರಿದ ಆಹಾರ ವಸ್ತುಗಳು ಪತ್ತೆ ಕೆಲವು ಪಿಜಿಗಳಲ್ಲಿ ಅವಧಿ ಮೀರಿದ ಆಹಾರ ಪದಾರ್ಥಗಳನ್ನು ಬಳಸುತ್ತಿರುವುದು ಅಧಿಕಾರಿಗಳ ತಪಾಸಣೆಯಲ್ಲಿ ಬಯಲಾಗಿದೆ. ಅವಧಿ ಮೀರಿದ ಮೊಸರು, ಬಿಸಿಬೇಳೆ ಬಾತ್ ಪೌಡರ್, ಅಕ್ಕಿ ಹಿಟ್ಟು, ಸಿಂಥೆಟಿಕ್ ಆಹಾರ ಬಣ್ಣ, ಕಾಳುಮೆಣಸು ಹಾಗೂ ಸರಿಯಾದ ಲೇಬಲ್ ಇಲ್ಲದ ಮಿಶ್ರಣ ಸೇರಿದಂತೆ ಹಲವು ವಸ್ತುಗಳು ಪತ್ತೆಯಾಗಿವೆ. ನಿಯಮಾನುಸಾರ ಇವುಗಳನ್ನು ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

ಊಟದ ಮೇಜಿನ ಮೇಲೆಯೇ ತಿಗಣಿ ಪುಡಿ! ಪಿಜಿಗಳ ತಪಾಸಣೆಯಲ್ಲಿ ಅತ್ಯಂತ ಆತಂಕಕಾರಿ ಸಂಗತಿ ಬೊಮ್ಮಸಂದ್ರದ ನಂದನ ಎಲೈಟ್ ಪಿಜಿಯಲ್ಲಿ ಬೆಳಕಿಗೆ ಬಂದಿದೆ. ಆಹಾರ ಪದಾರ್ಥಗಳಿದ್ದ ಊಟದ ಮೇಜಿನ ಮೇಲೆಯೇ ತಿಗಣೆ ನಿಯಂತ್ರಣಕ್ಕೆ ಬಳಸುವ ಪುಡಿ ಇಡಲಾಗಿತ್ತು. ಆಹಾರ ಇರುವ ಸ್ಥಳದಲ್ಲಿ ಕೀಟನಾಶಕ/ಪೆಸ್ಟ್ ಕಂಟ್ರೋಲ್ ವಸ್ತು ಇಟ್ಟಿರುವುದು ಗಂಭೀರ ಆಹಾರ ಸುರಕ್ಷತಾ ಲೋಪ ಎಂದು ಅಧಿಕಾರಿಗಳು ಪರಿಗಣಿಸಿದ್ದಾರೆ. ಇಷ್ಟೇ ಅಲ್ಲದೆ, ಕುಡಿಯುವ ನೀರಿನ ವ್ಯವಸ್ಥೆ ಇರುವ ಜಾಗದಲ್ಲೇ ಬಳಕೆಯಾಗದ ಮತ್ತು ಆಹಾರಕ್ಕೆ ಸಂಬಂಧಿಸದ ವಸ್ತುಗಳನ್ನು ಸಂಗ್ರಹಿಸಿರುವುದು ಕೂಡ ಪತ್ತೆಯಾಗಿದೆ.

ಒಟ್ಟಾರೆ ಅಲ್ಲಿನ ಸ್ವಚ್ಛತಾ ಪರಿಸ್ಥಿತಿಯೂ ಸಮರ್ಪಕವಾಗಿರಲಿಲ್ಲ. ಹೀಗಾಗಿ ನಂದನ ಎಲೈಟ್ ಪಿಜಿಯ ಡೈನಿಂಗ್ ಏರಿಯಾವನ್ನು ಅಧಿಕಾರಿಗಳು ಸೀಲ್ ಮಾಡಿದ್ದಾರೆ. ಪಿಜಿ ಮಾಲೀಕರಿಗೆ ಖಡಕ್ ಸೂಚನೆ ಆಹಾರ ಸುರಕ್ಷತಾ ಇಲಾಖೆ ಎಲ್ಲಾ ಪಿಜಿ ಮಾಲೀಕರು ಹಾಗೂ ಆಹಾರ ನಿರ್ವಹಣೆಯಲ್ಲಿ ತೊಡಗಿರುವವರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದೆ. ಆಹಾರ ಪದಾರ್ಥಗಳನ್ನು ಸುರಕ್ಷಿತವಾಗಿ ಸಂಗ್ರಹಿಸಬೇಕು, ಗುಣಮಟ್ಟದ ಕಚ್ಚಾ ವಸ್ತುಗಳನ್ನು ಮಾತ್ರ ಬಳಸಬೇಕು, ಅಡುಗೆ ಮನೆ ಮತ್ತು ಆಹಾರ ತಯಾರಿಕಾ ಪ್ರದೇಶಗಳಲ್ಲಿ ಸ್ವಚ್ಛತೆ ಕಾಪಾಡಬೇಕು ಹಾಗೂ ಅವಧಿ ಮೀರಿದ ಆಹಾರವನ್ನು ಯಾವುದೇ ಕಾರಣಕ್ಕೂ ಬಳಸಬಾರದು ಅಥವಾ ವಿತರಿಸಬಾರದು ಎಂದು ಎಚ್ಚರಿಕೆ ನೀಡಲಾಗಿದೆ. ನಿಯಮ ಉಲ್ಲಂಘನೆ ಮುಂದುವರಿದರೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ ಹಾಗೂ ಸಂಬಂಧಿತ ನಿಯಮಗಳ ಅಡಿ ಕಾನೂನು ಕ್ರಮ ಕೈಗೊಳ್ಳುವುದಾಗಿ ಇಲಾಖೆ ತಿಳಿಸಿದೆ.

## ಪ್ರತಿಭೆಗಳನ್ನು ತಯಾರಿಸುವ ಶಿಕ್ಷಕರಿಗೆ ಗೌರವಿಸುವುದು ಶ್ರೇಷ್ಠ–ಡಾ.ಸಮೀರ ಹಾದಿಮನಿ

**ವಿಜಯ ದುಂಬಿ ಸುದ್ದಿ....**

**ಆಲಮೇಲ: ತೆರೆಯ ಮರೆಯ ಕಾಯಿ ಯಂತೆ ಇರುವ ಅದ್ಭುತವಾದ ಪ್ರತಿಭೆಗಳನ್ನು ತಯಾರಿಸುವ ಶಿಕ್ಷಕರಿಗೆ ಗೌರವಿಸಿರುವುದು ಕವಿವಾಣಿ ಸಾಹಿತ್ಯ ಪರಿಷತ್ತಿನ ಕಾರ್ಯ ಶ್ಲಾಘನೀಯ ಎಂದು ಸಾಹಿತಿ ಡಾ.ಸಮೀರ ಹಾದಿಮನಿ ಅಭಿಪ್ರಾಯ ವ್ಯಕ್ತಪಡಿಸಿದರು.**

ಪಟ್ಟಣದ ವಿಶ್ವೇಶ್ವರ ಬಾಲಭಾರತಿ ಅನುದಾನಿತ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿರುವ ಕವಿವಾಣಿ ಸಾಹಿತ್ಯ ಪರಿಷತ್ತು, ಕರ್ನಾಟಕ ಜಿಲ್ಲಾ ಘಟಕ ವಿಜಯಪುರ ರವರು ಹಮ್ಮಿಕೊಂಡಿರುವ ಶಿಕ್ಷಕರ ದಿನಾಚರಣೆ ಹಾಗೂ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು ಶ್ರೇಷ್ಠ ತತ್ವಜ್ಞಾನಿ, ಶಿಕ್ಷಣ ಚಿಂತಕರು ಡಾ.ಸರ್ವಪಲ್ಲಿ ರಾಧಾಕೃಷ್ಣನ್ ರವರ ಜಯಂತಿ ಹಾಗೂ ಶಿಕ್ಷಕರ ದಿನವನ್ನು ಅರ್ಥಪೂರ್ಣವಾಗಿ ಆಚರಿಸುವ ಈ ದಿನ ದಂದು ಬಾಲಭಾರತಿ ಶಾಲೆಯ



ಶಿಕ್ಷಕರ ಒಗ್ಗಟ್ಟು, ಶಿಸ್ತು ಬದ್ಧ ಪಾಠಬೋಧನೆ ಮುಖಾಂತರ ಪಟ್ಟಣದಲ್ಲಿ ಜನಮನ್ನಣೆ ಸಂಪಾದನೆ ಮಾಡಿರುವ ಶಿಕ್ಷಕರ ಕಾರ್ಯವನ್ನು ಗುರುತಿಸಿ ಕವಿವಾಣಿ ಸಾಹಿತ್ಯ ಪರಿಷತ್ತು ಎಲ್ಲ ಶಿಕ್ಷಕರಿಗೆ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿರುವುದು ಅಭಿನಂದನಾಹ್ರ ಕಾರ್ಯ ಎಂದರು.

ಪ್ರಶಸ್ತಿ ಪ್ರಧಾನ ಮಾಡಿ ಮಾತನಾಡಿದ ಜಿಲ್ಲಾಧ್ಯಕ್ಷ ಕುದರತ್ ಅಲಿ ಭೂಸನೂರ ರವರು ಕವಿವಾಣಿ ಸಾಹಿತ್ಯ ಪರಿಷತ್ತು ಉತ್ತಮ ಕಾರ್ಯವನ್ನು ಮಾಡುವವರನ್ನು ಗುರುತಿಸಿ ಅಭಿನಂದನೆ ಸಲ್ಲಿಸುವ ಕಾರ್ಯ ನಿರಂತರವಾಗಿ ಮಾಡುತ್ತಾ ಬಂದಿದ್ದು.ಗ್ರಾಮೀಣ ಮಟ್ಟದ ಅತ್ಯಂತ ಹಿಂದುಳಿದ ಪ್ರದೇಶದ ಮಕ್ಕಳಿಗೆ ಅತ್ಯಾಧುನಿಕ ತಂತ್ರಜ್ಞಾನ ಆಧಾರಿತ ಪಾಠ ಬೋಧನೆ,ಹಾಗೂ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳಲ್ಲಿ ಸದಾಕಾಲ ಕ್ರಿಯಾಶೀಲ ಇರುವ ಬಾಲಭಾರತಿ ಶಾಲೆಯ ಸಿಬ್ಬಂದಿ ಯವರನ್ನು ಗೌರವಿಸುತ್ತಿರುವುದು ನಮ್ಮ ಸೌಭಾಗ್ಯ ಎಂದು ಮುಂದೆ ಇನ್ನೂ ಹೆಚ್ಚಿನ ರೀತಿಯಲ್ಲಿ ಶೈಕ್ಷಣಿಕ ವಾಗಿ ಶ್ರಮಿಸುವಂತೆ ಶುಭ ಹಾರೈಸಿದರು.

ಈ ವೇಳೆ ಸಾನಿಧ್ಯ ವಹಿಸಿದ ಪ್ರಜಾಪಿತ ಈಶ್ವರಿ ವಿಶ್ವವಿದ್ಯಾಲಯದ ರೇಣುಕಾ ಅಕ್ಕನವರು, ಸಂಸ್ಥೆಯ ಅಧ್ಯಕ್ಷ ಶ್ರೀಶೈಲಪ್ಪ ಜೋಗೂರ ,ಮುಖ್ಯ ಶಿಕ್ಷಕ ಲಕ್ಷ್ಮೀಪುತ್ರ ಕಿರನಳ್ಳಿ ಮಾತನಾಡಿದರು. ಈ ವೇಳೆ ಮುಖ್ಯ ಶಿಕ್ಷಕ ಲಕ್ಷ್ಮೀಪುತ್ರ ಕಿರನಳ್ಳಿ ಶಿಕ್ಷಕರಾದ ಚಂದ್ರಕಾಂತ ದೇವರಮನಿ,ಪ್ರಶಾಂತ ಗಡದೆ,ಲಕ್ಷ್ಮೀಬಾಯಿ ಹಳೇಮನಿ,ಸುವರ್ಣ ಸಾರಂಗಮಠ, ಸೀತಾ ಆರೇಶಂಕರ, ಸರುಬಾಯಿ ಬಂಡಗರ,ಸುನೀತಾ ಗುಂಡದ,ಐಶ್ವರ್ಯ ಬೇಪಾರಿ,ಅಂಜಲಿ ಕನ್ನೊಳ್ಳಿ ರವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು

# ಉತ್ತರ ಭಾರತದಲ್ಲಿ ಗಂಗಾ ಪ್ರವಾಹ ಭೀತಿ : ಯುಪಿ–ಬಿಹಾರದಲ್ಲಿ ಗ್ರಾಮಗಳು ಜಲಾವೃತ

**ವಿಜಯ ದುಂಬಿ ಸುದ್ದಿ....**

**ನವದೆಹಲಿ: ಉತ್ತರ ಭಾರತದಾದ್ಯಂತ ಮುಂಗಾರು ಮಳೆಯ ಅಬ್ಬರ ಮುಂದುವರಿದಿದ್ದು, ಪವಿತ್ರ ಗಂಗಾ ನದಿ ಅಪಾಯದ ಮಟ್ಟ ಮೀರಿ ಉಕ್ಕಿ ಹರಿಯುತ್ತಿದೆ. ಪರಿಣಾಮ ಉತ್ತರ ಪ್ರದೇಶ (ಯುಪಿ) ಮತ್ತು ಬಿಹಾರದ ನದಿ ಪಾತ್ರದ ನೂರಾರು ಗ್ರಾಮಗಳು ಜಲಾವೃತಗೊಂಡಿದ್ದು, ಜನಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ.**

ಹೊಸ ಶಾಸನಗಳನ್ನು ತಿಳಿಯಿರಿ ಬಿಹಾರದ ಪಾಟ್ನಾ ಸೇರಿದಂತೆ ಗಾಂಧಿಘಾಟ್ ಹಾಗೂ ಹಥಿದಾಹ್ ಬಳಿ ಗಂಗಾ ನದಿಯ ನೀರಿನ ಮಟ್ಟ ಅಪಾಯದ ಮಟ್ಟ ಮೀರಿ ಪ್ರವಾಹದ ಹಂತ ತಲುಪಿದೆ. ಪಾಟ್ನಾದ ಘಾಟ್‌ಗಳು ಹಾಗೂ ತಗ್ಗು ಪ್ರದೇಶಗಳಿಗೆ ನೀರು ನುಗ್ಗಿದ್ದು, ನಗರದ ಶವಸಂಸ್ಕಾರ ಸ್ಥಳಗಳಿಗೂ ಪ್ರವಾಹದ ನೀರು ನುಗ್ಗಿರುವುದರಿಂದ ಜನರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಉತ್ತರ ಪ್ರದೇಶದ ವಾರಣಾಸಿಯಲ್ಲಿ ಗಂಗಾ ಮತ್ತು ವರುಣಾ ನದಿಗಳ ನೀರಿನ ಮಟ್ಟ ಏರಿಕೆಯಾಗಿದ್ದು, ತಗ್ಗು ಪ್ರದೇಶದ 11ಕ್ಕೂ



ಹೆಚ್ಚು ವಾರ್ಡ್‌ಗಳು ಹಾಗೂ ನೂರಾರು ಕುಟುಂಬಗಳು ಪ್ರವಾಹದ ಸಂಕಷ್ಟಕ್ಕೆ ಸಿಲುಕಿವೆ.

ಬಿಹಾರದ ಬೇಗುಸರಾಯ್ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಗಂಗಾ ನದಿಯ ರಭಸಕ್ಕೆ ತಡೆಗೋಡೆಗಳು ಮುರಿದುಬಿದ್ದಿದ್ದು, ಪ್ರವಾಹದ ನೀರು ಜನವಸತಿ ಪ್ರದೇಶಗಳಿಗೆ ನುಗ್ಗಿದೆ. ವೈಶಾಲಿ ಜಿಲ್ಲೆಯಲ್ಲೂ ಗಂಗಾ ಮತ್ತು ಗಂಡಕ್ ನದಿಗಳ ನೀರಿನ ಮಟ್ಟ ಏರಿಕೆಯಾಗಿದ್ದು, ಒಂದು ಡಜನ್‌ಗೂ ಹೆಚ್ಚು ಗ್ರಾಮಗಳು ಪ್ರವಾಹದ ನೀರಿನಿಂದ ಸುತ್ತುವರಿದಿವೆ ಎಂದು ವರದಿಯಾಗಿದೆ.

ಹಲವು ನದಿಗಳು ಅಪಾಯದ ಮಟ್ಟದಲ್ಲಿ ಬಿಹಾರದಲ್ಲಿ ಗಂಗಾ ಸೇರಿದಂತೆ ಗಂಡಕ್, ಕೋಸಿ, ಬೂಢಿ ಗಂಡಕ್, ಪುನ್ಪುನ್ ಹಾಗೂ ಘಾಘ್ರಾ ನದಿಗಳ ಹಲವು ಮಾಪನ ಕೇಂದ್ರಗಳಲ್ಲಿ ನೀರಿನ ಮಟ್ಟ ಅಪಾಯದ ಮಟ್ಟಕ್ಕಿಂತ ಮೇಲೆಯೇ ಹರಿಯುತ್ತಿದೆ. ಪಾಟ್ನಾ, ಭಾಗಲ್ಪುರ, ಮುಂಗೇರ್ ಮತ್ತು ವೈಶಾಲಿ ಸೇರಿದಂತೆ ಹಲವು ಜಿಲ್ಲೆಗಳು ಹೆಚ್ಚಿನ ಅಪಾಯದಲ್ಲಿವೆ.ನೇಪಾಳದ ಜಲಾನಯನ ಪ್ರದೇಶಗಳು ಹಾಗೂ ಜಾರ್ಖಂಡ್‌ನ ಹಲವು ಭಾಗಗಳಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯು ಗಂಗಾ ಸೇರಿದಂತೆ ಪ್ರಮುಖ ನದಿಗಳ ನೀರಿನ ಮಟ್ಟ ಏರಿಕೆಗೆ ಪ್ರಮುಖ ಕಾರಣವಾಗಿದೆ.

ಕಳೆದ ವರ್ಷಗಳಲ್ಲೂ ಬಿಹಾರ ಮತ್ತು ಉತ್ತರ ಪ್ರದೇಶಗಳಲ್ಲಿ ಭಾರಿ ಮಳೆ ಹಾಗೂ ನೆರೆಯ ಪ್ರದೇಶಗಳಿಂದ ಹರಿದುಬಂದ ಹೆಚ್ಚುವರಿ ನೀರಿನಿಂದ ಗಂಡಕ್, ಕೋಸಿ ಮತ್ತು ಗಂಗಾ ನದಿಗಳು ತೀವ್ರ ಪ್ರವಾಹ ಸೃಷ್ಟಿಸಿದ್ದವು. ಈ ಹಿಂದಿನ ಅನುಭವಗಳನ್ನು ಗಮನದಲ್ಲಿಟ್ಟುಕೊಂಡು ಈ ಬಾರಿ ಆಡಳಿತ ಯಂತ್ರವು ಮುನ್ನೆಚ್ಚರಿಕೆ ಕ್ರಮಗಳನ್ನು ತೀವ್ರಗೊಳಿಸಿದೆ.

ರಾತ್ರಿ ಹಗಲು ನಿಗಾ ಪ್ರವಾಹ ಪೀಡಿತ ಜಿಲ್ಲೆಗಳಲ್ಲಿ ಹತ್ತಾರು ಪರಿಹಾರ ಶಿಬಿರಗಳನ್ನು ತೆರೆಯಲಾಗಿದ್ದು, ಸಂತ್ರಸ್ತರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲು ಎನ್‌ಡಿಆರ್‌ಎಫ್ ಹಾಗೂ ರಾಜ್ಯ ವಿಪತ್ತು ನಿರ್ವಹಣಾ ಪಡೆಗಳನ್ನು ನಿಯೋಜಿಸಲಾಗಿದೆ.ಮುಖ್ಯಮಂತ್ರಿಗಳು ಹಾಗೂ ಜಲಸಂಪನ್ಮೂಲ ಸಚಿವರು ಪರಿಸ್ಥಿತಿಯನ್ನು ನೇರವಾಗಿ ಪರಿಶೀಲಿಸುತ್ತಿದ್ದು, ಎಂಜಿನಿಯರ್‌ಗಳು ಮತ್ತು ಅಧಿಕಾರಿಗಳಿಗೆ ತಡೆಗೋಡೆಗಳ ದುರಸ್ತಿ ಹಾಗೂ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಫರಕ್ಕಾ ಬ್ಯಾರೇಜ್ ಗೇಟ್ ತೆರವು ಪ್ರವಾಹದ ಒತ್ತಡವನ್ನು ತಗ್ಗಿಸುವ ಉದ್ದೇಶದಿಂದ ಫರಕ್ಕಾ ಬ್ಯಾರೇಜ್‌ನ ಗೇಟ್‌ಗಳನ್ನು ಸಂಪೂರ್ಣವಾಗಿ ತೆರೆಯಲಾಗಿದ್ದು, ಪರಿಸ್ಥಿತಿಯ ಮೇಲೆ ನಿರಂತರ ನಿಗಾ ವಹಿಸಲಾಗಿದೆ. ನದಿ ಪಾತ್ರದ ಜನರು ಎಚ್ಚರಿಕೆಯಿಂದಿದ್ದು, ಆಡಳಿತದ ಸೂಚನೆಯಂತೆ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಹವಾಮಾನ ಇಲಾಖೆ ಹಾಗೂ ವಿಪತ್ತು ನಿರ್ವಹಣಾ ಪ್ರಾಧಿಕಾರಗಳು ಮನವಿ ಮಾಡಿವೆ.

# ಆಕಾಶದಲ್ಲೇ ಹೈಡ್ರಾಲಿಕ್ ವ್ಯವಸ್ಥೆ ಸ್ಥಗಿತ : ಏರ್ ಇಂಡಿಯಾ ವಿಮಾನ ಸುರಕ್ಷಿತ ಲ್ಯಾಂಡಿಂಗ್, ಪ್ರಯಾಣಿಕರು ಸೇಫ್

ವಿಜಯ ದುಂಬಿ ಸುದ್ದಿ....

**ನವದೆಹಲಿ: ಆಗಸದಲ್ಲಿ ತಾಂತ್ರಿಕ ದೋಷ ಕಾಣಿಸಿಕೊಂಡ ಏರ್ ಇಂಡಿಯಾ ವಿಮಾನವೊಂದು ದೆಹಲಿ ವಿಮಾನ ನಿಲ್ದಾಣದಲ್ಲಿ ಸುರಕ್ಷಿತವಾಗಿ ಇಳಿದಿದ್ದು, ವಿಮಾನದಲ್ಲಿದ್ದ 24 ಪ್ರಯಾಣಿಕರು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ.**

ಫುಕೆಟ್‌ನಿಂದ ನವದೆಹಲಿಗೆ ತೆರಳುತ್ತಿದ್ದ ಏರ್ ಇಂಡಿಯಾ ವಿಮಾನವು 36 ಸಾವಿರ ಅಡಿ ಎತ್ತರದಲ್ಲಿ ಹಾರಾಟ ನಡೆಸುತ್ತಿದ್ದ ವೇಳೆ ಕೆಲವೇ ಸೆಕೆಂಡುಗಳ ಅಂತರದಲ್ಲಿ ಮೂರು ಹೈಡ್ರಾಲಿಕ್ ವ್ಯವಸ್ಥೆಗಳು ಸ್ಥಗಿತಗೊಂಡು ಆತಂಕದ ಪರಿಸ್ಥಿತಿ ನಿರ್ಮಾಣವಾಗಿತ್ತು. ಹಠಾತ್ ಏರುಪೇ-ರಿನಿಂದಾಗಿ ಕ್ಯಾಬಿನ್‌ನಲ್ಲಿದ್ದ 24 ಪ್ರಯಾಣಿಕರು ಗಾಯಗೊಂಡಿದ್ದು, ಆಟೋಪೈಲಟ್ ಸಂಪರ್ಕ ಕಡಿತಗೊಂಡಿತ್ತು. ಬಳಿಕ ವಿಮಾನವನ್ನು ಸುರಕ್ಷಿತವಾಗಿ ದೆಹಲಿ ವಿಮಾನ ನಿಲ್ದಾಣದಲ್ಲಿ ಇಳಿಸಲಾಯಿತು.

ಕೆಲವೇ ಸೆಕೆಂಡುಗಳಲ್ಲಿ ಏರುಪೇರು

ವಿಮಾನ ಅಪಘಾತ ತನಿಖಾ ಬ್ಯೂರೋ (ಎಎಐಬಿ) ಬಿಡುಗಡೆ ಮಾಡಿರುವ ಪ್ರಾಥ-ಮಿಕ ವರದಿಯಲ್ಲಿ ತಾಂತ್ರಿಕ ವೈಫಲ್ಯಕ್ಕೆ ನಿಖರ ಕಾರಣವನ್ನು ಇನ್ನೂ ತಿಳಿಸಲಾಗಿಲ್ಲ. ವಿಮಾನ ಕೋಲ್ಕತ್ತಾ ವಾಯು ಪ್ರದೇಶದ ಮೇಲೆ 36 ಸಾವಿರ ಅಡಿ ಎತ್ತರದಲ್ಲಿ ಹಾರುತ್ತಿದ್ದಾಗ ಮೊದಲು ಗ್ರೀನ್, ನಂತರ ಬ್ಲೂ ಹಾಗೂ ಯೆಲ್ಲೋ ಹೈಡ್ರಾಲಿಕ್ ವ್ಯವಸ್ಥೆಗಳು ನಿಷ್ಕ್ರಿಯಗೊಂಡಿದ್ದವು. ತಕ್ಷಣ ಆಟೋಪೈಲಟ್ ಸಂಪರ್ಕ ಕಡಿತಗೊಂಡು ಎಚ್ಚರಿಕೆಯ ಸೈರನ್ ಮೊಳಗಿತು.




ವಿಮಾನ ಕೆಲವೇ ಸೆಕೆಂಡುಗಳಲ್ಲಿ ಸುಮಾರು 372 ಅಡಿಗಳಷ್ಟು ಮೇಲಕ್ಕೆದ್ದು, ಬಳಿಕ ದಿಢೀರನೆ 292 ಅಡಿಗಳಷ್ಟು ಕೆಳಕ್ಕೆ ಕುಸಿದಿದೆ. ಅದೃಷ್ಟವಶಾತ್ ಕೆಲವೇ ಕ್ಷಣಗಳಲ್ಲಿ ಬ್ಲೂ ಹೈಡ್ರಾಲಿಕ್ ವ್ಯವಸ್ಥೆ ಮತ್ತೆ ಕಾರ್ಯನಿರ್ವಹಿಸಲು ಆರಂಭಿಸಿತು. ಬಳಿಕ ಯೆಲ್ಲೋ ಮತ್ತು ಗ್ರೀನ್ ವ್ಯವಸ್ಥೆಗಳೂ ನಿಯಂತ್ರಣಕ್ಕೆ ಬಂದಿದ್ದು, ಪೈಲಟ್‌ಗಳು ವಿಮಾನವನ್ನು ಸುರಕ್ಷಿತವಾಗಿ ದೆಹಲಿಗೆ ತಲುಪಿಸುವಲ್ಲಿ ಯಶಸ್ವಿಯಾಗಿದ್ದಾರೆ. ಕ್ಯಾಬಿನ್‌ಗೆ ಹಾನಿ ವಿಮಾನದಲ್ಲಿನ ತೀವ್ರ ಏರುಪೇ-ರಿನಿಂದ ಸೀಲಿಂಗ್ ಪ್ಯಾನೆಲ್‌ಗಳು ಮುರಿದುಬಿದ್ದಿವೆ. ಲಗೇಜ್ ಬಾಕ್ಸ್‌ಗಳು ತೆರೆದುಕೊಂಡಿದ್ದು, ತುರ್ತು ನಿರ್ಗಮನ ಬಾಗಿಲಿನ ಹ್ಯಾಂಡಲ್ ಹಾಗೂ ಶೌಚಾಲಯದ ಕಮೋಡ್ ಕೂಡ ಹಾನಿಗೊಳಗಾಗಿದೆ. ಘಟನೆಯಲ್ಲಿ 24 ಪ್ರಯಾಣಿಕರು ಗಾಯಗೊಂಡಿದ್ದಾರೆ. ಪೈಲಟ್ ಮಾದಕ ದ್ರವ್ಯ ಸೇವನೆ ದೃಢ ವಿಮಾನ ದೆಹಲಿಯಲ್ಲಿ ಇಳಿದ ಬಳಿಕ ಸಿಬ್ಬಂದಿಗೆ ನಡೆಸಿದ ಪರೀಕ್ಷೆಯಲ್ಲಿ ಮುಖ್ಯ ಪೈಲಟ್ ದೇಹದಲ್ಲಿ ನಿಷೇಧಿತ ಮನೋ-ಸಕ್ರಿಯ ಪದಾರ್ಥಗಳು ಇರುವುದು ಪತ್ತೆಯಾಗಿದೆ. ಸಹ-ಪೈಲಟ್‌ನ ಪರೀಕ್ಷೆ ನೆಗೆಟಿವ್ ಬಂದಿದೆ. ವಾಯುಯಾನ ಸುರಕ್ಷತಾ ನಿಯಮಗಳ ಅಡಿಯಲ್ಲಿ ಏರ್ ಇಂಡಿಯಾ ಮುಖ್ಯ ಪೈಲಟ್ ವಿರುದ್ಧ ತಕ್ಷಣದಿಂದಲೇ ಜಾರಿಗೆ ಬರುವಂತೆ ಸೇವೆಯಿಂದ ವಜಾಗೊಳಿಸುವ ಕ್ರಮ ಕೈಗೊಂಡಿದೆ.

ಬ್ಲ್ಯಾಕ್‌ಬಾಕ್ಸ್‌ವಶಕ್ಕೆ ಘಟನೆಯ ನಿಖರ ಕಾರಣವೇನು ಹಾಗೂ ಪೈಲಟ್‌ನ ಸ್ಥಿತಿ ವಿಮಾನದ ನಿಯಂತ್ರಣದ ಮೇಲೆ ಯಾವುದೇ ಪರಿಣಾಮ ಬೀರಿತೇ ಎಂಬುದನ್ನು ಪರಿಶೀಲಿಸಲು ಕಾಕ್‌ಪಿಟ್ ವಾಯ್ಸ್ ರೆಕಾರ್ಡರ್ (ಸಿವಿಆರ್) ಮತ್ತು ಫ್ಲೈಟ್ ಡೇಟಾ ರೆಕಾರ್ಡರ್ (ಎಫ್‌ಡಿಆರ್)ಗಳನ್ನು ವಶಕ್ಕೆ ಪಡೆದು ವಿಶ್ಲೇಷಿಸಲಾಗುತ್ತಿದೆ.

## ನೇಪಾಳದಲ್ಲಿ ಮತ್ತೆ ಪ್ರವಾಹದ ಆತಂಕ

ವಿಜಯ ದುಂಬಿ ಸುದ್ದಿ....

ದಾರ್ಚುಲಾ: ನೇಪಾಳದ ದಾರ್ಚುಲಾ ಜಿಲ್ಲೆಯ ಅಪಿ ಹಿಮಾಲ್ ಗ್ರಾಮೀಣ ಪುರಸಭೆಯ ಭಟ್ಟರ್ ಪ್ರದೇಶದಲ್ಲಿ ಸಂಭವಿಸಿದ ಭಾರೀ ಭೂಕುಸಿತದಿಂದ ಚೌಲಾನಿ (ಚಮೇಲಿಯಾ) ನದಿಯ ಹರಿವಿಗೆ ಅಡ್ಡಿಯಾಗಿದ್ದು, ತಗ್ಗು ಪ್ರದೇಶಗಳಲ್ಲಿ ಹಠಾತ್ ಪ್ರವಾಹದ ಭೀತಿ ಎದುರಾಗಿದೆ.



ಭೂಕುಸಿತದಿಂದ ಅಪಾರ ಪ್ರಮಾಣದ ಮಣ್ಣು ಮತ್ತು ಅವಶೇಷಗಳು ನದಿಗೆ ಬಿದ್ದಿರುವುದರಿಂದ ನೀರಿನ ಸುಗಮ ಹ-ರಿವಿಗೆ ತೀವ್ರ ಅಡ್ಡಿಯುಂಟಾಗಿದೆ. ನದಿಗೆ ಅಡ್ಡಲಾಗಿ ಬಿದ್ದಿರುವ ಅವಶೇಷಗಳಿಂದ ಹರಿವು ಭಾಗಶಃ ಸ್ಥಗಿತಗೊಂಡಿದ್ದು, ಮಳೆ ಮುಂದುವರಿದರೆ ನದಿಯ ಹರಿವು ಸಂಪೂರ್ಣವಾಗಿ ತಡೆಗಟ್ಟಲ್ಪಟ್ಟು ಭಾರೀ ಪ್ರವಾಹ ಉಂಟಾಗುವ ಸಾಧ್ಯತೆಯಿದೆ ಎಂದು ಜಿಲ್ಲಾಡಳಿತ ಎಚ್ಚರಿಸಿದೆ. ಪರಿಸ್ಥಿತಿಯ ಹಿನ್ನೆಲೆಯಲ್ಲಿ ಸುದುರ್ಪಶ್ಚಿಮ್ ಮುಖ್ಯಮಂತ್ರಿ ಖಗರಾಜ್ ಭಟ್ಟ ಅವರು ಸ್ಥಳೀಯ ಆಡಳಿತ ಹಾಗೂ ಭದ್ರತಾ ಸಂಸ್ಥೆಗಳಿಗೆ ಹೈ ಅಲರ್ಟ್ ಘೋಷಿಸುವಂತೆ ಸೂಚಿಸಿದ್ದಾರೆ. ಬಾಲಂಚ್‌ನಲ್ಲಿರುವ ನೇಪಾಳ ಚಮೇಲಿಯಾ ಜಲವಿದ್ಯುತ್ ಭದ್ರತಾ ನೆಲೆಯ ಸಿಬ್ಬಂದಿಯನ್ನು ಪರಿಸ್ಥಿತಿ ಮೇಲೆ ನಿಗಾ ವಹಿಸಲು ಹಾಗೂ ತುರ್ತು ನಿರ್ವಹಣಾ ಕಾರ್ಯಗಳಿಗೆ ನಿಯೋಜಿಸಲಾಗಿದೆ. ನದಿ ಪಾತ್ರ ಹಾಗೂ ತಗ್ಗು ಪ್ರದೇಶಗಳಲ್ಲಿ ವಾಸಿಸುವ ಜನರು ಮುನ್ನೆಚ್ಚರಿಕೆ ವಹಿಸಿ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಆಡಳಿತ ಸೂಚಿಸಿದೆ. ತುರ್ತು ಪರಿಸ್ಥಿತಿಯಲ್ಲಿ ಸಂಪರ್ಕಿಸಲು ವಿಶೇಷ ಸಹಾಯವಾಣಿ ಸಂಖ್ಯೆಗಳನ್ನು ಸಹ ಬಿಡುಗಡೆ ಮಾಡಲಾಗಿದೆ. ಪ್ರವಾಹ, ಭೂಕುಸಿತದಿಂದ ಕಂಗೆಟ್ಟ ನೇಪಾಳ ಇತ್ತೀಚಿನ ದಿನಗಳಲ್ಲಿ ನೇಪಾಳದಲ್ಲಿ ಸಂಭವಿಸುತ್ತಿರುವ ಭೀಕರ ಪ್ರವಾಹ, ಹಿಮನದಿ ಕುಸಿತ ಹಾಗೂ ಭೂಕುಸಿತದಂತಹ ದುರ್ಘಟನೆಗಳಿಂದ ಜನಜೀವನ ಅಸ್ತವ್ಯಸ್ತಗೊಂಡಿದೆ. ತ್ರಿಶೂಲಿ ನದಿ ಪಾತ್ರದಲ್ಲಿ ಸಂಭವಿಸಿದ ಅನಾಹುತಗಳು, ಸುರಂಗಗಳಲ್ಲಿ ಕಾರ್ಮಿಕರು ಸಿಲುಕಿಕೊಂಡ ಘಟನೆಗಳು ಸೇರಿದಂತೆ ಹಲವು ದುರಂತಗಳಿಂದ ದೇಶ ಇನ್ನೂ ಚೇತರಿಸಿಕೊಳ್ಳುತ್ತಿದೆ. ಮೂಲಸೌಕರ್ಯಗಳಿಗೆ ಹಾನಿಯಾಗಿದ್ದು, ಹಲವು ಪ್ರದೇಶಗಳ ನಡುವಿನ ಸಂಪರ್ಕ ಕಡಿತಗೊಂಡಿರುವ ಸಂದರ್ಭದಲ್ಲಿ ದಾರ್ಚುಲಾದಲ್ಲಿ ಚೌಲಾನಿ ನದಿಯ ಹರಿವಿಗೆ ಅಡ್ಡಿಯಾಗಿರುವುದು ಸ್ಥಳೀಯರಲ್ಲಿ ಮತ್ತಷ್ಟು ಆತಂಕ ಮೂಡಿಸಿದೆ. ಭಾರತದಲ್ಲೂ ನಿಗಾ ಚೌಲಾನಿ ಅಥವಾ ಚಮೇಲಿಯಾ ನದಿ ಅಪಿ ಹಿಮಾಲ್ ಪ್ರದೇಶದಲ್ಲಿ ಉಗಮಗೊಂಡು ಮುಂದೆ ನೇಪಾಳ-ಭಾರತ ಗಡಿಯ ಮಹಾಕಾಳಿ ನದಿಯನ್ನು ಸೇರುತ್ತದೆ. ಹೀಗಾಗಿ ದಾರ್ಚುಲಾದಲ್ಲಿನ ಬೆಳವಣಿಗೆಯ ಮೇಲೆ ಭಾರತೀಯ ಗಡಿ ಪ್ರದೇಶದ ಅಧಿಕಾರಿಗಳೂ ನಿಗಾ ವಹಿಸಿದ್ದಾರೆ. ತುರ್ತು ಪರಿಸ್ಥಿತಿ ಎದುರಾದಲ್ಲಿ ಕಾರ್ಯಾಚರಣೆ

ವಿಜಯ ದುಂಬಿ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ಪತ್ರಿಕಾ ವಿತರಕರ ಸೇವೆ ಶ್ಲಾಘನೀಯ ರವೀಂದ್ರ ಬಾಕಳೆ

ವಿಜಯ ದುಂಬಿ ಸುದ್ದಿ....

**ಕುಷ್ಟಗಿ: ಮಳೆ, ಗಾಳಿ ಚಳಿ ಲೆಕ್ಕಿಸದೆ ಪ್ರತಿನಿತ್ಯ ಬೆಳಗಿನ ಜಾವ ಪತ್ರಿಕೆಗಳನ್ನು ಮನೆ ಮನೆಗೆ ತೆರಳಿ ಓದುಗರಿಗೆ ಸುದ್ದಿಯನ್ನು ತಲುಪಿಸುವ ಪತ್ರಿಕಾ ವಿತರಕರ ಸೇವೆ ಶ್ಲಾಘನೀಯವಾಗಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಕಾರ್ಯದರ್ಶಿ ಹಾಗೂ ಹಿರಿಯ ಪತ್ರಕರ್ತ ರವೀಂದ್ರ ಬಾಕಳೆ ಹೇಳಿದರು.**

ಪಟ್ಟಣದ ಹಳೆ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಆಯೋಜಿಸಿದ್ದ ಪತ್ರಿಕಾ ವಿತರಕರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪತ್ರಿಕೆ ಪ್ರಕಟಿಸುವಷ್ಟೇ ಅವುಗಳನ್ನು ಓದುಗರ ಮನೆ ಬಾಗಿಲಿಗೆ ತಲುಪಿಸುವ ವಿತರಕರ ಪಾತ್ರವೂ ಮಹತ್ವದ್ದಾಗಿದೆ ಎಂದರು.



ತಾಲೂಕು ಸಂಘದ ಅಧ್ಯಕ್ಷ ಪವಾಡಪ್ಪ ಚೌಡಕಿ ಮಾತನಾಡಿ, ಕಡಿಮೆ ಆದ-ಾಯದಲ್ಲಿಯೇ ನಿತ್ಯ ಜನರಿಗೆ ಸುದ್ದಿಯನ್ನು ತಲುಪಿಸುವ ಮೂಲಕ ಪತ್ರಿಕಾ ವಿತರಕರು ಸಮಾಜಕ್ಕೆ ಅಳಿಲು ಸೇವೆ ಸಲ್ಲಿಸುತ್ತಿದ್ದಾರೆ. ವಿತರಕರ ಯಾವುದೇ ಸಮಸ್ಯೆಗಳಿದ್ದರೂ ಸಂಘಟನೆ ಅವರ ನೆರವಿಗೆ ನಿಲ್ಲಲಿದೆ. ಕಾರ್ಮಿಕ ಇಲಾಖೆಯಿಂದ ದೊರೆಯುವ ಸೌಲಭ್ಯಗಳನ್ನು ವಿತರಕರಿಗೆ ತಲುಪಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಪತ್ರಕರ್ತ ಪರಮಶಿವಮೂರ್ತಿ ಮಾಟಲದಿನ್ನಿ, ಶರಣಪ್ಪ ಲೈನದ, ಅನಿಲ್ ಕಮ್ಮಾರ, ಭೀಮನಗೌಡ ಪಾಟೀಲ, ಸಂಗಯ್ಯ ಲೂತಿಮಠ, ಮಲ್ಲಿಕಾರ್ಜುನ ದೋಟಿಹಾಳ, ಶರಣಪ್ಪ ಹೊಮ್ಮಿನಾಳ, ಮಹೇಶ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಒಂದಕ್ಕಿಂತ ಹೆಚ್ಚು ವೋಟರ್ ಐಡಿ ಹೊಂದಿದ್ದರೆ ಕ್ರಿಮಿನಲ್ ಕೇಸ್

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಮತದಾರರ ಪಟ್ಟಿಯಲ್ಲಿ ನಕಲಿ ಹೆಸರು, ದ್ವಿಮುಖ ನೋಂದಣಿ ಅಥವಾ ಒಂದಕ್ಕಿಂತ ಹೆಚ್ಚು ಕಡೆ ಹೆಸರು ಹೊಂದಿರುವ ಪ್ರಕರಣಗಳು ಪತ್ತೆಯಾದರೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಅಪರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಬೆಂಗಳೂರು ದಕ್ಷಿಣ ನಗರ ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ಎಚ್ಚರಿಕೆ ನೀಡಿದ್ದಾರೆ.**

ಬೆಂಗಳೂರು ದಕ್ಷಿಣ ನಗರ ಜಿಲ್ಲಾ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ರಾಜ-ಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯಲ್ಲಿ ಅವರು ಈ ಸೂಚನೆ ನೀಡಿದರು. ಚುನಾವಣಾ ಆಯೋಗದ ಪರಿಷ್ಕೃತ ವೇಳಾಪಟ್ಟಿಯಂತೆ ಆಗಸ್ಟ್ 24ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗಿದ್ದು, ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಪಟ್ಟಿಗಳನ್ನು ವಿತರಿಸಲಾಗಿದೆ. ಸೆಪ್ಟೆಂಬರ್ 3ರ ಮಾಹಿತಿಯಂತೆ ನಮೂನೆ 9, 10, 11 ಹಾಗೂ ಭಾವಚಿತ್ರರಹಿತ ಕರಡು ಮತದಾರರ ಪಟ್ಟಿಯ ಮಾಹಿತಿಯನ್ನು ಪೆನ್‌ಡ್ರೈವ್ ಮೂಲಕ ಪಕ್ಷಗಳ ಪ್ರತಿನಿಧಿಗಳಿಗೆ ನೀಡಲಾಗಿದೆ.

237 ಹೆಚ್ಚುವರಿ ಎಇಆರ್‌ಒಗಳ ನೇಮಕ

ವಿಶೇಷ ಪರಿಷ್ಕರಣೆಗೆ ಸಂಬಂಧಿಸಿದ ವಿಚಾರಣೆಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು 237 ಹೆಚ್ಚುವರಿ ಸಹಾಯಕ ಮತದಾರರ ನೋಂದಣಾಧಿಕಾರಿಗಳನ್ನು (ಎಇಆರ್‌ಒ) ನೇಮಕ ಮಾಡಲಾಗಿದೆ. ಅವ-ರಿಗೆ ಈಗಾಗಲೇ ತರಬೇತಿ ನೀಡಲಾಗಿದ್ದು, ದಿನಕ್ಕೆ ಗರಿಷ್ಠ 50ರಿಂದ 60 ಪ್ರಕರಣಗಳ ವಿಚಾರಣೆ ನಡೆಸುವಂತೆ ಸೂಚಿಸಲಾಗಿದೆ. ನೋಟಿಸ್ ಪಡೆದ ಮತದಾರ-ರಿಗೆ ವಿಚಾರಣೆಗೆ ಹಾಜರಾಗಲು ಕನಿಷ್ಠ ಏಳು ದಿನಗಳ ಕಾಲಾವಕಾಶ ನೀಡಬೇಕು.

ಮೊದಲ ನೋಟಿಸ್‌ಗೆ ಹಾಜರಾಗಲು ಸಾಧ್ಯವಾಗದವರಿಗೆ ಅಗತ್ಯವಿದ್ದಲ್ಲಿ ಎರಡನೇ ನೋಟಿಸ್ ನೀಡಿ ವಿಚಾರಣೆ ನಡೆಸಬೇಕು ಎಂದು ರಮೇಶ್ ಸೂಚಿಸಿದರು. ವೃದ್ಧರು, ಅನಾರೋಗ್ಯ ಪೀಡಿತ-ರಿಗೆ ಮನೆ ಬಳಿಯೇ ಪರಿಶೀಲನೆ ಆಸ್ಪತ್ರೆಗೆ ದಾಖಲಾಗಿರುವವರು, 80 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ ವಿಶೇಷ ಚೇತನ ಮತದಾರರನ್ನು ಕಚೇ-ರಿಗೆ ಕರೆಸುವ ಬದಲು ಬಿಎಲ್‌ಒ ಅಥ-ವಾ ಎಇಆರ್‌ಒಗಳು ಅವರ ಮನೆ ಅಥವಾ ಆಸ್ಪತ್ರೆಗೆ ತೆರಳಿ ಪರಿಶೀಲನೆ ನಡೆಸಬೇಕು ಎಂದು ಸೂಚಿಸಲಾಗಿದೆ.



ವಿಚಾರಣೆಗೆ ಹಾಜರಾಗುವ ಮತದಾರರು ಸಲ್ಲಿಸುವ ದಾಖಲೆಗಳಿಗಾಗಿ ಹಿಯರಿಂಗ್ ರಿಜಿಸ್ಟರ್ ನಿರ್ವಹಿಸಬೇಕು. ದಾಖಲೆಗಳಿಗೆ ಹಿಂಬರಹ ನೀಡಿ ಸಿಸ್ಟಮ್‌ನಲ್ಲಿ ಅಪ್‌ಲೋಡ್ ಮಾಡಬೇಕು. ವಿಚಾರಣೆಯ ದಿನಾಂಕ, ಸಮಯ ಹಾಗೂ ಸ್ಥಳವನ್ನು ನೋಟಿಸ್‌ನಲ್ಲಿ ಸ್ಪಷ್ಟವಾಗಿ ನಮೂದಿಸುವುದು ಕಡ್ಡಾಯ ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ. ದ್ವಿಮುಖ ನೋಂದಣಿಗೆ ಕಠಿಣ ಕ್ರಮ ಒಬ್ಬ ಮತದಾರನ ಹೆಸರು ಕರ್ನಾಟಕದ ಜೊತೆಗೆ ಬೇರೆ ರಾಜ್ಯದಲ್ಲಿಯೂ ಅಥವಾ ಒಂದಕ್ಕಿಂತ ಹೆಚ್ಚು ಮತದಾರರ ಪಟ್ಟಿಗಳಲ್ಲಿಯೂ ಇರುವುದಾಗಿ ಕಂಡುಬಂದರೆ ಪ್ರಜಾಪ್ರತಿನಿಧಿ ಕಾಯ್ದೆಯ ಕಲಂ 31ರಡಿ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಅಧಿಕಾ-ರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಅದೇ ರೀತಿ ಫಾರ್ಮ್-6 ಮತ್ತು ಫಾರ್ಮ್-8ರ ಅರ್ಜಿಗಳನ್ನು ಮರುಪ-ರಿಶೀಲಿಸಿ, ಅರ್ಹ ಪ್ರಕರಣಗಳನ್ನು ಮಾತ್ರ ಪರಿಗಣಿಸುವಂತೆ ಸೂಚಿಸಲಾಗಿದೆ.

ವಾರ್ಡ್‌ವಾರು ಜಾಗೃತಿ ಅಭಿಯಾನ ಮತದಾರರ ಪಟ್ಟಿ ಪರಿಷ್ಕರಣೆ ಕು-ರಿತು ಜನರಲ್ಲಿ ಜಾಗೃತಿ ಮೂಡಿಸಲು ಪ್ರತಿ ವಾರ್ಡ್‌ಗೆ ಒಂದರಂತೆ ಧ್ವನಿವರ್ಧಕ ಅಳವಡಿಸಿದ ಆಟೋಗಳ ಮೂಲಕ ಬೆಳಗ್ಗೆ ಮತ್ತು ಸಂಜೆ ಪ್ರಚಾರ ನಡೆಸಲು ತೀರ್ಮಾನಿಸಲಾಗಿದೆ. ಶಾಲಾ-ಕಾಲೇಜುಗಳು, ವೃತ್ತಗಳು ಹಾಗೂ ಜನನಿಬಿಡ ಪ್ರದೇಶಗಳಲ್ಲಿ ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಬ್ಯಾನರ್‌ಗಳ ಮೂಲಕವೂ ಜಾಗೃತಿ ಮೂಡಿಸಲಾಗುತ್ತದೆ.

ಸಭೆಯಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಬಿಎಲ್‌ಒಗಳ ಕಾರ್ಯವೈಖರಿ, ವಿಳಾಸಗಳಲ್ಲಿನ ಲೋಪದೋಷಗಳು ಹಾಗೂ ಕ್ಷೇತ್ರ ಭೇಟಿಗೆ ಸಂಬಂಧಿಸಿದಂತೆ ಹಲವು ದೂರುಗಳನ್ನು ಸಲ್ಲಿಸಿದರು. ಈ ಬಗ್ಗೆ ಸ್ಥಳ ಪರಿಶೀಲನೆ ನಡೆಸಿ ತಕ್ಷಣ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ರಮೇಶ್ ಸೂಚಿಸಿದರು. ಸಭೆಯಲ್ಲಿ ಅಪರ ಆಯುಕ್ತ ರಾಜಪ್ಪ, ಚುನಾವಣಾ ವಿಭಾಗದ ತಹಶೀಲ್ದಾರ್ ರಶ್ಮಿ ಹಾಗೂ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ತುಮಕೂರು ವಿಶ್ವವಿದ್ಯಾಲಯಕ್ಕೂ ವ್ಯಾಪಿಸಿದ ಕೆಪಿಎಸ್‌ಸಿ ಹಗರಣದ ಕಳಂಕ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ರಾಜ್ಯಾದ್ಯಂತ ತಲ್ಲಣ ಮೂಡಿಸಿರುವ ಕೆಪಿಎಸ್‌ಸಿ (ಕರ್ನಾಟಕ ಲೋಕಸೇವಾ ಆಯೋಗ) ಹಗರಣದ ತನಿಖೆಯ ಬೆನ್ನಲ್ಲೇ ಪ್ರಕರಣದ ಪ್ರಮುಖ ಆರೋಪಿ ಹಾಗೂ ತುಮಕೂರು ವಿಶ್ವವಿದ್ಯಾಲಯದ ನಾಮನಿರ್ದೇಶಿತ ಸಿಂಡಿಕೇಟ್ ಸದಸ್ಯ ಬಸವರಾಜ ಕನ್ನಾಳೆ ಅವರ ಸಂಪರ್ಕ ವಿಶ್ವವಿದ್ಯಾಲಯದ ವ್ಯವಹಾರಗಳಿಗೂ ವಿಸ್ತ-ರಿಸಿರುವ ಆರೋಪಗಳು ಕೇಳಿಬಂದಿವೆ.**

ಕನ್ನಾಳೆ ಅವರು ತುಮಕೂರು ವಿಶ್ವವಿದ್ಯಾಲಯದಲ್ಲೂ ಕೋಟ್ಯಂತರ ರೂಪಾಯಿ ಮೌಲ್ಯದ ಖರೀದಿ ಮತ್ತು ಕಾಮಗಾರಿಗಳಿಗೆ ಸಂಬಂಧಿಸಿದ ಅಕ್ರಮಗಳಲ್ಲಿ ಭಾಗಿಯಾಗಿದ್ದರು ಎಂಬ ಆರೋಪಗಳ ಹಿನ್ನೆಲೆಯಲ್ಲಿ ಸಿಐಡಿ ಅಧಿಕಾರಿಗಳು ತನಿಖೆ ಮುಂದುವ-ರಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. 2025ರಲ್ಲಿ ಸಿಂಡಿಕೇಟ್ ಸದಸ್ಯರಾಗಿ ನೇಮಕ 2025ರ ಆಗಸ್ಟ್‌ನಲ್ಲಿ ಬಸವರಾಜ ಕನ್ನಾಳೆ ಅವರನ್ನು ತುಮಕೂರು ವಿಶ್ವವಿದ್ಯಾಲಯದ ನಾಮನಿರ್ದೇಶಿತ ಸಿಂಡಿಕೇಟ್ ಸದಸ್ಯರನ್ನಾಗಿ ನೇಮಕ ಮಾಡಲಾಗಿತ್ತು ಎನ್ನಲಾಗಿದೆ. ಬಂಧನದ ಬಳಿಕವೂ ಅವರ ಸಿಂಡಿಕೇಟ್ ಸದಸ್ಯತ್ವದ ಕುರಿತು ತಕ್ಷಣ ಯಾವುದೇ ಸ್ಪಷ್ಟ ಕ್ರಮ ಕೈಗೊಳ್ಳದಿರುವುದು ಚರ್ಚೆಗೆ ಕಾರಣವಾಗಿದೆ. ಈ ಕುರಿತು ರಾಜಭವನ ಯಾವ ನಿರ್ಧಾರ




ಕೈಗೊಳ್ಳಲಿದೆ ಎಂಬ ಕುತೂಹಲವೂ ಮೂಡಿದೆ.

ಸಿಂಡಿಕೇಟ್ ಸದಸ್ಯರಾಗಿದ್ದ ಅವಧಿಯಲ್ಲಿ ವಿಶ್ವವಿದ್ಯಾಲಯದ ಖರೀದಿ ಮತ್ತು ಕಾಮಗಾ-ರಿಗಳಿಗೆ ಸಂಬಂಧಿಸಿದ ಉಪಸಮಿತಿಯಲ್ಲೂ ಕನ್ನಾಳೆ ಸ್ಥಾನ ಪಡೆದಿದ್ದರು ಎನ್ನಲಾಗಿದೆ. ಹೀಗಾಗಿ ಅವರು ಸದಸ್ಯರಾಗಿದ್ದ ಅವಧಿಯಲ್ಲಿ ನಡೆದ ಟೆಂಡರ್‌ಗಳು, ಕಾಮಗಾರಿಗಳು, ಖರೀದಿ ಆದ-ೇಶಗಳು, ಪಾವತಿಗಳು ಹಾಗೂ ಸಿಂಡಿಕೇಟ್ ಮತ್ತು ಉಪಸಮಿತಿ ಸಭೆಗಳ ನಡಾವಳಿಗಳನ್ನು ಪರಿಶೀಲಿಸಬೇಕೆಂಬ ಆಗ್ರಹ ಕೇಳಿಬಂದಿದೆ.

ವಿಶ್ವವಿದ್ಯಾಲಯದ ಖರೀದಿ ಮತ್ತು ಕಾಮಗಾರಿ ಸಂಬಂಧಿತ ನಿರ್ಧಾರಗಳಲ್ಲಿ ಕನ್ನಾಳೆ ಪ್ರಭಾವ ಬೀರಿದ್ದರು ಎಂಬ ಆರೋಪಗಳೂ ಕೇಳಿಬಂದಿವೆ. ಕೆಲವು ಟೆಂಡರ್‌ಗಳನ್ನು ನಿರ್ದಿಷ್ಟ ವ್ಯಕ್ತಿಗಳಿಗೆ ಅನುಕೂಲವಾಗುವಂತೆ ಮಾಡಿಸುವಲ್ಲಿ ಮಧ್ಯಸ್ಥಿಕೆ ವಹಿಸಿದ್ದರು ಎಂಬ ಆರೋಪಗಳೂ ಇವೆ.

ಈ ಆರೋಪಗಳ ಸತ್ಯಾಸತ್ಯತೆ ಪತ್ತೆಹಚ್ಚಲು ಟೆಂಡರ್ ದಾಖಲೆಗಳು, ತಾಂತ್ರಿಕ ಮತ್ತು ಹಣಕಾಸು ಬಿಡ್‌ಗಳು, ಕಾರ್ಯಾದೇಶಗಳು, ಬಿಲ್‌ಗಳು, ಪಾವತಿ ವಿವರಗಳು ಹಾಗೂ ಸಭೆಗಳ ನಡಾವಳಿಗಳ ಪರಿಶೀಲನೆ ಮಹತ್ವ ಪಡೆದುಕೊಂಡಿದೆ.

ಕುಲಪತಿ ಹುದ್ದೆಗೆ ಲಾಬಿ?

ಇದರ ನಡುವೆ ತುಮಕೂರು ವಿಶ್ವವಿದ್ಯಾಲಯದ ಕುಲಪತಿ ಹುದ್ದೆಗೆ ಅರ್ಜಿ ಸಲ್ಲಿಸಿರುವ ಕೆಲವು ಹಿರಿಯ ಪ್ರಾಧ್ಯಾಪಕರೊಂದಿಗೆ ಕನ್ನಾಳೆ ಸಂಪರ್ಕದಲ್ಲಿದ್ದರು ಹಾಗೂ ನೇಮಕಾತಿಯಲ್ಲಿ ಪ್ರಭಾವ ಬೀರುವುದಾಗಿ ಹೇಳಿಕೊಂಡಿದ್ದರು ಎಂಬ ಆರೋಪಗಳು ವಿಶ್ವವಿದ್ಯಾಲಯದ ವಲಯದಲ್ಲಿ ಕೇಳಿಬರುತ್ತಿವೆ. ಅನಂತಪುರಂ ಕೇಂದ್ರ ವಿಶ್ವವಿದ್ಯಾಲಯದ ಕುಲಪತಿ ಹುದ್ದೆಯ ನೇಮಕಾತಿಯಲ್ಲೂ ಕನ್ನಾಳೆ ಮಧ್ಯಸ್ಥಿಕೆ ವಹಿಸಿದ್ದರು ಅಥವಾ ಹಣಕಾಸಿನ ವ್ಯವಹಾರ ನಡೆದಿತ್ತು ಎಂಬ ವದಂತಿಗಳು ಹರಿದಾಡುತ್ತಿವೆ. ಆದರೆ ಈ ಆರೋಪಗಳಿಗೆ ಸಂಬಂಧಿಸಿದಂತೆ ಅಧಿಕೃತವಾಗಿ ಯಾವುದೇ ದೃಢೀಕರಣ ಹೊರಬಿದ್ದಿಲ್ಲ.

ಎಬಿವಿಪಿ ಪ್ರತಿಭಟನೆ ಕನ್ನಾಳೆ ಬಂಧನದ ಹಿನ್ನೆಲೆಯಲ್ಲಿ ಅವರ ತುಮಕೂರು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯತ್ವ ರದ್ದುಪಡಿಸಬೇಕು ಎಂದು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ಆಗ್ರಹಿಸಿದೆ. ತುಮಕೂರು ವಿಶ್ವವಿದ್ಯಾಲಯದ ಕುಲಪತಿ ಕಚೇರಿ ಎದುರು ಗುರುವಾರ ಪ್ರತಿಭಟನೆ ನಡೆಸಿದ ಎಬಿವಿಪಿ ಕಾರ್ಯಕರ್ತರು, ಮುಂಬರುವ ಸಿಂಡಿಕೇಟ್ ಸಭೆಯಲ್ಲಿ ಈ ಕು-ರಿತು ನಿರ್ಣಯ ಕೈಗೊಂಡು ರಾಜ್ಯಪಾಲರಿಗೆ ಶಿಫಾರಸು ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ವಿವಿ ಆಡಳಿತದ ಸ್ಪಷ್ಟನೆ ಕನ್ನಾಳೆ ವಿರುದ್ಧದ ಆರೋಪಗಳ ನಡುವೆ ತುಮಕೂರು ವಿಶ್ವವಿದ್ಯಾಲಯದ ಆಡಳಿತವು ತನ್ನ ಮಟ್ಟದಲ್ಲಿ ಯಾವುದೇ ಅಕ್ರಮ ಪತ್ತೆಯಾಗಿಲ್ಲ ಎಂಬ ನಿಲುವು ಹೊಂದಿದೆ ಎಂದು ವರದಿಯಾಗಿದೆ. ಇತ್ತ, ಕೆಪಿಎಸ್‌ಸಿ ಪ್ರಕರಣದ ತನಿಖೆ ಮುಂದುವರಿದಿರುವ ಹಿನ್ನೆಲೆಯಲ್ಲಿ ಕನ್ನಾಳೆ ಅವರ ದೂರವಾಣಿ ಕರೆಗಳ ವಿವರಗಳನ್ನು ತನಿಖಾಧಿಕಾರಿಗಳು ಪರಿಶೀಲಿಸುತ್ತಿದ್ದು, ಅವರ ಸಂಪರ್ಕದಲ್ಲಿದ್ದ ಪ್ರಾಧ್ಯಾಪಕರು ಹಾಗೂ ಇತರರ ವಿಚಾರಣೆಯೂ ನಡೆಯುತ್ತಿದೆ ಎನ್ನಲಾಗಿದೆ.

ಮತ್ತೊಂದೆಡೆ, ತುಮಕೂರು ವಿಶ್ವವಿದ್ಯಾಲಯದ ಆಡಳಿತ ಮಂಡಳಿಯು ಬಸವರಾಜ ಕನ್ನಾಳೆ ಅವರಿಗೆ ಕ್ಲೀನ್‌ಚಿಟ್ ನೀಡಲು ಮುಂದಾಗಿದೆ ಎಂಬ ಮಾತುಗಳು ಕೇಳಿಬಂದಿವೆ. ಈ ಸಂಬಂಧ ಸಿಬಿಐ, ಸಿಐಡಿ ಹಾಗೂ ರಾಜ್ಯ ಗೃಹ ಇಲಾಖೆಗೆ ವಿಶ್ವವಿದ್ಯಾಲಯದ ವತಿಯಿಂದ ಸ್ಪಷ್ಟೀಕರಣ ಪತ್ರ ಕಳುಹಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಕೆಪಿಎಸ್‌ಸಿ ಪ್ರಕರಣದಲ್ಲಿ ಕನ್ನಾಳೆ ವಿರುದ್ಧದ ತನಿಖೆ ವಿಸ್ತರಿಸುತ್ತಿರುವ ಹಿನ್ನೆಲೆಯಲ್ಲಿ ಅವರ ಆಸ್ತಿ, ಹಣಕಾಸು ವ್ಯವಹಾರಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿನ ಸಂಪರ್ಕಗಳ ಬಗ್ಗೆಯೂ ತನಿಖಾಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ ಎನ್ನಲಾಗಿದೆ. ಇತ್ತೀಚೆಗೆ ಕನ್ನಾಳೆ ಸುಮಾರು ?5 ಕೋಟಿ ಮೌಲ್ಯದ ಕೃಷಿ ಭೂಮಿ ಖರೀದಿಸಿದ್ದಾರೆ ಎಂಬ ಮಾಹಿತಿಯೂ ತನಿಖಾ ಮೂಲಗಳಿಂದ ಹೊರಬಿದ್ದಿದೆ ಎಂದು ವರದಿಯಾಗಿದೆ.

# ವಿಜಯ್ ಪ್ರಧಾನಿ ಅಭ್ಯರ್ಥಿ ವಿಚಾರ : ಕಾಂಗ್ರೆಸ್–ಟಿವಿಕೆ ನಡುವೆ ಹೆಚ್ಚಿದ ಸಂಘರ್ಷ, ಸೆ.9ರ ಸಮನ್ವಯ ಸಭೆ

ವಿಜಯ ದುಂಬಿ ಸುದ್ದಿ....

**ಚೆನ್ನೈ: 2029ರ ಲೋಕಸಭಾ ಚುನಾವಣೆಗೆ ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರನ್ನು ಪ್ರಧಾನಿ ಅಭ್ಯರ್ಥಿಯನ್ನಾಗಿ ಬಿಂಬಿಸುವ ಪ್ರಯತ್ನಗಳಿಗೆ ಕಾಂಗ್ರೆಸ್ ಪಕ್ಷದಿಂದ ತೀವ್ರ ವಿರೋಧ ವ್ಯಕ್ತವಾಗುತ್ತಿರುವ ನಡುವೆಯೇ, ತಮಿಳಗ ವೆಟ್ರಿ ಕಳಗಂ (ಟಿವಿಕೆ) ಸೆಪ್ಟೆಂಬರ್ 9ರಂದು ತನ್ನ ಎರಡನೇ ಸಮನ್ವಯ ಸಭೆ ಕರೆದಿದೆ. ಈ ಬೆಳವಣಿಗೆ ರಾಜ್ಯದ ರಾಜಕೀಯ ವಲಯದಲ್ಲಿ ಕುತೂಹಲ ಮೂಡಿಸಿದೆ.**

2029ರ ಸಾರ್ವತ್ರಿಕ ಚುನಾವಣೆಯಲ್ಲಿ ಮುಖ್ಯಮಂತ್ರಿ ವಿಜಯ್ ಅವರನ್ನು ರಾಷ್ಟ್ರಮಟ್ಟದಲ್ಲಿ ಪ್ರಧಾನಿ ಅಭ್ಯರ್ಥಿಯನ್ನಾಗಿ ಮಾಡಬೇಕೆಂಬ ಒತ್ತಾಯ ಟಿವಿಕೆ ಪಾಳಯದಲ್ಲಿ ಕೇಳಿಬರುತ್ತಿದೆ. ಆದರೆ, ಮಿತ್ರಪಕ್ಷವಾಗಿರುವ ಕಾಂಗ್ರೆಸ್ ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದು, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರೇ ಮೈತ್ರಿಕೂಟದ ಪ್ರಧಾನಿ ಅಭ್ಯರ್ಥಿಯಾಗಬೇಕು ಎಂದು ಪಟ್ಟುಹಿಡಿದಿದೆ.

ಟಿವಿಕೆ ರಾಹುಲ್ ಗಾಂಧಿ ಅವರನ್ನು ಬೆಂಬಲಿಸದಿದ್ದರೆ ಮೈತ್ರಿಕೂಟದಿಂದ ಹೊರಬರುವ ಸಾಧ್ಯತೆಯಿದೆ ಎಂಬ ಎಚ್ಚರಿಕೆಯನ್ನೂ ಕಾಂಗ್ರೆಸ್ ನೀಡಿದೆ ಎಂದು ವರದಿಯಾಗಿದೆ. ತಮಿಳುನಾಡು ಕಾಂಗ್ರೆಸ್ ನಾಯಕರು ವಿಜಯ್ ಅವರನ್ನು ಪ್ರಧಾನಿ ಅಭ್ಯರ್ಥಿಯನ್ನಾಗಿ ಬಿಂಬಿಸುವ ಪ್ರಸ್ತಾಪವನ್ನು ಅಭಿಮಾನಿಗಳ ಆಶಯಕ್ಕೆ ಸೀಮಿತವಾದ ವಿಚಾರ ಎಂದು ತಳ್ಳಿಹಾಕಿದ್ದಾರೆ. ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕಿ ಥರಾಹೈ ಕತ್ಬರ್ಟ್ ಈ ಕುರಿತು ಪ್ರತಿಕ್ರಿಯಿಸಿ, ಮುಖ್ಯಮಂತ್ರಿಗಳೇ ಈ ಹಿಂದೆ ರಾಹುಲ್ ಗಾಂಧಿ



ಅವರನ್ನು ಮೈತ್ರಿಕೂಟದ ಉದ್ದೇಶಿತ ಅಭ್ಯರ್ಥಿ ಎಂದು ಒಪ್ಪಿಕೊಂಡಿದ್ದಾರೆ. ವೈಯಕ್ತಿಕ ಶಾಸಕರ ಆಶಯಗಳು ಪಕ್ಷದ ಒಪ್ಪಿತ ನಾಯಕತ್ವದ ತಂತ್ರವನ್ನು ಪ್ರತಿನಿಧಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಮೈತ್ರಿಯ ಭವಿಷ್ಯದ ಬಗ್ಗೆ ಕುತೂಹಲ ಈ ಆಂತರಿಕ ಭಿನ್ನಾಭಿಪ್ರಾಯಗಳ ನಡುವೆಯೇ ಸೆಪ್ಟೆಂಬರ್ 9ರಂದು ನಡೆಯಲಿರುವ ಟಿವಿಕೆ ಸಮನ್ವಯ ಸಭೆ ಮಹತ್ವ ಪಡೆದುಕೊಂಡಿದೆ. ಸಭೆಯಲ್ಲಿ ಮೈತ್ರಿಕೂಟದ ಮುಂದಿನ ಕಾರ್ಯತಂತ್ರ ಹಾಗೂ ನಾಯಕತ್ವದ ವಿಚಾರಗಳ ಕುರಿತು ಚರ್ಚೆಯಾಗುವ ಸಾಧ್ಯತೆಯಿದ್ದು, ಮೈತ್ರಿಯ ಭವಿಷ್ಯದ ದಿಕ್ಕಿನ ಬಗ್ಗೆ ಸ್ಪಷ್ಟತೆ ದೊರೆಯಬಹುದು ಎಂದು ರಾಜಕೀಯ ವಿಶ್ಲೇಷಕರು ಅಭಿಪ್ರಾಯಪಟ್ಟಿದ್ದಾರೆ.

2026ರ ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ ಸಿ. ಜೋಸೆಫ್ ವಿಜಯ್ ನೇತೃತ್ವದ ಟಿವಿಕೆ 108 ಸ್ಥಾನಗಳನ್ನು ಗೆದ್ದು ಏಕೈಕ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿತ್ತು. ಆದರೆ, ಸರ್ಕಾರ ರಚನೆಗೆ ಅಗತ್ಯವಿರುವ ಸ್ಪಷ್ಟ ಬಹುಮತ ಇಲ್ಲದ ಹಿನ್ನೆಲೆಯಲ್ಲಿ ಕಾಂಗ್ರೆಸ್, ವಿದುತಲೈ ಚಿರುತೈಗಲ್ ಕಚ್ಚಿ (ವಿಸಿಕೆ), ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ (ಐಯುಎಂಎಲ್) ಹಾಗೂ ಎಡಪಕ್ಷಗಳ ಬೆಂಬಲದೊಂದಿಗೆ ಸರ್ಕಾರ ರಚಿಸಿದೆ.

ಸಭೆಗೂ ಮುನ್ನ ಶುಕ್ರವಾರ ಟಿವಿಕೆಯ ಪ್ರಮುಖ ಸಚಿವರಾದ ಎನ್. ಆನಂದ್, ಆಧವ್ ಅರ್ಜುನ, ಆರ್. ನಿರ್ಮಲ್ ಕುಮಾರ್ ಹಾಗೂ ಎ. ರಾಜಮೋಹನ್ ಅವರು ಸಿಪಿಐ(ಎಂ) ರಾಜ್ಯ ಕಾರ್ಯದರ್ಶಿ ಪಿ. ಷಣುಗಂ ಮತ್ತು ಸಿಪಿಐ ರಾಜ್ಯ ಕಾರ್ಯದರ್ಶಿ ಎಂ. ವೀರಪಾಂಡ್ಯನ್ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು.

ಇದಲ್ಲದೆ, ಎಂಡಿಎಂಕೆ ಪ್ರಧಾನ ಕಾರ್ಯದರ್ಶಿ ವೈಕೊ ಅವರನ್ನೂ ಭೇಟಿಯಾಗಿ ಸಮಾಲೋಚನೆ ನಡೆಸಿದ್ದಾರೆ. ಎಡಪಕ್ಷಗಳು ಸರ್ಕಾರಕ್ಕೆ ಔಪಚಾರಿಕವಾಗಿ ಸೇರ್ಪಡೆಯಾಗುವಂತೆ ಟಿವಿಕೆ ನಾಯಕರು ಒತ್ತಡ ಹೇರಿದ್ದಾರೆ ಎಂದು ವರದಿಯಾಗಿದೆ.

# ಗುರು ಎಂದರೆ ಬರೀ ಪಾಠವಲ್ಲ, ಬದುಕಿನ ಮಾರ್ಗದರ್ಶಿ

ವಿಜಯ ದುಂಬಿ ಸುದ್ದಿ....

ನಮ್ಮ ಯಶಸ್ಸಿನ ಕಥೆಯಲ್ಲಿ ಕಾಣಿಸಿಕೊಳ್ಳುವ ಹೆಸರು ನಮ್ಮದಾಗಿರಬಹುದು. ಆದರೆ ಆ ಯಶಸ್ಸಿನ ಮೊದಲ ಅಕ್ಷರ ಬರೆದವರು ಒಬ್ಬ ಶಿಕ್ಷಕರು. ಬೆಳಗ್ಗೆ ಶಾಲೆಯ ಗಂಟೆ ಮೊಳಗುತ್ತದೆ. ಕೈಯಲ್ಲಿ ಪುಸ್ತಕ ಹಿಡಿದು ವಿದ್ಯಾರ್ಥಿಗಳು ತರಗತಿಯತ್ತ ಹೆಜ್ಜೆ ಹಾಕುತ್ತಾರೆ. ಕಪ್ಪುಹಲಗೆಯ ಮುಂದೆ ನಿಂತಿರುವ ಶಿಕ್ಷಕರು ಪಾಠ ಆರಂಭಿಸುತ್ತಾರೆ. ಹೊರಗಿನಿಂದ ನೋಡಿದರೆ ಇದು ಪ್ರತಿದಿನ ನಡೆಯುವ ಸಾಮಾನ್ಯ ದೃಶ್ಯ. ಆದರೆ ಆ ತರಗತಿಯಲ್ಲಿ ನಡೆಯುತ್ತಿರುವುದು ಕೇವಲ ಪಾಠವಲ್ಲ. ಅಲ್ಲಿ ಭವಿಷ್ಯವೊಂದು ರೂಪುಗೊಳ್ಳುತ್ತಿರುತ್ತದೆ.

ಒಬ್ಬ ವಿದ್ಯಾರ್ಥಿಯ ಕನಸಿಗೆ ರೂಪ ನೀಡುವುದು, ಸೋತಾಗ ಮತ್ತೆ ಪ್ರಯತ್ನಿಸುವ ಧೈರ್ಯ ತುಂಬುವುದು, ತಪ್ಪಾದಾಗ ತಿದ್ದುವುದು, ಗೆದ್ದಾಗ ವಿನಯ ಕಲಿಸುವುದು?ಇವೆಲ್ಲವೂ ಶಿಕ್ಷಕರ ಪಾತ್ರದ ಭಾಗ. ಅದಕ್ಕಾಗಿಯೇ ಶಿಕ್ಷಕರನ್ನು ಭವಿಷ್ಯ ರೂಪಿಸುವ ಶಿಲ್ಪಿಗಳು ಎಂದು ಕರೆಯಲಾಗುತ್ತದೆ.

ಭಾರತದಲ್ಲಿ ಪ್ರತಿವರ್ಷ ಸೆಪ್ಟೆಂಬರ್ 5ರಂದು ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಇದು ಭಾರತದ ಮಾಜಿ ರಾಷ್ಟ್ರಪತಿ, ತತ್ವಜ್ಞಾನಿ ಹಾಗೂ ಶಿಕ್ಷಣ ತಜ್ಞ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನ. 1888ರ ಸೆಪ್ಟೆಂಬರ್ 5ರಂದು ಜನಿಸಿದ ರಾಧಾಕೃಷ್ಣನ್ ಅವರು ಶಿಕ್ಷಣಕ್ಕೆ ಅಪಾರ ಮಹತ್ವ ನೀಡಿದ್ದರು. ಅವರ ವಿದ್ಯಾರ್ಥಿಗಳು ಹಾಗೂ ಅಭಿಮಾನಿಗಳು ತಮ್ಮ ನೆಚ್ಚಿನ ಗುರುಗಳ ಜನ್ಮದಿನವನ್ನು ಆಚರಿಸುವ ಬದಲು ಶಿಕ್ಷಕರನ್ನು ಗೌರವಿಸುವ ದಿನವನ್ನಾಗಿ ಆಚರಿಸಿದರೆ ಅವರಿಗೆ ಹೆಚ್ಚು ಸಂತೋಷವಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟಿದ್ದರು. ಅಂದಿನಿಂದ ಸೆಪ್ಟೆಂಬರ್ 5 ಶಿಕ್ಷಕರನ್ನು ಗೌರವಿಸುವ ವಿಶೇಷ ದಿನವಾಗಿ ಗುರುತಿಸಿಕೊಂಡಿದೆ.ಶಿಕ್ಷಕರನ್ನು ಕೇವಲ ಪಠ್ಯಪುಸ್ತಕದ ಜ್ಞಾನ ನೀಡುವವರಾಗಿ ನೋಡಲು ಸಾಧ್ಯವಿಲ್ಲ. ಜೀವನದಲ್ಲಿ ಹೇಗೆ ನಡೆದುಕೊಳ್ಳಬೇಕು ಎಂಬುದನ್ನು ಕಲಿಸುವುದೂ ಶಿಕ್ಷಣದ ಒಂದು ಪ್ರಮುಖ ಭಾಗ.

'ಸೋಲನ್ನು ಕಂಡು ಹೆದರಬೇಡ, ಪ್ರಯತ್ನ ಬಿಡಬೇಡ, ಇತರರನ್ನು ಗೌರವಿಸು, ಸತ್ಯದ ದಾರಿಯಲ್ಲಿ ನಡೆ' ಎಂಬಂತಹ ಸರಳ ಮಾತುಗಳು ವಿದ್ಯಾರ್ಥಿಯ ಜೀವನದ ಮೇಲೆ ದೊಡ್ಡ ಪರಿಣಾಮ ಬೀರುತ್ತವೆ. ಕೆಲವೊಮ್ಮೆ ಶಿಕ್ಷಕರ ಒಂದು ಮಾತು ವಿದ್ಯಾರ್ಥಿಯ ಜೀವನದ ದಿಕ್ಕನ್ನೇ ಬದಲಿಸಬಹುದು. ಪ್ರತಿಭೆ ಇದ್ದರೂ ಆತ್ಮವಿಶ್ವಾಸದ ಕೊರತೆಯಿಂದ ಹಿಂದೆ ಸರಿಯುವ ವಿದ್ಯಾರ್ಥಿಗೆ ಶಿಕ್ಷಕ ನೀಡುವ ಪ್ರೋತ್ಸಾಹವೇ ಮುಂದೆ ದೊಡ್ಡ ಸಾಧನೆಗೆ ಕಾರಣವಾಗಬಹುದು.

ಇದು ತಂತ್ರಜ್ಞಾನದ ಯುಗ. ವಿದ್ಯಾರ್ಥಿಯ ಕೈಯಲ್ಲಿರುವ ಮೊಬೈಲ್‌ನಲ್ಲಿ ಸಾವಿರಾರು ಪುಸ್ತಕಗಳಿವೆ. ಇಂಟರ್‌ನೆಟ್‌ನಲ್ಲಿ ಕ್ಷಣಾರ್ಧದಲ್ಲಿ ಯಾವುದೇ ಮಾಹಿತಿಯನ್ನೂ ಪಡೆದುಕೊಳ್ಳಬಹುದು. ಹಾಗಾದರೆ ಶಿಕ್ಷಕರ ಅಗತ್ಯ ಕಡಿಮೆಯಾಗುತ್ತಿದೆಯೇ? ಖಂಡಿತ ಇಲ್ಲ. ಬದಲಾಗಿ ಶಿಕ್ಷಕರ ಪಾತ್ರ ಇನ್ನಷ್ಟು ಮಹತ್ವ ಪಡೆದುಕೊಂಡಿದೆ.

ಮಾಹಿತಿ ನೀಡುವುದು ಮಾತ್ರ ಶಿಕ್ಷಣವಲ್ಲ. ಸಿಕ್ಕ ಮಾಹಿತಿಯನ್ನು ಹೇಗೆ ಅರ್ಥಮಾಡಿಕೊಳ್ಳಬೇಕು, ಯಾವುದು ಸರಿ, ಯಾವುದು ತಪ್ಪು, ಯಾವುದನ್ನು ನಂಬಬೇಕು ಮತ್ತು ಯಾವುದನ್ನು ಪ್ರಶ್ನಿಸಬೇಕು ಎಂಬುದನ್ನು ಕಲಿಸುವುದು ಮುಖ್ಯ. ತಂತ್ರಜ್ಞಾನ ಉತ್ತರಗಳನ್ನು ನೀಡಬಹುದು; ಆದರೆ ಸರಿಯಾದ ಪ್ರಶ್ನೆಯನ್ನು ಕೇಳುವ ಸಾಮರ್ಥ್ಯವನ್ನು ಬೆಳೆಸುವುದು ಶಿಕ್ಷಕರ ಜವಾಬ್ದಾರಿ.




ಹಿಂದೆ ಶಿಕ್ಷಕರು ತರಗತಿಯಲ್ಲಿ ಪಠ್ಯಪುಸ್ತಕ ಹಾಗೂ ಕಪ್ಪುಹಲಗೆಯ ಮೂಲಕ ಬೋಧಿಸುತ್ತಿದ್ದರು. ಇಂದು ಸ್ಮಾರ್ಟ್‌ಬೋರ್ಡ್, ಪ್ರೆಸೆಂಟೇಷನ್, ವಿಡಿಯೊ, ಆನ್‌ಲೈನ್ ತರಗತಿ ಹಾಗೂ ವಿವಿಧ ಡಿಜಿಟಲ್ ಸಾಧನಗಳ ಮೂಲಕ ಬೋಧಿಸುತ್ತಿದ್ದಾರೆ. ಇದರಿಂದ ಶಿಕ್ಷಣ ಸುಲಭವಾಗಬಹುದು. ಆದರೆ ಇದರೊಂದಿಗೆ ಶಿಕ್ಷಕರ ಜವಾಬ್ದಾರಿಯೂ ಹೆಚ್ಚಾಗಿದೆ.

ಹಿಂದಿನ ಕಾಲದಲ್ಲಿ ಶಿಕ್ಷಕರಿಗೆ ವಿದ್ಯಾರ್ಥಿಗಳು ಅಪಾರ ಗೌರವ ನೀಡುತ್ತಿದ್ದರು. ಇಂದಿನ ಕಾಲದಲ್ಲಿ ಶಿಕ್ಷಕ–ವಿದ್ಯಾರ್ಥಿ ಸಂಬಂಧ ಹೆಚ್ಚು ಸ್ನೇಹಪರವಾಗಿದೆ. ಆದರೂ ಶಿಕ್ಷಕರ ಗೌರವದ ಸ್ಥಾನ ಮಾತ್ರ ಬದಲಾಗಿಲ್ಲ. ಒಬ್ಬ ಉತ್ತಮ ಶಿಕ್ಷಕ ವಿದ್ಯಾರ್ಥಿಯ ತಪ್ಪನ್ನು ತಿದ್ದುತ್ತಾನೆ; ಆದರೆ ವಿದ್ಯಾರ್ಥಿಯನ್ನು ತಿರಸ್ಕರಿಸುವುದಿಲ್ಲ. ಆತನ ಸಾಮರ್ಥ್ಯವನ್ನು ಗುರುತಿಸಿ ಆತ್ಮವಿಶ್ವಾಸ ತುಂಬುತ್ತಾನೆ. ವಿದ್ಯಾರ್ಥಿಯಲ್ಲಿರುವ ಪ್ರತಿಭೆಯನ್ನು ಹೊರತಂದು, ಅದಕ್ಕೆ ಸೂಕ್ತ ದಿಕ್ಕು ನೀಡುತ್ತಾನೆ.

ಸೆಪ್ಟೆಂಬರ್ 5ರಂದು ಶಿಕ್ಷಕರಿಗೆ ಹೂವು ನೀಡಿ ಶುಭಾಶಯ ಕೋರುವುದು, ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವುದು ಸಂತೋಷದ ಸಂಗತಿ. ಆದರೆ ಶಿಕ್ಷಕರಿಗೆ ನೀಡಬಹುದಾದ ನಿಜವಾದ ಗೌರವವೆಂದರೆ ಅವರು ಕಲಿಸಿದ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು. ನಾವು ಜೀವನದಲ್ಲಿ ಯಶಸ್ಸು ಸಾಧಿಸಿದಾಗ 'ನನ್ನ ಶಿಕ್ಷಕರು ನನಗೆ ದಾರಿ ತೋರಿಸಿದ್ದರು' ಎಂದು ನೆನಪಿಸಿಕೊಳ್ಳುವುದೇ ಅವರ ಪಾಲಿಗೆ ಅತ್ಯಂತ ದೊಡ್ಡ ಗೌರವ.

ಒಬ್ಬ ವಿದ್ಯಾರ್ಥಿ ವೈದ್ಯನಾಗಬಹುದು, ಎಂಜಿನಿಯರ್ ಆಗಬಹುದು, ಪತ್ರಕರ್ತನಾಗಬಹುದು, ಉದ್ಯಮಿಯಾಗಬಹುದು. ಆದರೆ ಆತನ ಮೊದಲ ಹೆಜ್ಜೆಯ ಹಿಂದೆ ಒಬ್ಬ ಶಿಕ್ಷಕರ ಮಾರ್ಗದರ್ಶನ ಇದ್ದೇ ಇರುತ್ತದೆ.ಹೀಗಾಗಿ ಶಿಕ್ಷಕರ ದಿನಾಚರಣೆ ಕೇವಲ ಒಂದು ದಿನದ ಆಚರಣೆಯಾಗಬಾರದು. ನಮ್ಮ ಬದುಕನ್ನು ರೂಪಿಸಿದ ಪ್ರತಿಯೊಬ್ಬ ಗುರುವನ್ನು ನೆನಪಿಸಿಕೊಳ್ಳುವ, ಅವರ ಕೊಡುಗೆಯನ್ನು ಗೌರವಿಸುವ ಹಾಗೂ ಅವರು ಕಲಿಸಿದ ಮೌಲ್ಯಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಅವಕಾಶವಾಗಬೇಕು.

ಗುರು ಎಂದರೆ ಕೇವಲ ಪಾಠ ಹೇಳುವ ವ್ಯಕ್ತಿಯಲ್ಲ; ಬದುಕಿನ ದಾರಿ ತೋರಿಸುವ ಮಾರ್ಗದರ್ಶಿ.

## ಪರಪ್ಪನ ಅಗ್ರಹಾರ ಜೈಲಿನಲ್ಲೇ ವಾಚರ್ ಮೇಲೆ ಮಾರಣಾಂತಿಕ ಹಲ್ಲೆ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಕಟ್ಟುನಿಟ್ಟಿನ ನಿಯಮ ಪಾಲಿಸುತ್ತಿದ್ದ ಜೈಲು ವೀಕ್ಷಕನ ಮೇಲೆಯೇ ಕೈದಿಗಳು ಮಾರಣಾಂತಿಕ ಹಲ್ಲೆ ನಡೆಸಿರುವ ಆರೋಪ ಕೇಳಿಬಂದಿದೆ. ಸುಹಾಸ್ ಶೆಟ್ಟಿ ಕೊಲೆ ಪ್ರಕರಣದ ಆರೋಪಿಗಳೆನ್ನಲಾದ ಐವರು ಕೈದಿಗಳು ವಾಚರ್ ಮಂಜುನಾಥ್ ಹವೇಲಿ ಅವರನ್ನು ಕೊಲೆ ಮಾಡಲು ಯತ್ನಿಸಿದ್ದಾರೆ ಎಂದು ದೂರು ದಾಖಲಾಗಿದೆ.**




ಸೆಪ್ಟೆಂಬರ್ 2ರಂದು ಬೆಳಗ್ಗೆ ಸುಮಾರು 11.30ರ ವೇಳೆಗೆ ಪರಪ್ಪನ ಅಗ್ರಹಾರ ಜೈಲಿನ ಶಿಕ್ಷಾ ಬಂಧಿ ವಿಭಾಗದಲ್ಲಿ ಘಟನೆ ನಡೆದಿದೆ. ಮಂಜುನಾಥ್ ಅವರು ಕೈದಿಗಳ ಅವಧಿಪೂರ್ವ ಬಿಡುಗಡೆಗೆ ಸಂಬಂಧಿಸಿದ ವಿಷಯ ನಿರ್ವಾಹಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಈ ಸಂಬಂಧ ವಿಭಾಗಕ್ಕೆ ತೆರಳಿದ್ದರು. ಈ ವೇಳೆ ಮೊಹಮ್ಮದ್ ಮುಜಾಮಿಲ್, ಅಬ್ದುಲ್ ಶಫಾನ್, ಮೊಹಮ್ಮದ್ ರಿಜ್ವಾನ್, ನಯಾಜ್ ಹಾಗೂ ಕಲಂದರ್ ಶಫಿ ಎಂಬ ಐವರು ಕೈದಿಗಳು ಅವರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ. ಆರೋಪಿಗಳಿಂದ ಏಕಾಏಕಿ ಮೂಗಿಗೆ ಗುದ್ದಿಸಿಕೊಂಡ ಮಂಜುನಾಥ್ ಅವರನ್ನು ಬಳಿಕ ಕೊಠಡಿ ಸಂಖ್ಯೆ 4ಕ್ಕೆ ಎಳೆದೊಯ್ದು ಹಲ್ಲೆ ನಡೆಸಲಾಗಿದೆ. ಅಷ್ಟೇ ಅಲ್ಲದೆ, ಅವರ ಕುತ್ತಿಗೆಯನ್ನು ಬಲವಾಗಿ ಹಿಸುಕಿ ಉಸಿರುಗಟ್ಟಿಸಿ ಕೊಲೆ ಮಾಡಲು ಯತ್ನಿಸಿದ್ದಾರೆ ಎನ್ನಲಾಗಿದೆ. ಕರ್ತವ್ಯದಲ್ಲಿದ್ದ ಇತರ ಜೈಲು ಅಧಿಕಾರಿಗಳು ಮತ್ತು ಸಿಬ್ಬಂದಿ ಮಧ್ಯಪ್ರವೇಶಿಸಿ ಮಂಜುನಾಥ್ ಅವರನ್ನು ರಕ್ಷಿಸಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಅಕ್ರಮ ಚಟುವಟಿಕೆ ತಡೆಯುತ್ತಿದ್ದುದೇ ಕಾರಣ ಜೈಲಿನಲ್ಲಿ ನಡೆಯುತ್ತಿದ್ದ ಅಕ್ರಮ ಚಟುವಟಿಕೆಗಳ ಬಗ್ಗೆ ಮಂಜುನಾಥ್ ಅವರು ಹಿರಿಯ ಅಧಿಕಾರಿಗಳ ಗಮನಕ್ಕೆ ತರುತ್ತಿದ್ದರು ಎನ್ನಲಾಗಿದ್ದು, ಇದೇ ಕಾರಣಕ್ಕೆ ಆರೋಪಿಗಳು ಅವರ ಮೇಲೆ ಹಳೆಯ ದ್ವೇಷ ಹೊಂದಿದ್ದರು ಎಂಬ ಆರೋಪವೂ ಕೇಳಿಬಂದಿದೆ. ತಿಂಗಳ ಹಿಂದೆ ಕೆಲವು ಕೈದಿಗಳನ್ನು ಭದ್ರತಾ ವಿಭಾಗದಿಂದ ಅನೆಕ್ಸ್–1 ಕಾರಾಗೃಹಕ್ಕೆ ಸ್ಥಳಾಂತರಿಸುವ ಸಂದರ್ಭದಲ್ಲಿ ಹೆಚ್ಚುವರಿ ವಸ್ತುಗಳನ್ನು ತೆಗೆದುಕೊಂಡು ಹೋಗಲು ಮಂಜುನಾಥ್ ಅವಕಾಶ ನೀಡಿರಲಿಲ್ಲ. ಕೈದಿಗಳ ವಸ್ತುಗಳ ತಪಾಸಣೆ ವಿಚಾರದಲ್ಲೂ ಅವರ ಹಾಗೂ ಆರೋಪಿಗಳ ನಡುವೆ ಹಿಂದೆ ವಾಗ್ವಾದ ನಡೆದಿತ್ತು ಎನ್ನಲಾಗಿದೆ. ಘಟನೆ ಸಂಬಂಧ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ. ಸದ್ಯ ಪ್ರಕರಣದಲ್ಲಿ ಆರೋಪಿಸಲಾಗಿರುವ ಐವರು ಕೈದಿಗಳ ಪಾತ್ರ, ಹಲ್ಲೆಗೆ ನಿಖರ ಕಾರಣ ಹಾಗೂ ಜೈಲಿನೊಳಗಿನ ಅಕ್ರಮ ಚಟುವಟಿಕೆಗಳ ಕುರಿತು ಅವರು ನೀಡಿದ್ದ ಮಾಹಿತಿಗಳ ಬಗ್ಗೆಯೂ ತನಿಖೆ ನಡೆಯುವ ಸಾಧ್ಯತೆಯಿದೆ.

# ಕಡೆಯ ಶ್ರಾವಣ ಶನಿವಾರ: ಬಿಳಿಗಿರಿರಂಗನಬೆಟ್ಟಕ್ಕೆ ಹರಿದುಬಂದ ಭಕ್ತಸಾಗರ



ವಿಜಯ ದುಂಬಿ ಸುದ್ದಿ....

**ಯಳಂದೂರು: ಶ್ರಾವಣ ಮಾಸದ ಕೊನೆಯ ಶನಿವಾರದ ಪ್ರಯುಕ್ತ ತಾಲೂಕಿನ ಪ್ರಸಿದ್ಧ ವೈಷ್ಣವ ಧಾರ್ಮಿಕ ಕ್ಷೇತ್ರವಾದ ಬಿಳಿಗಿರಿರಂಗನಬೆಟ್ಟದ ಬಿಳಿಗಿರಿರಂಗನಾಥಸ್ವಾಮಿ ದೇವಸ್ಥಾನಕ್ಕೆ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ದೇವರ ದರ್ಶನ ಪಡೆದರು.**

ಕಡೆಯ ಶ್ರಾವಣ ಶನಿವಾರದ ಅಂಗವಾಗಿ ಬೆಳಗ್ಗೆಯಿಂದಲೇ ಬಿಳಿಗಿರಿರಂಗನಾಥಸ್ವಾಮಿ ಹಾಗೂ ಅಲಮೇಲಮ್ಮನವರಿಗೆ ವಿವಿಧ ಅಭಿಷೇಕಗಳನ್ನು ನೆರವೇರಿಸಿ, ತುಳಸಿ ಹಾಗೂ ವಿವಿಧ ಪುಷ್ಪಗಳಿಂದ ವಿಶೇಷವಾಗಿ ಅಲಂಕರಿಸಲಾಗಿತ್ತು. ಬಳಿಕ ದೇವರಿಗೆ ವಿಶೇಷ ಪೂಜೆ ಹಾಗೂ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು. ಜಿಲ್ಲೆಯ ವಿವಿಧ ಭಾಗಗಳು ಸೇರಿದಂತೆ ಹೊರ ಜಿಲ್ಲೆಗಳಿಂದಲೂ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಬೆಟ್ಟಕ್ಕೆ ಆಗಮಿಸಿದ್ದರಿಂದ ಬೆಳಗ್ಗೆಯಿಂದಲೇ ದೇವಸ್ಥಾನದ ಆವರಣದಲ್ಲಿ ಜನಜಂಗುಳಿ ಕಂಡುಬಂತು. ದೇವಸ್ಥಾನ, ಕಮರಿ ಹಾಗೂ ರಥದ ಬೀದಿಯಲ್ಲಿ ಭಕ್ತರು ಮತ್ತು ವಾಹನಗಳ ಸಂಖ್ಯೆ ಹೆಚ್ಚಾಗಿತ್ತು.

ದೇವಸ್ಥಾನದ ಸಮೀಪದ ಅನ್ನದಾಸೋಹ ಭವನದಲ್ಲಿ ಮಧ್ಯಾಹ್ನ ಸಾವಿರಾರು ಭಕ್ತರಿಗೆ ಪ್ರಸಾದ ವಿತರಿಸುವ ವ್ಯವಸ್ಥೆ ಮಾಡಲಾಗಿತ್ತು. ಪ್ರಸಾದ ಸ್ವೀಕರಿಸಲು ಭಕ್ತರು ಸರತಿ ಸಾಲಿನಲ್ಲಿ ನಿಂತಿರುವ ದೃಶ್ಯ ಕಂಡುಬಂತು. ಮಹಿಳಾ ಭಕ್ತರೇ ಅಧಿಕ: ರಾಜ್ಯ ಸರ್ಕಾರದ ಶಕ್ತಿ ಯೋಜನೆಯಡಿ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣದ ಸೌಲಭ್ಯ ಇರುವ ಹಿನ್ನೆಲೆಯಲ್ಲಿ ಮೈಸೂರು, ಮಂಡ್ಯ, ರಾಮನಗರ, ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳಾ ಭಕ್ತರು ಆಗಮಿಸಿದ್ದು ವಿಶೇಷವಾಗಿತ್ತು. ಭಕ್ತರ ಅನುಕೂಲಕ್ಕಾಗಿ ಪಟ್ಟಣದಿಂದ ಬಿಳಿಗಿರಿರಂಗನಬೆಟ್ಟಕ್ಕೆ ಕೆಎಸ್‌ಆರ್‌ಟಿಸಿ ವತಿಯಿಂದ ಹೆಚ್ಚುವರಿ ಬಸ್‌ಗಳ ವ್ಯವಸ್ಥೆ ಮಾಡಲಾಗಿತ್ತು.

ಆದರೂ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದರಿಂದ ಬಸ್‌ಗಳು ತುಂಬಿ ತುಳುಕುತ್ತಿದ್ದವು. ದೇವರ ದರ್ಶನ ಪಡೆದ ಭಕ್ತರು ಗರುಡೋತ್ಸವ ಸೇರಿದಂತೆ ವಿವಿಧ ಸೇವೆಗಳನ್ನು ಸಲ್ಲಿಸಿದರು. ದಾಸಂದಿರು ಕಡ್ಲೆಪುರಿ, ಬೆಲ್ಲ, ಅಕ್ಕಿ ಸೇರಿದಂತೆ ವಿವಿಧ ದವಸಧಾನ್ಯಗಳೊಂದಿಗೆ ದೇವಸ್ಥಾನದ ಸುತ್ತಮುತ್ತ ಬ್ಯಾಟೆಮನೆ ಸೇವೆಯಲ್ಲಿ ತೊಡಗಿದ್ದ ದೃಶ್ಯವೂ ಕಂಡುಬಂತು. ಶಾಸಕರಿಂದ ವಿಶೇಷ ಪೂಜೆ: ಕಡೆಯ ಶ್ರಾವಣ ಶನಿವಾರದ ಪ್ರಯುಕ್ತ ಶಾಸಕ ಎ.ಆರ್. ಕೃಷ್ಣಮೂರ್ತಿ ಅವರು ಬಿಳಿಗಿರಿರಂಗನಾಥಸ್ವಾಮಿ ಬೆಟ್ಟಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಈ ವೇಳೆ ಭಕ್ತರೊಂದಿಗೆ ಬೆರೆತು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡರು.

# ನ.27ನ್ನು ಬಾಲ್ಯ ವಿವಾಹ ವಿರೋಧಿ ಜಾಗತಿಕ ದಿನಾಚರಣೆಯಾಗಿ ಘೋಷಿಸಿದ ವಿಶ್ವಸಂಸ್ಥೆ

ವಿಜಯ ದುಂಬಿ ಸುದ್ದಿ....

**ನವದೆಹಲಿ/ನ್ಯೂಯಾರ್ಕ್: ಬಾಲಕಿಯರ ಹಕ್ಕುಗಳ ರಕ್ಷಣೆ ಹಾಗೂ ಬಾಲ್ಯ ವಿವಾಹದ ಪಿಡುಗನ್ನು ಜಗತ್ತಿನಿಂದ ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ವಿಶ್ವಸಂಸ್ಥೆ ನವೆಂಬರ್ 27 ಅನ್ನು ಅಂತಾರಾಷ್ಟ್ರೀಯ ಬಾಲ್ಯ ವಿವಾಹ ವಿರೋಧಿ ದಿನ ಎಂದು ಅಧಿಕೃತವಾಗಿ ಘೋಷಿಸಿದೆ.**

ವಿಶ್ವಸಂಸ್ಥೆಯ ಮಹಾಸಭೆಯಲ್ಲಿ ಮಂಡಿಸಲಾದ ಈ ಐತಿಹಾಸಿಕ ನಿರ್ಣಯಕ್ಕೆ ಜಾಗತಿಕ ಸಮುದಾಯದ ಸರ್ವಾನುಮತದ ಬೆಂಬಲ ದೊರೆತಿದ್ದು, ಮಕ್ಕಳ ಹಕ್ಕುಗಳ ರಕ್ಷಣೆಯ ಹೋರಾಟದಲ್ಲಿ ಇದೊಂದು ಮಹತ್ವದ ತಿರುವು ಎಂದು ಪರಿಗಣಿಸಲಾಗಿದೆ. ಸಿಯೆರಾ ಲಿಯೋನ್‌ನ ಪ್ರಥಮ ಮಹಿಳೆ ಡಾ. ಫಾತಿಮಾ ಮಾಡ ಬಯೋ ಅವರ ನೇತೃತ್ವದಲ್ಲಿ ಹಾಗೂ ವಿವಿಧ ಮಕ್ಕಳ ಹಕ್ಕುಗಳ ಸಂಘಟನೆಗಳ ದೀರ್ಘಕಾಲದ ಹೋರಾಟದ ಫಲವಾಗಿ ಈ ದಿನ ಅಸ್ತಿತ್ವಕ್ಕೆ ಬಂದಿದೆ. ಬಾಲ್ಯ ವಿವಾಹ ಕೇವಲ ಸಾಮಾಜಿಕ ಪಿಡುಗು ಮಾತ್ರವಲ್ಲ, ಗಂಭೀರ ಮಾನವ ಹಕ್ಕುಗಳ ಉಲ್ಲಂಘನೆಯೂ ಆಗಿದ್ದು, ಸುಸ್ಥಿರ ಅಭಿವೃದ್ಧಿ ಗುರಿಗಳ ಸಾಧನೆಗೆ ದೊಡ್ಡ ಅಡ್ಡಿಯಾಗಿದೆ ಎಂದು ವಿಶ್ವಸಂಸ್ಥೆ ತನ್ನ ನಿರ್ಣಯದಲ್ಲಿ ಸ್ಪಷ್ಟಪಡಿಸಿದೆ.

ಭಾರತದಲ್ಲೂ ಅಭಿಯಾನ ಭಾರತದಲ್ಲೂ ಬಾಲ್ಯ ವಿವಾಹದ ವಿರುದ್ಧದ ಹೋರಾಟ ತೀವ್ರಗೊಂಡಿದೆ. ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ಆರಂಭಿಸಿರುವ 'ಬಾಲ್ಯ ವಿವಾಹ ಮುಕ್ತ ಭಾರತ' ಅಭಿಯಾನ ದೇಶಾದ್ಯಂತ ಜಾಗೃತಿ ಮೂಡಿಸುವ ಕಾರ್ಯದಲ್ಲಿ ತೊಡಗಿದೆ. ಬಾಲ್ಯ ವಿವಾಹ ನಿಷೇಧ ಕಾಯ್ದೆಯಡಿ ಮಕ್ಕಳ ವಿವಾಹ ಕಾನೂನುಬಾಹಿರವಾಗಿದ್ದು, ಇಂತಹ ವಿವಾಹಗಳನ್ನು ತಡೆಯಲು ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ. ಭಾರತೀಯ ನ್ಯಾಯ ಸಂಹಿತೆ ಹಾಗೂ ಪೋಕ್ಸೊ ಕಾಯ್ದೆಗಳ ಅಡಿಯಲ್ಲಿ




ಅಪ್ರಾಪ್ತ ಬಾಲಕಿಯರ ಮೇಲಿನ ಲೈಂಗಿಕ ದೌರ್ಜನ್ಯವನ್ನು ಗಂಭೀರ ಅಪರಾಧವೆಂದು ಪರಿಗಣಿಸಿ ಕಠಿಣ ಶಿಕ್ಷೆಗೆ ಅವಕಾಶ ಕಲ್ಪಿಸಲಾಗಿದೆ.

ಆದರೆ ಕಾನೂನುಗಳು ಕಠಿಣವಾಗಿದ್ದರೂ ಗ್ರಾಮೀಣ ಹಾಗೂ ಹಿಂದುಳಿದ ಪ್ರದೇಶಗಳಲ್ಲಿ ಅಜ್ಞಾನ, ಬಡತನ ಮತ್ತು ಸಾಂಪ್ರದಾಯಿಕ ನಂಬಿಕೆಗಳ ಕಾರಣದಿಂದ ಬಾಲ್ಯ ವಿವಾಹಗಳು ಸಂಪೂರ್ಣವಾಗಿ ನಿಂತಿಲ್ಲ.ವಿಶ್ವಸಂಸ್ಥೆ ನವೆಂಬರ್ 27 ಅನ್ನು ನಿರ್ದಿಷ್ಟ ದಿನವನ್ನಾಗಿ ಘೋಷಿಸಿರುವುದರಿಂದ, ಪ್ರತಿವರ್ಷ ಜಾಗತಿಕ ಮಟ್ಟದಲ್ಲಿ ಬಾಲ್ಯ ವಿವಾಹದ ವಿರುದ್ಧ ಜಾಗೃತಿ ಮೂಡಿಸಲು, ಸರ್ಕಾರಗಳನ್ನು ಹೊಣೆಗಾರರನ್ನಾಗಿಸಲು ಹಾಗೂ ಬಾಲಕಿಯರ ಶಿಕ್ಷಣ ಮತ್ತು ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡಲು ಬಲವಾದ ವೇದಿಕೆ ದೊರೆತಂತಾಗಿದೆ.

ಭಾರತದಲ್ಲಿ ಬದಲಾಗುತ್ತಿರುವ ಚಿತ್ರ ಕಳೆದ ಕೆಲವು ದಶಕಗಳ ಬೆಳವಣಿಗೆಯನ್ನು ಗಮನಿಸಿದರೆ ಭಾರತದಲ್ಲಿ ಬಾಲ್ಯ ವಿವಾಹದ ಪ್ರಮಾಣ ಇಳಿಕೆಯಾಗುತ್ತಿರುವುದು ಗೋಚರಿಸುತ್ತದೆ. ಹೆಣ್ಣುಮಕ್ಕಳ ಶಿಕ್ಷಣದ ವಿಸ್ತರಣೆ, ತಾಯಂದಿರ ಸಾಕ್ಷರತೆ ಹೆಚ್ಚಳ, ನಗರೀಕರಣ, ಸರ್ಕಾರಿ ಯೋಜನೆಗಳು, ಕಾನೂನು ಜಾರಿ ಮತ್ತು ಸಾರ್ವಜನಿಕ ಜಾಗೃತಿ ಇದಕ್ಕೆ ಪ್ರಮುಖ ಕಾರಣಗಳಾಗಿವೆ. ಆದರೆ ರಾಜ್ಯವಾರು ಪರಿಸ್ಥಿತಿ ಒಂದೇ ರೀತಿಯಲ್ಲ. ಹಿಂದಿನ ವಿಶ್ಲೇಷಣೆಗಳ ಪ್ರಕಾರ ಉತ್ತರ ಪ್ರದೇಶ, ಬಿಹಾರ, ಪಶ್ಚಿಮ ಬಂಗಾಳ, ಮಹಾರಾಷ್ಟ್ರ ಮತ್ತು ಮಧ್ಯಪ್ರದೇಶಗಳಲ್ಲಿ ಬಾಲ್ಯ ವಿವಾಹದ ಪ್ರಮಾಣ ಹೆಚ್ಚಾಗಿದೆ. ಗ್ರಾಮೀಣ ಪ್ರದೇಶಗಳು, ಬಡ ಕುಟುಂಬಗಳು ಹಾಗೂ ಕಡಿಮೆ ಶಿಕ್ಷಣ ಪಡೆದ ಸಮುದಾಯಗಳಲ್ಲಿ ಬಾಲ್ಯ ವಿವಾಹದ ಅಪಾಯ ಇನ್ನೂ ಹೆಚ್ಚಾಗಿದೆ.

ಮಕ್ಕಳ ಬಾಲ್ಯವನ್ನು ಕಸಿದುಕೊಳ್ಳುವ ಈ ಪಿಡುಗಿನ ವಿರುದ್ಧ ಕೇವಲ ಕಾನೂನು ಕ್ರಮಗಳಷ್ಟೇ ಸಾಕಾಗುವುದಿಲ್ಲ. ಕುಟುಂಬ, ಸಮುದಾಯ, ಶಿಕ್ಷಣ ಸಂಸ್ಥೆಗಳು, ಸರ್ಕಾರಗಳು ಹಾಗೂ ನಾಗರಿಕ ಸಮಾಜ ಒಟ್ಟಾಗಿ ಕಾರ್ಯನಿರ್ವಹಿಸಿದಾಗ ಮಾತ್ರ ಬಾಲ್ಯ ವಿವಾಹವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯ ಎಂಬ ಸಂದೇಶವನ್ನು ವಿಶ್ವಸಂಸ್ಥೆಯ ಈ ನಿರ್ಣಯ ಮತ್ತಷ್ಟು ಬಲಪಡಿಸಿದೆ.

VIJYA DUMBI KANNADA DAILY EDITED,PUBLISHED AND OWNED BY,VIJYA PRiNTED AT MANJESHA,U#74,4TH,MAIN,7TH,CROSS,NEARCHOWDESHARI TEMPALE KAVERINAGARA,MAHADEVAPURA,POST BANGALORU KARNATAKAPUBLISHED Hosapalya Byrasandra Modalakote Po , Nelamangala to bengaluru rurala Karnataka 562123 EDITOR VIJYA